ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 40 ಸಂಚಿಕೆ- 40 | PAGE- 8 ಪುಟ-8 | ಮಂಗಳವಾರ 18.03.2025 | RS.2/- ಬೆಲೆ 2/-

# ಜನರ ಕಲ್ಯಾಣಕ್ಕೆ ಅಧಿಕಾರ ಬಳಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.17:ನಮ್ಮ ಸರ್ಕಾರ ಮೇ 20 2023ರಲ್ಲಿ ಅಧಿಕಾರಕ್ಕೆ ಬಂದಿದೆ. ಜನರ ಆರ್ಶೀವಾದದರಿಂದ ಜನ 136 ಸ್ಥಾನ ನೀಡುವುದರ ಮೂಲ ಅಧಿಕಾರ ನೀಡಿದ್ದಾರೆ. ಇದೇ ಮೇ 20ಕ್ಕೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷ ಆಗುತ್ತಿದೆ. ಜನ ಅಧಿಕಾರ ಕೊಟ್ಟಮೇಲೆ ಅಧಿಕಾರಕ್ಕೋಸ್ಕರ ಅಧಿಕಾರ ಮಾಡದೇ ಜನರ ಕಲ್ಯಾಣಕ್ಕೆ ಅಧಿಕಾರ ಬಳಕೆ ಮಾಡುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ, ಬಸವಣ್ಣ ಹೇಳಿದಂತೆ ನುಡಿದರೆ ಮುತ್ತಿನ ಹಾರದಂತಿರಬೇಕು, ನುಡಿದರೆ ಲಿಂಗ ಮೆಚ್ಚಿ ಅಹುದಹುದೆನ್ನುವಂತಿರಬೇಕು. ಸದನದಲ್ಲಿ ಮಾತನಾಡಿದರೆ ಜನರ ಅಭಿರುಚಿಯನ್ನು ಹೆಚ್ಚಿಸಬೇಕು. ವಿದ್ಯಾವಂತರು ಸದನಕ್ಕೆ ಬರುತ್ತಿರುವುದರಿಂದ ಚರ್ಚೆಗಳು ಅರ್ಥ ಪೂರ್ಣ ಹಾಗೂ ಆರೋಗ್ಯಕರವಾಗಿರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಮುಖ್ಯಮಂತ್ರಿಗಳು ಉತ್ತರ ನೀಡುತ್ತಾ ರಾಜ್ಯಪಾಲರು ಎರಡು ಸದನಗಳನ್ನು ಉದ್ದೇಶಿಸಿ ಭಾಷಣ ಮಾಡಿದ್ದಾರೆ. ಸಾಂಪ್ರದಾಯಿಕವಾಗಿ ವರ್ಷ ಪ್ರಾರಂಭದ ಮೊದಲ ಅಧಿವೇಶನದ ಪ್ರಾರಂಭದಲ್ಲಿ ರಾಜ್ಯಪಾಲರು ಸರ್ಕಾರದ ಅಭಿವೃದ್ಧಿಗಳು, ಸಾಧನೆಗಳೇನು, ಗುರಿಗಳೇನು ಎಂಬುದನ್ನು ಒಂದು ಗಂ-ಟೆಗೂ ಮೀರಿ ಸುದೀರ್ಘವಾಗಿ ಮಾತನಾಡಿ ಸರ್ಕಾರದ ಸಾಧನೆಗಳನ್ನು ಓದಿ ಹೇಳಿದ್ದಾರೆ ವಿಧಾನಸಭೆಯ ಹಿರಿಯ ಸದಸ್ಯ ಟಿ.ಬಿ. ಜಯಚಂದ್ರ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯವನ್ನು ಸಲ್ಲಿಸಿದ್ದಾರೆ. ವಿಧಾನ ಸಭೆಯ ನೂತನ ಸದಸ್ಯೆ ನಯನ ಮೋಟಮ್ಮ ರಾಜ್ಯಪಾಲರ ಭಾಷಣವನ್ನು ಅನುಮೋದಿಸಿ ಭಾಷಣ ಮಾಡಿದ್ದಾರೆ.

ರಾಜ್ಯಪಾಲರ ಭಾಷಣಕ್ಕೆ ವಿರೋಧ ಪಕ್ಷದ ನಾಯಕರಾದಿಯಾಗಿ 14 ಜನ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಸದಸ್ಯರು ಮಾತನಾಡಿದ್ದಾರೆ. ರಾಜ್ಯಪಾಲರ ವಂದನಾ ನಿರ್ಣಯದಲ್ಲಿ ಭಾಗವಹಿಸಿದವರಿಗೆ ಅಭಿನಂದನೆ ಸಲ್ಲಿಸಿ, ರಾಜ್ಯಪಾಲರ ಭಾಷಣವನ್ನು ಕೆಲವರು ಟೀಕಿಸಿದ್ದಾರೆ, ಹಲವರು ವಾಸ್ತವಿಕವಾಗಿ ಮಾತನಾಡಿದ್ದಾರೆ, ಕೆಲವರು ಸಮರ್ಥಿಸಿದ್ದಾರೆ,



ಕೆಲವರು ವಿರೋಧಿಸಲೆಂದೇ ವಿರೋಧಿಸಿ ಮಾತನಾಡಿದ್ದಾರೆ. ಅವರೆಲ್ಲರ ಸಲಹೆ ಸೂಚನೆಗಳನ್ನು ಸರ್ಕಾರ ಸ್ವಾಗತಿಸಿ, ಸರ್ಕಾರದ ನಿಲುವನ್ನು ಸದನಕ್ಕೆ ತಿಳಿಸಿ ವಂದನಾ ನಿರ್ಣಯವನ್ನು ಅಂಗೀಕಾರ ಮಾಡಬೇಕೆಂದು ವಿಧಾನಸಭೆಯಲ್ಲಿ ವಿನಂತಿಸಿದರು.

**ಗ್ಯಾರಂಟಿ ಯೋಜನೆಗಳು ಮುಂದುವರಿಕೆ-ಕೊಟ್ಟಮಾತಿನಂತೆ ನಡೆದುಕೊಂಡಿದ್ದೇವೆ:**

ನಮ್ಮ ಕಾರ್ಯಕ್ರಮಗಳನ್ನು ವಿಶೇಷವಾಗಿ ಗ್ಯಾರಂಟಿ ಯೋಜನೆಗಳನ್ನು ಮಾಧ್ಯಮಗಳು, ಜನರು, ವಿಶ್ವವಿದ್ಯಾನಿಲಯಗಳು, ವಿದ್ವಾಂಸರು ಶ್ಲಾಘಿಸಿದ್ದಾರೆ. ಕ್ಯಾಮರೂನ್ ದೇಶದ ಸುಲೇಮಾನ್ ಹ್ಯಾಂಕ್, ವಿಶ್ವಸಂಸ್ಥೆ ಜನರಲ್ ಬಾಡಿ ಅಧ್ಯಕ್ಷರು ಗ್ಯಾರಂಟಿಗಳನ್ನು ಒಪ್ಪಿಕೊಂಡಿದ್ದಾರೆ, ಮೆಚ್ಚಿಕೊಂಡಿದ್ದಾರೆ. ಕನ್ನಡ ಮತ್ತು ಇಂಗ್ಲೀಷ್ ಪತ್ರಿಕೆಗಳು ಗ್ಯಾರಂಟಿಗಳನ್ನು ಶ್ಲಾಘಿಸಿ ಬರೆದಿರುವುದನ್ನು ಸದನದ ಗಮನಕ್ಕೆ ತಂದು ಗ್ಯಾರಂಟಿ ಯೋಜನೆಗಳಿಂದ ಜನರ ಆತ್ಮವಿಶ್ವಾಸ ಹೆಚ್ಚಿದ್ದು ಮಾತ್ರವಲ್ಲದೇ ಸ್ವಾಭಿಮಾನ ಹೆಚ್ಚಿತ್ತಿದೆ. ಸಾಮಾಜಿಕವಾಗಿ, ಆರ್ಥಿಕವಾಗಿ ಅವರ ಬದುಕು ಸುಧಾರಣೆಯಾಗಲಿದೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ಕೊಟ್ಟ ಮಾತಿನಂತೆ ನಮ್ಮ ಸರ್ಕಾರ ನಡೆದುಕೊಳ್ಳುತ್ತದೆ ಎಂದು ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಉತ್ತರದಲ್ಲಿ ತಿಳಿಸಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಕುರಿತು ಕೇಂದ್ರ ಸರ್ಕಾರದ Indian Institute of Public Administration ಸಂಸ್ಥೆಯ ಅಧ್ಯಕ್ಷರಾದ ಉಪರಾಷ್ಟ್ರಪತಿ ಜಗದೀಪ್ ಧನಕರ್ ಹಾಗೂ ಸಚಿವ ಜಿತೇಂದ್ರ ಸಿಂಗ್ ಪ್ರಶಂಸೆಯ ವರದಿಯನ್ನು ನೀಡಿದ್ದಾರೆ.

ದಿನಾಂಕ 3-1-2025 ರಂದು ಚಂದ್ರಬಾಬು ನಾಯ್ಡು ಅವರ ಸರ್ಕಾರದ ಮಂತ್ರಿಗಳು ಹಾಗೂ ಅಧಿಕಾರಿಗಳು ಗ್ಯಾರಂಟಿ ಯೋಜನೆಗಳ ಕುರಿತು ಅಧ್ಯಯನ ಮಾಡಿ ಹೋಗಿದ್ದಾರೆ. 2-2-2025 ರಂದು ಮಹಾರಾಷ್ಟ್ರದ ಸಾರಿಗೆ ಸಚಿವರಾದ ಪ್ರತಾಪ್ ಸರನಾಯಕ್ ಶಕ್ತಿ ಯೋಜನೆ ಬಗ್ಗೆ ಚರ್ಚಿಸಿ ತೆರಳಿದ್ದಾರೆ. 5-3-2025 ರಂದು ಕೇರಳದಿಂದ ಸಚಿವರು ಬಂದು ಅಧ್ಯಯನ ಮಾಡಿ ಹೋಗಿದ್ದಾರೆ.

ಕೇಂದ್ರ ಸರ್ಕಾರದ Indian Institute of Public Administration ಸಂಸ್ಥೆಯ ಅಧ್ಯಕ್ಷರಾದ ಉಪರಾಷ್ಟ್ರಪತಿ ಜಗದೀಪ್ ಧನಕರ್ ಹಾಗೂ ಸಚಿವ ಜಿತೇಂದ್ರ ಸಿಂಗ್ ಅವರು ಗೃಹಲಕ್ಷ್ಮಿ ಮತ್ತು ಶಕ್ತಿ ಗ್ಯಾರಂಟಿ ಯೋಜನೆಗಳ ಕುರಿತು ಪ್ರಶಂಸೆ ಮತ್ತು ಸಲಹೆ ಕೊಟ್ಟಿದ್ದಾರೆ. ಈ ವರದಿಗಳಿಂದ ಸರ್ಕಾರಕ್ಕೆ ಉಪಯೋಗವಾಗಿದೆ.

ತಪ್ಪುಗಳಿದ್ದರೆ ಸರ್ಕಾರದ ಖಜಾನೆಗೆ ತೊಂದರೆಯಿದ್ದರೆ ಸರ್ಕಾರದ ಗಮನಕ್ಕೆ ತರುವುದು ವಿರೋಧಪಕ್ಷದ ಕೆಲಸ. ಆದರೆ ವಿರೋಧಪಕ್ಷದವರು ಅಭಿರುಚಿ ಹೀನ ಮಾತುಗಳನ್ನಾಡಬಾರದು. ಯೋಜನೆಗಳ ಬಗ್ಗೆ ಸಕಾರಾತ್ಮಕ ಟೀಕೆಗಳನ್ನು ಮಾಡಬೇಕು ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆಗಳಿಗೆ ಫೆಬ್ರವರಿ ವರೆಗೆ ನಾವು, ನಮ್ಮ ಸರ್ಕಾರ ಬರೋಬ್ಬರಿ 76,509 ಕೋಟಿ ರೂಪಾಯಿಗಳನ್ನು ನೀಡಿದೆ. ಗ್ಯಾರಂಟಿ ಯೋಜನೆಗಳಿಂದ ಫಲಾನುಭವಿಗಳಿಗೆ ಇದರಿಂದ ಪ್ರಯೋಜನವಾಗಿದೆ. ಜೂನ್

(2ನೇ ಪುಟ ನೋಡಿ)

WANTED

Staff required for office works and Site Works.
Qualifications: Degree/ B.tech for office
and Civil engineer for site works.
OFFICE NAME: SRI VENKATESHWARA
GOLDEN CITYADDRESS:
1st floor in Gadha complex,
Manik Nagar cross,
Humnabad - M No.7794016767

## ಮಾಣಿಕನಗರಕ್ಕೆ ಶೃಂಗೇರಿ ಶ್ರೀಗಳು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾ.17:ತಾಲೂಕಿನ ಮಾಣಿಕನಗರದಲ್ಲಿರುವ ಮಾಣಿಕಪ್ರಭುಗಳ ದೇವಸ್ಥಾನಕ್ಕೆ ಶೃಂಗೇರಿ ಶಾರದಾ ಪೀಠದ ಪ್ರಸ್ತುತ ಉತ್ತರಾಧಿಕಾರಿ ಶ್ರೀ ಶ್ರೀ ಶ್ರೀ ವಿಧುಶೇಖರ ಭಾರತಿ ತೀರ್ಥ ಸ್ವಾಮಿಜಿ ಅವರು ಮಾ.19 ಹಾಗೂ 20 ರಂದು ಭೇಟಿ ನೀಡುವರು. ಪ್ರತಿವರ್ಷದಂತೆ ನಡೆಯುವ



ಸಪ್ತಾಹ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಾಣಿಕಪ್ರಭುಗಳ ಗದ್ದುಗೆ ದರ್ಶನ ಪಡೆಯಲಿದ್ದಾರೆ.

## ದೈಹಿಕ ಶಿಕ್ಷಕರನ್ನು ಸಹ ಶಿಕ್ಷಕರೆಂದು ಪರಿಗಣಿಸುವ ಕುರಿತು ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ. 17:ದೈಹಿಕ ಶಿಕ್ಷಕರನ್ನು ಸಹ ಶಿಕ್ಷಕರೆಂದು ಪರಿಗಣಿಸುವ ಬಗ್ಗೆ ಪರಿಶೀಲಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿ ತೀರ್ಮಾನಕೈಗೊಳ್ಳಲಾಗುವುದು



(2ನೇ ಪುಟ ನೋಡಿ)

## ಬಟ್ಟೆ ತೊಳೆಯಲು ಹೋದ ಮೂವರು ಮಹಿಳೆಯರ ಜಲಸಮಾಧಿ



ಮಲ್ಲಮ್ಮ ನುಡಿ ವಾರ್ತೆ

ದಾವಣಗೆರೆ:ಮಾ.17: ಬಟ್ಟೆ ತೊಳೆಯಲು ಹೋಗಿದ್ದ ಮೂವರು ಮಹಿಳೆಯರು ಕಾಲು ಜಾರಿ ಕೆರೆಗೆ ಬಿದ್ದು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ ಘಟನೆ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ಲಕ್ಷ್ಮೀಸಾಗರ ಗ್ರಾಮದಲ್ಲಿ ನಡೆದಿದೆ.

ದೀಪಾ (28), ಚಂದನಾ (19), ದೀಪಾ (23) ಸಾವನ್ನಪ್ಪಿದ ಮಹಿಳೆಯರು. ಮಹಿಳೆಯರು ಲಕ್ಷ್ಮೀ ಸಾಗರ ಗ್ರಾಮದ ಹೊಸ ಕೆರೆಯಲ್ಲಿ ಬಟ್ಟೆ ತೊಳೆಯಲು ಹೋಗಿದ್ದರು. ಚನ್ನಗಿರಿ ಅಗ್ನಿಶಾಮಕ ಸಿಬ್ಬಂದಿ ಮೃತದೇಹಗಳನ್ನು ಕೆರೆಯಿಂದ ಮೇಲೆತ್ತಿದ್ದಾರೆ.

ಸ್ಥಳಕ್ಕೆ ತಹಶೀಲ್ದಾರ್ ನಾಗರಾಜ್ ಸೇರಿದಂತೆ ಹಲವು ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸದ್ಯ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ

## ಯುವನಿಧಿ ಯೋಜನೆ ಅಡಿ 10 ಲಕ್ಷ ಫಲಾನುಭವಿಗಳಿಗೆ ಸಹಾಯದ ಗುರಿ: ಶರಣ ಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು :ಮಾ.17: 10 ಲಕ್ಷ ಅಭ್ಯರ್ಥಿಗಳಿಗೆ ಯುವನಿಧಿ ಯೋಜನೆ ಅಡಿ ಸಹಾಯ ಮಾಡುವುದು ಸರ್ಕಾರದ ಗುರಿ ಎಂದು ಸಚಿವ ಶರಣ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಡಿ.ಎಸ್. ಅರುಣ್ ಯುವನಿಧಿ ಯೋಜನೆ ಬಗ್ಗೆ ಪ್ರಶ್ನೆ ಕೇಳಿದರು.

ಡಿ.ಎಸ್. ಅರುಣ್ ಮಾತಾಡಿ ಯುವನಿಧಿ ಯೋಜನೆ ಅಡಿ ಐದೂವರೆ ಲಕ್ಷ ಅಭ್ಯರ್ಥಿಗಳಿಗೆ 450 ಕೋಟಿ ಹಣ ಖರ್ಚು ಮಾಡೋದಾಗಿ ಸರ್ಕಾರ ಹೇಳಿತ್ತು. ಆದರೆ 5.5 ಲಕ್ಷ ವಿದ್ಯಾರ್ಥಿಗಳು ಪೈಕಿ 2.5 ಲಕ್ಷ ಜನ ಮಾತ್ರ ಅರ್ಜಿ ಹಾಕಿದ್ದಾರೆ. ಅದರಲ್ಲೂ 1.74 ಲಕ್ಷ ಅರ್ಜಿಗಳಿಗೆ ಮಾತ್ರ ಹಣ ಹಾಕಲಾಗಿದೆ. ಯುವನಿಧಗೆ



ಅರ್ಜಿ ಹಾಕೋದು ಹೇಗೆ ಅಂತ ಅಭ್ಯರ್ಥಿಗಳಿಗೆ ಗೊತ್ತಿಲ್ಲ. ಯುವನಿಧಿ ಯೋಜನೆ ಅಡಿ ಕೊಟ್ಟ ಹಣ ಸರಿಯಾಗಿ ಉಪಯೋಗ ಆಗ್ತಿದೆಯಾ ಅಂತ ಮೌಲ್ಯಮಾಪನ ಆಗಬೇಕು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಯೋಜನೆ ಬಗ್ಗೆ ಮಾಹಿತಿ ಇಲ್ಲ. ಅರ್ಜಿ ತುಂಬೋವಾಗ ಸಮಸ್ಯೆ ಅಂತ ಬರ್ತಿದೆ. ಅನೇಕ ವಿವಿಗಳಲ್ಲಿ ಅಂಕಪಟ್ಟಿ ಕೊಡ್ತಿಲ್ಲ. ಅಂಕಪಟ್ಟಿ ಇಲ್ಲದೆ ಹೋದ್ರೆ ಯೋಜನೆಗೆ ಅರ್ಜಿ ಹಾಕಲು ಆಗೊಲ್ಲ. ಈ ಬಗ್ಗೆ ಕ್ರಮವಾಗಬೇಕು ಅಂತ ಒತ್ತಾಯ ಮಾಡಿದರು.

ಇದಕ್ಕೆ ಸಚಿವ ಶರಣು ಪ್ರಕಾಶ್ ಪಾಟೀಲ್ ಉತ್ತರ ನೀಡಿ, ಯುವನಿಧಿ ಯೋಜನೆ ಅಡಿ ಈವರೆಗೆ 2,62,20,7 ಅಭ್ಯರ್ಥಿಗಳು ನೋಂದಣಿ ಮಾಡಿದ್ದಾರೆ. ಇದರಲ್ಲಿ 1,74,170 ಫಲಾನುಭವಿಗಳಗೆ ಯುವನಿಧಿ ಹಣ ಹಾಕಲಾಗಿದೆ. 16,648 ಫಲಾನುಭವಿಗಳಿಗೆ ಹಣ ಹಾಕೋದು ಬಾಕಿ ಇದೆ. ಎಷ್ಟೇ ಜನ ನೋಂದಣಿ ಆದರು ನಾವು ಅವರಿಗೆ ಹಣ ಕೊಡ್ತೀವಿ. ಯುವನಿಧಿ ಈಗ ಪ್ರಾರಂಭಿಕ ಹಂತದಲ್ಲಿ ಇದೆ. ನಮ್ಮ ಟಾರ್ಗೆಟ್ 10 ಲಕ್ಷ ಅಭ್ಯರ್ಥಿಗಳಿಗೆ ಕೊಡಬೇಕು ಅಂತ ಇದೆ. ಅರ್ಜಿ ಹಾಕೋಕೆ ಮುಕ್ತ ಅವಕಾಶ ಇದ್ದು ಸೇವಾ ಸಿಂಧು ಪೋರ್ಟಲ್ ನಲ್ಲಿ

(2ನೇ ಪುಟ ನೋಡಿ)

## ಚಾಲಕನ ನಿಯಂತ್ರಣ ತಪ್ಪಿ ಕಾರು ಮರಕ್ಕೆ ಡಿಕ್ಕಿ : ಮೂವರು ಸಾವು

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಮಾ.17: ಚಾಲಕನ ನಿಯಂತ್ರಣ ತಪ್ಪಿ ಕಾರು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, ಓರ್ವನ ಸ್ಥಿತಿ ಗಂಭೀರವಾಗಿರುವ ಘಟನೆ ವಿಜಯಪುರ ಜಿಲ್ಲೆಯ ಉಕ್ಕಲಿ ಗ್ರಾಮದ ಹೆಗಡಿಹಾಳ ಕ್ರಾಸ್ ಬಳಿ ನಡೆದಿದೆ. ಮೃತರನ್ನು ಉತ್ನಾಳ ಗ್ರಾಮದ ನಿವಾಸಿಗಳಾದ ಭೀರಪ್ಪ ಗೋಡೆಕರ್ (26), ಹಣಮಂತ ಕಡ್ಲಿಮಟ್ಟಿ (32) ಎಂದು ಗುರುತಿಸಲಾಗಿದೆ. ಇನ್ನೋರ್ವನ ಗುರುತು ಪತ್ತೆಯಾಗಿಲ್ಲ. ಗಂಭೀರವಾಗಿ ಗಾಯಗೊಂಡವ ಉಮೇಶ್ (30) ಎಂದು ಗುರುತಿಸಲಾಗಿದೆ.



ಜಿಲ್ಲೆಯ ಉಕ್ಕಲಿ ಗ್ರಾಮದ ಹೆಗಡಿಹಾಳ ಕ್ರಾಸ್ ಬಳಿ ನಾಲ್ವರು ಸ್ವಿಫ್ಟ್ ಕಾರಿನಲ್ಲಿ ಬರುತ್ತಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿದ್ದು, ಕಾರು ಮರಕ್ಕೆ ಡಿಕ್ಕಿ ಹೊಡೆದಿದೆ. ಪರಿಣಾಮ ಕಾರು ಪಲ್ಟಿ ಹೊಡೆದು ಮೂವರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಇನ್ನೋರ್ವನ ಸ್ಥಿತಿ ಗಂಭೀರವಾಗಿದ್ದು, ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದು, ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಿಗೂಢವಾಗಿ ಸಾವನ್ನಪ್ಪುತ್ತಿವೆ ಕಾಗೆಗಳು ಬೀದರ್ ನಲ್ಲಿ ಹೆಚ್ಚಿದ ಹಕ್ಕಿಜ್ವರದ ಆತಂಕ!

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ರಾಜ್ಯದಲ್ಲಿ ಹಕ್ಕಿ ಜ್ವರದ ಭೀತಿ ಹೆಚ್ಚುತ್ತಲೇ ಇದ್ದು, ಇದರ ನಡುವೆಯೇ ಬೀದರ್ ನಲ್ಲಿ ಕೆಲ ದಿನಗಳಿಂದ ಕಾಗೆಗಳು ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದು, ಆತಂಕ ಇನ್ನಷ್ಟು ಹೆಚ್ಚಾಗಿದೆ. ಕಳೆದ ಕೆಲ ದಿನಗಳಿಂದ ಕಾಗೆಗಳು ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದು, ಇದೀಗ ಇಂದು



ಭಾಲ್ಕಿ ಪಟ್ಟಣದ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಎರಡು ಕಾಗೆಗಳು ಮೃತಪಟ್ಟಿದ್ದು, ಜನರಲ್ಲಿ ಇನ್ನಷ್ಟು ಆತಂಕ ಉಂಟಾಗಿದೆ. ಕಳೆದ ತಿಂಗಳಷ್ಟೇ ಭಾಲ್ಕಿ ತಾಲೂಕಿಗೆ ಹೊಂದಿಕೊಂಡಿರುವ ಮಹಾರಾಷ್ಟ್ರದ ಉದ್ಗೀರನಲ್ಲಿ ಮೊದಲು ಹಕ್ಕಿಜ್ವರ ಕಾಣಿಸಿಕೊಂಡ ಹಿನ್ನಲೆ ನೂರಾರು ಕಾಗೆಗಳು ಸಾವನ್ನಪ್ಪಿದ್ದವು. ಇದೀಗ ದಿನನಿತ್ಯ ಕಾಗೆಗಳು ಸಾಯುತ್ತಿದ್ದು, ಹಕ್ಕಿ ಜ್ವರ ಇಲ್ಲಿಯೂ ವ್ಯಾಪಿಸಿದೆ ಎಂದು ಜನರು ಆತಂಕಕ್ಕೀಡಾಗಿದ್ದಾರೆ. ಸದ್ಯಗಡಿ ಭಾಗದಲ್ಲಿ ಮಹಾರಾಷ್ಟ್ರದಿಂದ ಅಕ್ರಮವಾಗಿ ಕೋಳಿಗಳನ್ನು ಸಾಗಾಟ ಮಾಡುತ್ತಿದ್ದು, ಪಶು ವೈದ್ಯಾಧಿಕಾರಿಗಳು ಆದಷ್ಟು ಬೇಗ ಸಾವನ್ನಪ್ಪುತ್ತಿರುವ ಕಾಗೆಗಳನ್ನು

ಪರಿಶೀಲಿಸಿ ಹಕ್ಕಿ ಜ್ವ-ರದ ಆತಂಕವನ್ನು ದೂರು ಮಾಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ನಿಯಂತ್ರಣ ತಪ್ಪಿ ಕಾರು ಪಲ್ಟಿ ಸ್ಥಳದಲ್ಲೇ ಯುವಕನ ದುರ್ಮರಣ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 17 : ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿ ಬಿದ್ದ ಪರಿಣಾಮ ಕಾರಿನಲ್ಲಿದ್ದ ಯುವಕ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಬೀದರ್ ಜಿಲ್ಲೆಯ ಚಿಟಗುಪ್ಪ ತಾಲೂಕಿನ ಉಡುಬಾಳ ಗ್ರಾಮದ ಕ್ರಾಸ್ ಬಳಿ ನಡೆದಿದೆ. ಉಮೇಶ್ (26) ಮೃತ ಯುವಕ. ಅತಿಯಾದ ವೇಗವೇ ಘಟನೆಗೆ ಕಾರಣ ಎನ್ನಲಾಗಿದೆ. ಉಡುಬಾಳ ಗ್ರಾಮದಿಂದ ಮನ್ನಾಕೇಳಿ ಗ್ರಾಮಕ್ಕೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ.



ಬೆಮ್ಮಳಖೇಡಾ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಒಂದನೇ ಪುಟದಿಂದ

# ಕಲ್ಯಾಣಕ್ಕೆ ಅಧಿಕಾರ ಬಳಕೆ

11, 2023 ರಿಂದ 410 ಕೋಟಿ ಜನ ಶಕ್ತಿ ಯೋಜನೆಯಡಿ ಓಡಾಡಿದ್ದಾರೆ. 2024–25 ಕ್ಕೆ 52,0009 ಕೋಟಿ ಇಟ್ಟು, 41509 ಕೋಟಿ ರೂಪಾಯಿ ವೆಚ್ಚ ಮಾಡಿದ್ದೇವೆ. ಖಜಾನೆ ಖಾಲಿ ಯಾಗಿದೆ ಎಂಬ ಮಾತು ಸತ್ಯಕ್ಕೆ ದೂರ ಅಂಕಿ ಅಂಶಗಳ ಮೂಲಕ ಸಭೆಗೆ ತಿಳಿಸಿ , 1.26 ಕೋಟಿ ಕುಟುಂಬಗಳಿಗೆ ಯೋಜನೆಗಳು ತಲುಪುತ್ತಿದ್ದು, ಕೊಟ್ಟ ಮಾತಿನಂತೆ ನಡೆದಿದ್ದೇವೆ. ಯಾವ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ಗ್ಯಾರಂಟಿ ಯೋಜನೆಗಳಿಂದ ಬಡವರಲ್ಲಿ ಆತ್ಮವಿಶ್ವಾಸ ಹೆಚ್ಚಿದ್ದು ಮಾತ್ರವಲ್ಲ, ಸ್ವಾಭಿಮಾನ ಹೆಚ್ಚುತ್ತಿದೆ. ಜನರು ಸಾಮಾಜಿಕವಾಗಿ ಆರ್ಥಿಕವಾಗಿ ನಿರ್ಭಯವಾಗಿ, ಅವರ ಬದುಕು ಸುಧಾರಣೆಯಾಗಿದೆ. ಸಮಾನತೆಯ ಭಾವ ಉಂಟಾಗುತ್ತಿದೆ ಎಂದರು.

ದೇಶದ 100 ಕೋಟಿ ಜನರಿಗೆ ಕೊಳ್ಳುವ ಆಯ್ಕೆಗಳೇ ಇಲ್ಲ ಎಂದು ವರದಿ ಬಂದಿತ್ತು. 20.5 ಕೋಟಿ ಕುಟುಂಬಗಳು ಅಂದರೆ ನೂರು ಕೋಟಿ ಜನರ ವಾರ್ಷಿಕ ಆದಾಯ 87000 ರೂಪಾಯಿಗಿಂತ ಕಡಿಮೆ ಇದೆ ಎನ್ನುವ ವರದಿ ಬಂದಿದೆ. ಅಸಮಾನತೆ ಅಷ್ಟರ ಮಟ್ಟಿಗೆ ಇದೆ. ದೇಶದಲ್ಲಿ ಆರ್ಥಿಕ, ಸಾಮಾಜಿಕ ಅಸಮಾನತೆ ಇರುವವರೆಗೆ ದೇಶಕ್ಕೆ ನಿಜವಾದ ಸ್ವಾತಂತ್ರ್ಯ ಸಿಗುವುದಿಲ್ಲ. ಕೊಳ್ಳುವ ಶಕ್ತಿಯನ್ನು ಹೆಚ್ಚು ಮಾಡುವ ಸಾರ್ವತ್ರಿಕ ಮೂಲ ಆದಾಯ ತತ್ವ ಅಗತ್ಯ. ಆರ್ಥಿಕ, ಸಾಮಾಜಿಕ ಶಕ್ತಿಯನ್ನು ಜನರಲ್ಲಿ ತುಂಬಿದರೆ ಜನರ ಹಾಗೂ ರಾಜ್ಯದ ಅಭಿವೃದ್ಧಿ ಸಾಧ್ಯ. ನಾವು ಸಮಾಜದ 90% ಜನರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ತುಂಬಿದ್ದೇವೆ. 94 ರಲ್ಲಿ 34% ಇದ್ದ ಶ್ರೀಮಂತರ ಸಂಖ್ಯೆ ಈಗ 57% ಗೆ ಹೆಚ್ಚಾಗಿದೆ. 50% ಜನರಿಗೆ ಇರುವ ಆರ್ಥಿಕ ಶಕ್ತಿ 15%ಗೆ ಕುಸಿದಿದೆ. ಇದು ಆತಂಕಕಾರಿ ಸಂಗತಿ. ಅಸಮಾನತೆಯನ್ನು ತೊಡೆದು ಹಾಕಲು ನಾವು ಪ್ರಯತ್ನ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು.

ವಿರೋಧಪಕ್ಷಅಧಿಕಾರದಲ್ಲಿದ್ದಾಗ ಕ್ಯಾಪಿಟಲ್ ಹೂಡಿಕೆಗಳಿಗೆ 2,70,695 ಕೋಟಿ ಕಾಮಗಾರಿಗಳನ್ನು ಅನುದಾನ ಒದಗಿಸದೇ ತೆಗೆದುಕೊಳ್ಳಲಾಗಿದೆ. ಮುಖ್ಯಮಂತ್ರಿಗಳ ವಿಶೇಷ ಅನುದಾನದ ಮೂಲಕ 1,66,426 ಕೋಟಿ ನೀಡಲಾಗಿದೆ. 36 ಸಾವಿರ ಕೋಟಿ ಬಾಕಿ ಬಿಲ್ಲುಗಳು ಬಾಕಿ ಉಳಿದಿರುವುದು ವಿರೋಧಪಕ್ಷದಿಂದ ಎಂದು ತಿಳಿಸಿ ಲೆಕ್ಕ ದಾಖಲೆ ಮಂಡಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಲಾವಿದರ ಮಾಶಾಸನ ಹೆಚ್ಚಳ ಮಾಡಿರುವುದಲ್ಲದೇ 275 ಕೋಟಿ ಅನುದಾನವನ್ನು ನೀಡಲಾಗಿದೆ ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು

ಎಸ್.ಸಿ.ಪಿ/ಟಿಎಸ್ ಪಿ– ಕಾಯ್ದೆ ಜಾರಿ ಕರ್ನಾಟಕ ಎರಡನೇ ರಾಜ್ಯ :

ದೇಶದಲ್ಲಿ ಎಲ್ಲಿಯವರೆಗೆ ಅಸಮಾನತೆ ಮುಂದುವರೆಯುತ್ತದೆ ಅಲ್ಲಿಯವರೆಗೆ ಸ್ವಾತಂತ್ರ್ಯ ಬಂದಿದ್ದು ಸಾರ್ಥಕವಾಗುವುದಿಲ್ಲ. ಕಟ್ಟಕಡೆಯ ಮನುಷ್ಯ ವೈರುಧ್ಯತೆ ಇರುವ ಸಮಾಜಕ್ಕೆ ನಾವು ಕಾಲಿಡುತ್ತಿದ್ದು, ರಾಜಕೀಯ ಸ್ವಾತಂತ್ರ್ಯ ದೊರೆತರೆ ಸಾಲದು, ನಮಗೆ ಆರ್ಥಿಕ ಸಾಮಾಜಿಕ ಸ್ವಾತಂತ್ರ್ಯ ಸಿಕ್ಕಿಲ್ಲ. ಅದು ಸಿಗಬೇಕಾದರೆ ಕಟ್ಟ ಕಡೆಯ ವ್ಯಕ್ತಿಯನ್ನು ಮುಖ್ಯವಾಹಿನಿಗೆ ಕೊಂಡೊಯ್ಯುವ ಕೆಲಸವಾಗಬೇಕು. ಎಂದು ಅಂಬೇಡ್ಕರ್ ಹೇಳಿದ್ದಾರೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಎಸ್ ಸಿ ಎಸ್ ಪಿ/ ಟಿ ಎಸ್.ಪಿ ಕಾಯ್ದೆಯನ್ನು ಜಾರಿಗೆ ತಂದಿರುವ ರಾಜ್ಯಗಳಲ್ಲಿ ನಮ್ಮ ರಾಜ್ಯ ಎರಡನೇ ರಾಜ್ಯವಾಗಿದೆ ಎಂದು ತಿಳಿಸಿದರು.

ಸಂವಿಧಾನದ 46 ನೇ ಪರಿಚ್ಛೇಧವು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ವಿಶೇಷವಾಗಿ ಶೈಕ್ಷಣಿಕ , ಆರ್ಥಿಕ ಕಾರ್ಯಕ್ರಮಗಳನ್ನು ನೀಡಬೇಕು ಎಂದು ತಿಳಿಸಿದೆ. ಆಂಧ್ರ ಪ್ರದೇಶ ಮೊಟ್ಟ ಮೊದಲ ಬಾರಿಗೆ ಎಸ್ ಸಿ ಎಸ್ ಪಿ/ ಟಿ ಎಸ್.ಪಿ ಕಾಯ್ದೆ ಜಾರಿಗೆ ತಂದಿದ್ದು, ನಂತರ ಅದನ್ನು ಕರ್ನಾಟಕ 2013 ರಲ್ಲಿ ಜಾರಿಗೆ ತಂದಿತು. ಈಗ ತೆಲಂಗಾಣದಲ್ಲಿ ಕೂಡ ಜಾರಿಗೆ ಬಂದಿದ್ದು, ಇಡೀ ದೇಶದಲ್ಲಿ ಬೇರೆಲ್ಲೂ ಈ ಕಾಯ್ದೆ ಇಲ್ಲ. ಕಾಯ್ದೆ ಬಂದ ನಂತರ ರಾಜ್ಯದಲ್ಲಿ 261274 ಕೋಟಿ ವೆಚ್ಚ ಮಾಡಲಾಗಿದೆ. ಬಿಜೆಪಿ ಅಧಿಕಾರದಲ್ಲಿದ್ದಾಗ ಒಟ್ಟು 5 ವರ್ಷಗಳಲ್ಲಿ ನೀಡಿದ್ದ 35464 ಕೋಟಿ, ಅನುದಾನದಲ್ಲಿ 29452 ಕೋಟಿ ವೆಚ್ಚ ಮಾಡಿದ್ದಾರೆ, ನಾಲ್ಕು ವರ್ಷಗಳಲ್ಲಿ 1,80,000 ಕೋಟಿ ವೆಚ್ಚ ಮಾಡಿದ್ದೇವೆ. ದಲಿತರ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸಿಲ್ಲ ಎಂದು ಮುಖ್ಯಮಂತ್ರಿ ಸ್ಪಷ್ಟನೆ ನೀಡಿದರು.

ದಲಿತ ಸಮುದಾಯಕ್ಕೆ ಕಾಂಗ್ರೆಸ್ ಸರ್ಕಾರ 7.46ರಷ್ಟು ಹಣ ಮೀಸಲಿಟ್ಟು ಖರ್ಚು ಮಾಡಿದೆ. ಈ ಕಾಯ್ದೆ ಬಂದ ನಂತರ ಜನಸಂಖ್ಯೆ ಅನುಸಾರವಾಗಿ 17.15% ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ–6.95% ಎರಡೂ ಸೇರಿ 24.1% ಇದ್ದಾರೆ. ಯೋಜನೆಯ ಹಣದಲ್ಲಿ 24.1% ಕೊಡಲೇಬೇಕು. ಅಷ್ಟು ಅನುದಾನವನ್ನು ಖರ್ಚು ಮಾಡಬೇಕು. ಒಂದು ವೇಳೆ ಹಣವನ್ನು ಖರ್ಚು ಮಾಡದೆ ಹೋದರೆ ಅಧಿಕಾರಿಯ ಮೇಲೆ ಕ್ರಮ ತೆಗೆದುಕೊಳ್ಳಬಹುದು. ಈ ವರ್ಷ ಖರ್ಚು ಮಾಡಲು ಸಾಧ್ಯವಾಗದಿದ್ದರೆ ಮುಂದಿನ ವರ್ಷಕ್ಕೆ ಅದು ಸೇರಿಕೊಳ್ಳುತ್ತದೆ. 39121 ಕೋಟಿ ಕಳೆದ ವರ್ಷ ಮೀಸಲಿಟ್ಟಿದ್ದು, ಈ ಸಾಲಿಗೆ 42018 ಕೋಟಿ ಮೀಸಲಿಡಲಾಗಿದೆ. ಕಾಯ್ದೆಯನ್ನು ಸಂವಿಧಾನದ ಆಶಯಗಳನ್ನು ಈಡೇರಿಸಲೆಂದು ರೂಪಿಸಲಾಗಿದೆ. ಕಾಯ್ದೆ ಬಂದ ನಂತರ ಕರ್ನಾಟಕದಲ್ಲಿ ಈ ವರ್ಷ 371273 ಕೋಟಿ ರೂ.ಗಳ ಬಜೆಟ್ ನಲ್ಲಿ 27674 ಎಸ್.ಸಿ. ಪಿ / ಟಿ.ಎಸ್.ಪಿ ಗಾಗಿ ಶೇ. 7.46% ಮೀಸಲಿಟ್ಟಿದೆ. ಗುಜರಾತ್ ನಲ್ಲಿ 3,70,000 ಹಣ ಬಜೆಟ್ ನಲ್ಲಿ ಮೀಸಲಿಟ್ಟಿದ್ದು, ಎಸ್.ಸಿ. ಪಿ / ಟಿ ಎಸ್ ಪಿ ಗಾಗಿ ಶೇ 2.38% ಮೀಸಲಿಟ್ಟಿದ್ದಾರೆ. ಮಹಾರಾಷ್ಟ್ರದಲ್ಲಿ ಬಜೆಟ್ 612293 ಇದ್ದಾರೆ, 187650 3.6% ಇಟ್ಟಿದೆ.

ಇಡೀ ದೇಶದಲ್ಲಿ ಎಸ್ ಸಿ/ ಎಸ್ ಟಿ ಗಳ ಜನಸಂಖ್ಯೆ 2011ರ ಜನಗಣತಿ ಪ್ರಕಾರ ಶೇ16.6% ಎಸ್.ಸಿ ಹಾಗೂ ಶೇ 8.6% ಎಸ್.ಟಿ ಇದ್ದು, ಎರಡೂ ಸೇರಿ ಒಟ್ಟು ಶೇ27.2 % ಇದ್ದಾರೆ. ಇವರ ಜನಸಂಖ್ಯೆಗೆ ಅನುಗುಣವಾಗಿ ಹಿಂದಿನ ಸರ್ಕಾರರು ಖರ್ಚು ಮಾಡಲಿಲ್ಲ. ಕೇವಲ ಶೇ2.87% ಖರ್ಚು ಮಾಡಿದ್ದಾರೆ. ದೇಶದಲ್ಲಿ ಪ.ಜಾ16.6% ಪ.ವರ್ಗ 8.6% ಸೇರಿ ಒಟ್ಟು 25.2% ಇದ್ದು ಕೇವಲ 2.87% ವೆಚ್ಚ ಮಾಡಿದ್ದಾರೆ. ಕರ್ನಾಟಕ ಮಾದರಿಯಲ್ಲೇ ಕೇಂದ್ರ ಸರ್ಕಾರ ಎಸ್.ಸಿ.ಪಿ/ ಟಿ.ಎಸ್.ಪಿ ಕಾಯ್ದೆ ಜಾರಿ ಮಾಡಲಿ ಎಂದು ಸರ್ವಾನುಮತದ ನಿರ್ಣಯ ಮಾಡೋಣ ಎಂದು ಕರೆ ನೀಡಿದರು. ಕೇಂದ್ರ ಸರ್ಕಾರ 4820512 ಕೋಟಿ ಬಜೆಟ್ ಗಾತ್ರದಲ್ಲಿ ಎಸ್.ಸಿ.ಪಿ / ಟಿ.ಎಸ್.ಪಿ ಗಾಗಿ 138368 ಇದ್ದು 2.87% ಮೀಸಲಿಟ್ಟಿದೆ.

ಕೇಂದ್ರದಿಂದ ತೆರಿಗೆ ಹಂಚಿಕೆಯಲ್ಲಿ ಅನ್ಯಾಯ :

15 ನೇ ಹಣಕಾಸು ಆಯೋಗದ ಅಧ್ಯಕ್ಷರು 11495 ಕೋಟಿ ಅನುದಾನವನ್ನು ರಾಜ್ಯಕ್ಕೆ ನೀಡಬೇಕೆಂದು ಶಿಫಾರಸ್ಸು ಮಾಡಿದರು. ಆದರೆ ಇದೂವರೆಗೂ ರಾಜ್ಯದ ಪಾಲು ನೀಡದೆ ಅನ್ಯಾಯವಾಗಿದೆ. ಕೇಂದ್ರ ಸರ್ಕಾರ 72 ಸಾವಿರ ಕೊಟ್ಟರೆ ರಾಜ್ಯ ಸರ್ಕಾರ 42 ಸಾವಿರ ಕೊಡುತ್ತದೆ. ಕರ್ನಾಟಕ 2025–26 ನೇ ಸಾಲಿಗೆ 5 ಲಕ್ಷ ಕೋಟಿ ರೂಪಾಯಿ ತೆರಿಗೆ ಕೊಡುತ್ತಿದ್ದೇವೆ. ನಮಗೆ ಅಂದಾಜು 51 ಸಾವಿರ ಕೋಟಿ ವಾಪಸ್ಸು ಬರಬೇಕಾಗುತ್ತದೆ ತೆರಿಗೆ ಹಂಚಿಕೆಯಲ್ಲಿ ಅನ್ಯಾಯವಾಗಿದೆ. ನಿರ್ಮಲಾ ಸೀತಾರಾಮನ್ ಅವರನ್ನು ನಮ್ಮ ರಾಜ್ಯಕ್ಕೆ ಅನ್ಯಾಯ ಮಾಡಬೇಡಿ ಎಂದು, ರಾಜ್ಯಕ್ಕೆ ಬರಬೇಕಾದ ಅನುದಾನವನ್ನು ಒದಗಿಸಿ ಎಂದು ಮೂರು ಸಾರಿ ಭೇಟಿಯಾಗಿ ಮನವಿ ಮಾಡಿದ್ದರೂ, ಬಜೆ???ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5300 ಘೋಷಿಸಿದ್ದರೂ ಒಂದು ರೂಪಾಯಿ ಅನುದಾನ ಬಂದಿಲ್ಲ ಎಂದು ವಿಧಾನಸಭೆಗೆ ತಿಳಿಸಿದರು.

ಭಾರತೀಯ ರೈಲ್ವೆ ಕೇಂದ್ರ ಸರ್ಕಾರದ ಸುಪರ್ದಿಗೆ ಬರುತ್ತದೆ. ಆದ್ರೂ ರೈಲ್ವೆ ಯೋಜನೆಗೆ ರಾಜ್ಯ ಸರ್ಕಾರ ಉಚಿತ ಸ್ಥಳವನ್ನು ಒದಗಿಸುತ್ತದೆ. 50% ವೆಚ್ಚವನ್ನು ರಾಜ್ಯ ಸರ್ಕಾರ ವಹಿಸಿಕೊಳ್ಳುತ್ತದೆ. ಲಾಭ ಪೂರ್ತಿ ಕೇಂದ್ರ ಸರ್ಕಾರವೇ ಪಡೆಯುತ್ತದೆ ಎಂದು ವಿಧಾನಸಭೆಗೆ ತಿಳಿಸಿದರು.

# ಸಹಾಯದ ಗುರಿ: ಶರಣ ಪ್ರಕಾಶ್ ಪಾಟೀಲ್

ಅರ್ಜಿ ಹಾಕಬಹುದು ಅಂತ ತಿಳಿಸಿದರು.

1,74,170 ಅಭ್ಯರ್ಥಿಗಳಿಗೆ ಯುವನಿಧಿ ಯೋಜನೆ ಅಡಿ ಹಣ ಹಾಕಲಾಗ್ತಿದೆ. ಡಿಗ್ರಿ ಮುಗಿಸಿ 6 ತಿಂಗಳು ಆಗಬೇಕು. ಆದಾದ ನಂತರ ಹಣ ಪಾವತಿ ಆಗಲಿದೆ.

ಯುವನಿಧಿ ಯೋಜನೆ ಅಡಿ ಕೊಡ್ತಿರೋ ಹಣ ಸರಿಯಾಗಿ ಬಳಕೆ ಆಗ್ತಿದೆಯಾ ಅಂತ ಮೌಲ್ಯಮಾಪನ ಮಾಡಲಾಗ್ತಿದೆ. ಮೌಲ್ಯಮಾಪನಕ್ಕೆ ಬೇಕಾದ ಎಲ್ಲಾ ಕ್ರಮಗಳನ್ನ ತೆಗೆದುಕೊಳ್ಳಲಾಗಿದೆ. ಅಭ್ಯರ್ಥಿಗಳು ಹಣ ಬೇಕಾ ಬೇಡಾ ಅಂತ ಮಾಹಿತಿ ಕೊಡಲು

ಈ ಹಿಂದೆ ಪ್ರತಿ ತಿಂಗಳು ಮಾಹಿತಿ ಕೊಡಬೇಕಾಗಿತ್ತು. ಈ ತಿಂಗಳಿಂದ 3 ತಿಂಗಳಿಗೊಮ್ಮೆ ಅಭ್ಯರ್ಥಿಗಳು ಮಾಹಿತಿ ಅಪ್ ಲೋಡ್ ಮಾಡಲು ಅವಕಾಶ ಕೊಡಲಾಗ್ತಿದೆ. ನಮ್ಮ ಸರ್ಕಾರದ ಬದ್ಧತೆ ಇದೆ. ನಾವು ಕೊಟ್ಟಂತೆ ಯುವನಿಧಿ ಯೋಜನೆ ಅನುಷ್ಠಾನ ಮಾಡ್ತೀವಿ ಅಂತ ತಿಳಿಸಿದರು.

# ಸಹ ಶಿಕ್ಷಕರೆಂದು ಪರಿಗಣಿಸುವ ಕುರಿತು ಪರಿಶೀಲನೆ

ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ತಿಳಿಸಿದರು.ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ವಿಧಾನ ಪರಿಷತ್ ಸದಸ್ಯ ರಾಮೋಜಿಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳು ಬೇರೆ ಬೇರೆ ಆಗಿರುತ್ತದೆ. ಶಾಲಾ ಶಿಕ್ಷಣ ಇಲಾಖೆಯ ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಗ್ರೂಪ್ ಬಿ ಮತ್ತು ಮುಖ್ಯ ಶಿಕ್ಷಕರು / ಉಪ ಪ್ರಾಂಶುಪಾಲರು ವೃಂದದ ಹುದ್ದೆಗೆ ಬಡ್ತಿಗೆ, ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದವು ಪೋಷಕ ವೃಂದವಾಗಿರುತ್ತದೆ. ಮುಖ್ಯ ಶಿಕ್ಷಕರ ವೃಂದಕ್ಕೆ, ವೃಂದ ಮತ್ತು ನೇಮಕಾತಿ ನಿಯಮದಂತೆ ನಿಗದಿಪಡಿಸಿರುವ ವಿದ್ಯಾರ್ಹತೆ ಎಂದರೆ ಪದವಿ ಜೊತೆಗೆ ಶೈಕ್ಷಣಿಕ ಆಡಳಿತಕ್ಕೆ ಅಗತ್ಯ ಇರುವ ಬಿ.ಎಡ್ ಪದವಿ. ದೈಹಿಕ ಶಿಕ್ಷಣ ಶಿಕ್ಷಕರು ಬಿ.ಎಡ್. ಪದವಿಯನ್ನು ಹೊಂದಿರುವುದಿಲ್ಲ.

ಮುಖ್ಯ ಶಿಕ್ಷಕರು ಬೋಧನೆಯಲ್ಲಿ ಪ್ರಾವೀಣ್ಯತೆ ಹಾಗೂ ಅನುಭವವನ್ನು ಹೊಂದಿರುತ್ತಾರೆ. ಸಹ ಶಿಕ್ಷಕರ ಅನುಪಸ್ಥಿತಿಯಲ್ಲಿ ವಿಷಯ ಬೋಧನೆಯನ್ನು ಮಾಡುತ್ತಾರೆ. ಆದರೆ ದೈಹಿಕ ಶಿಕ್ಷಕರಿಗೆ ವಿಷಯ ಬೋಧನೆ ತರಬೇತಿ ಆಗಿಲ್ಲದೆ ಇರುವುದರಿಂದ ಸಹ ಶಿಕ್ಷಕರ ಅನುಪಸ್ಥಿತಿಯಲ್ಲಿ ವಿಷಯ ಬೋಧನೆಯನ್ನು ನಿರ್ವಹಿಸಲು ಸಾಧ್ಯವಾಗುವುದಿಲ್ಲ. ಮುಖ್ಯ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು / ಹಿರಿಯ ಉಪನ್ಯಾಸಕರು ನಿರ್ದೇಶಕರು ಮಧ್ಯಾಹ್ನ ಯೋಜನೆ ಹಾಗೂ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಹುದ್ದೆಗಳಿಗೆ ಭರ್ತಿ ಹೊಂದಲು ಅವಕಾಶವಿರುತ್ತದೆ. ಈ ಎಲ್ಲಾ ಹುದ್ದೆಗಳು ಶೈಕ್ಷಣಿಕವಾಗಿ ಶಾಲೆಗಳಲ್ಲಿ ವಿಷಯ ಬೋಧನೆ ಅನುಭವವನ್ನು ಹಾಗೂ ಶೈಕ್ಷಣಿಕ ಮಾರ್ಗದರ್ಶನ ನೀಡುವ ಅನುಭವವನ್ನು ಅಪೇಕ್ಷಿಸುತ್ತದೆ. ಆದರೆ ದೈಹಿಕ ಶಿಕ್ಷಕರಿಗೆ ವಿಷಯ ಬೋಧನೆಯ ತರಬೇತಿ ಇರುವುದಿಲ್ಲ. ಬದಲಾಗಿ ದೈಹಿಕ ಶಿಕ್ಷಣಕ್ಕೆ ಸಂಬಂಧಿಸಿದಂತೆ ಮಾತ್ರ ತರಬೇತಿಯನ್ನು ಪಡೆದಿರುತ್ತಾರೆ.

ದೈಹಿಕ ಶಿಕ್ಷಣದ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪ್ರತ್ಯೇಕವಾಗಿ ನಿರ್ವಹಿಸಲಾಗುತ್ತಿದ್ದು, ಇವರ ಪ್ರಾವೀಣ್ಯತೆ ಹಾಗೂ ಅನುಭವ ಆಧಾರದ ಮೇಲೆ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ, ಸಹಾಯಕ ನಿರ್ದೇಶಕರು (ದೈಹಿಕ ಶಿಕ್ಷಣ) ಸಹ ನಿರ್ದೇಶಕರು (ದೈಹಿಕ ಶಿಕ್ಷಣ) ಹುದ್ದೆಗಳಿಗೆ ಮುಂಬಡ್ತಿ ಕಲ್ಪಿಸಲಾಗಿದೆ. ಶೈಕ್ಷಣಿಕ ಆಡಳಿತದ ಹಿತದೃಷ್ಠಿಯಿಂದ ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮದಂತೆ ಪದವಿ ಹಾಗೂ ಶಿಕ್ಷಣದಲ್ಲಿ ಪದವಿ ವಿದ್ಯಾರ್ಹತೆ ಪೋಷಕ ವೃಂದ ಎಂಬುದಾಗಿ ಗುರುತಿಸಿರುವ ವೃಂದದಿಂದ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿಗಳನ್ನು ಪರಿಗಣಿಸಲಾಗುತ್ತಿದೆ. ಅದಗ್ಯೂ ದೈಹಿಕ ಶಿಕ್ಷಕರಿಗೆ ಸಹ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ಅಧಿಕಾರಿಗಳೊಂದಿಗೆ ಚರ್ಚಿಸಿ, ಆದೇಶಗಳನ್ನು ಪರಿಶೀಲಿಸಿ ನಂತರ ಮಾನ್ಯ ಮುಖ್ಯ ಮಂತ್ರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

# ಗಜಾನನ ಕೋ ಆಪರೇಟಿವ್: ಮಹಿಳಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ಬಸವಕಲ್ಯಾಣದ ಜೈಗಜಾನನ ಕ್ರೇಡಿಟ್ ಕೋ ಆಪರೇಟಿವ್ ಶಾಖೆಕಚೇರಿಯಲ್ಲಿಸೋಮವಾರ ಅಂತರರಾಷ್ಟ್ರೀಯ ಮಹಿಳಾ ದಿನ ಆಚರಿಸಲಾಯಿತು.



ಕಾರ್ಯಕ್ರಮ ಉದ್ಘಾಟಿಸಿದ ನಗರಪೊಲೀಸ್ ಠಾಣೆ ಪಿಎಸ್ಐ ಸುರೇಶ್ ಹಜ್ಜರಗೆ ಅವರು, ಮಹಿಳೆಯರು ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಮಹಿಳಾ ಸಾಧಕಿಯರನ್ನು ಸನ್ಮಾನಿಸಿ ಪ್ರೋತ್ಸಾಹಿಸಲಾಯಿತು. ಕೋ ಆಪರೇಟಿವ್ ಅಧ್ಯಕ್ಷ ವಿಜಯಕುಮಾರ ಸಿಂಧೆ ಅಧ್ಯಕ್ಷತೆ ವಹಿಸಿದ್ದರು.

ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಅರ್ಜುನ ಕನಕ, ಎಎಸ್ಐ ಕನ್ಯಾಕುಮಾರಿ, ಕೋ ಆಪರೇಟಿವನ ಭಾಲ್ಕಿ ಮುಖ್ಯ ಶಾಖೆಯ ಪ್ರಧಾನ ವ್ಯವಸ್ಥಾಪಕರಾದ ಸಂಜೀವಕುಮಾರ ಕನಕೇರಿ, ವಿಜಯ ಬಿರಾದಾರ, ಬಸವಕಲ್ಯಾಣ ಶಾಖೆ ವ್ಯವಸ್ಥಾಪಕ ಸೂರಜ್ ಪಾಟೀಲ ಮತ್ತಿತರರು ಇದ್ದರು.

# ಭೂಸೇನಾ ನೇಮಕಾತಿಗೆ ಅಗ್ನಿಪಥ ಅನ್‌ಲೈನ್ ರಜಿಸ್ಟ್ರೇಷನ್ ಪ್ರಾರಂಭ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.17: ಆರ್ಮಿ ರಿಕ್ರೂಟಿಂಗ್ ಆಫೀಸ್ ಬೆಳಗಾವಿ ಹಾಗೂ ಬೆಂಗಳೂರು ಹೆಡ್‌ಕ್ವಾರ್ಸ್ ರಿಕ್ರೂಟಿಂಗ್ ಜೋನ್ ಬೆಂಗಳೂರು ಇವರ ಸಹಯೋಗದಲ್ಲಿ ಭೂಸೇನಾ ನೇಮಕಾತಿಗೆ ಮಾರ್ಚ್.12 ರಿಂದ ಏಪ್ರಿಲ್ 10 ರವರೆಗೆ ಅಗ್ನಿಪಥ ಆನ್‌ಲೈನ್ ರೆಜಿಸ್ಟ್ರೇಶನ್ ಆರಂಭಿಸಿದ್ದು, ಜಾಯಿನ್ ಇಂಡಿಯನ್ ಆರ್ಮಿ ವೆಬ್‌ಸೈಟ್ www. joinindianarmy.nic.in ನಲ್ಲಿ ರ‍್ಯಾಲಿ ಮೂಲಕ ಈ ಕೆಳಕಂಡ ಜಿಲ್ಲೆಗಳ ಅಭ್ಯರ್ಥಿಗಳು ನೊಂದಣಿ ಮಾಡಿಕೊಳ್ಳಲು ಡೈರೆಕ್ಟರ್ ರಿಕ್ರೂಟಿಂಗ್ ಕರ್ನಲ್ ಎ.ಕೆ ಉಪಾಧ್ಯಾಯ ಅವರು ತಿಳಿಸಿದ್ದಾರೆ. ಬೆಳಗಾವಿ, ಬೀದರ, ಕಲುಬುರ್ಗಿ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಅಭ್ಯರ್ಥಿಗಳ ನೊಂದಣಿ ಮಾಡಿಕೊಳ್ಳಬಹುದಾಗಿದ್ದು, ಅಗ್ನಿವೀರ್ ಜನರಲ್ ಡ್ಯೂಟಿ, ಅಗ್ನಿವೀರ್ ಟೆಕ್ನಿಕಲ್, ಅಗ್ನಿವೀರ್, ಟ್ರೇಡ್‌ಮನ್ ಹುದ್ದೆಗಳಿಗೆ 10ನೇ ತರಗತಿ ಉತ್ತೀರ್ಣರಾಗಿರಬೇಕು, ಅಗ್ನಿವೀರ್, ಟ್ರೇಡ್‌ಮನ ಹುದ್ದೆಗೆ 8ನೇ ತರಗತಿ ಪಾಸ್ ಆಗಿರಬೇಕು, ಅಗ್ನಿವೀರ್ ಕ್ಲರ್ಕ್, ಸ್ಟೋರ್‌ಕೀಪರ್ ಟೆಕ್ನಿಕಲ್ ವಿಭಾಗಗಳಿಗೆ ನೇಮಕಾತಿ ನಡೆಯಲಿದೆ. ವಯೋಮಿತಿ, ಶೈಕ್ಷಣಿಕ ಅರ್ಹತೆ ಮತ್ತು ಇತರೆ ಮಾಹಿತಿಗಾಗಿ ಮಾರ್ಚ್.12 ರಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಆಫೀಸ್‌ದಿಂದ ಹೊರಡಿಸಿದ ಅಧಿಸೂಚನೆ ವೀಕ್ಷಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮಹಿಳೆಯರ ಸ್ವಾವಲಂಬಿ ಬದುಕಿಗೆ ಅನುಕೂಲ: ಪ್ರಭು ಚವ್ಹಾಣ



"2026–27ನೇ ಸಾಲಿನಲ್ಲಿ ನಮ್ಮ ಔರಾದ್ ತಾಲೂಕಿನ ಯಾವುದೇ ಸ್ಥಳದಲ್ಲಾದರೂ ಸಹ ಶ್ರೀ ಕ್ಷೇತ್ರ ಧರ್ಮಸ್ಥಳ ಯೋಜನೆಯ ಪೀಠಾಧಿಪತಿ ಪರಮ ಪೂಜ್ಯ ಡಾ. ವಿರೇಂದ್ರ ಹೆಗ್ಗಡೆಯವರಿಗೆ ಕರೆಸಿಕೊಂಡು ಬೃಹತ್ ಮಹಿಳಾ ಕಾರ್ಯಕ್ರಮ ಆಯೋಜನೆ ಮಾಡಿ, ಪೂಜ್ಯರ ಆಶೀರ್ವಚನ ಎಲ್ಲರಿಗೆ ದೊರೆಯುವಂತೆ ಯೋಜನೆ ರೂಪಿಸಿಕೊಳ್ಳಲಾಗುವುದು. ಶ್ರೀ ಕ್ಷೇತ್ರ ಧರ್ಮಸ್ಥಳ ಯೋಜನೆಯ ಅಧಿಕಾರಿಗಳು ಇದಕ್ಕೆ ಕೈಜೋಡಿಸಬೇಕು. ಈ ಕಾರ್ಯಕ್ರಮದ ರೂಪುರೇಶೆ ತಯ್ಯಾರಿಸಿ ನನಗೆ ನೀಡಬೇಕು. ಇದಕ್ಕೆ ಎಷ್ಟೇ ಹಣ ಖರ್ಚಾದರೂ ಸಹ ನಾನು ಸಹಕಾರ ನೀಡುವೆ.

–ಪ್ರಭು ಚವ್ಹಾಣ್ ಶಾಸಕ ಔರಾದ"

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.17:ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಅನೇಕ ಜನೋಪಕಾರಿ ಕಾರ್ಯಗಳು ಜರುಗುತ್ತಿವೆ. ಪೂಜ್ಯ ಡಾ. ವಿರೇಂದ್ರ ಹೆಗ್ಗಡೆಯವರು ಮಹಿಳೆಯರ ಸ್ವಾವಲಂಭಿ ಬದುಕು ಸೇರಿದಂತೆ ಇನ್ನಿತರ ಹಲವಾರು ಜನಪರ ಯೋಜನೆಗಳನ್ನು ಹಮ್ಮಿಕೊಂಡು ಜನರ ಮನೆ ಬಾಗಿಲಿಗೆ ಮುಟ್ಟಿಸುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಶಾಸಕ ಪ್ರಭು ಚವ್ಹಾಣ್ ನುಡಿದರು.

ತಾಲೂಕಿನ ಠಾಣಾಕುಶನೂರು ಬಸವೇಶ್ವರ ಕಲ್ಯಾಣಮಂಟಪದಲ್ಲಿ ರವಿವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಔರಾದ್ ತಾಲೂಕು ವತಿಯಿಂದ ಏರ್ಪಡಿಸಿದ ಮಹಿಳಾ ವಿಚಾರಗೋಷ್ಠಿ ಹಾಗೂ ಪೂಜಾ ಕಾರ್ಯಕ್ರಮಕ್ಕೆ ಜ್ಯೋತಿ ಪ್ರಜ್ವಲಿಸಿ ಉದ್ಘಾಟನೆ ಮಾಡಿ ಮಾತನಾಡಿದ ಅವರು, ರಾಜ್ಯ ಸರಕಾರ ಒಂದು ಬೃಹತ್ ಸರಕಾರವಾದರೇ ಶ್ರೀ ಕ್ಷೇತ್ರ ಧರ್ಮಸ್ಥಳವೊಂದು ಮಿನಿ ಸರಕಾರದಂತೆ ಜನಪರ ಕಾರ್ಯ ನಡೆಸುತ್ತಿದೆ. ಇಂತಹ ಕಾರ್ಯಕ್ರಮಗಳಿಂದ ರಾಜ್ಯದ ಜನತೆಯ ಆಷಯಗಳು ಈಡೇರಿಸಲು ನೇರವಾಗುತ್ತಿದೆ. ಆನಪರ ಕಲ್ಯಾಣಕ್ಕೆ ಈ ಯೋಜನೆ ಉತ್ತಮ ವೇದಿಕೆಯಾಗಿದೆ ಎಲ್ಲರು ಈ ಯೋಜನೆಯ ಸದುಪಯೋಗಪಡೆದುಕೊಳ್ಳುವಂತೆ ಕರೆ ನೀಡಿದರು.

ಸಂಸ್ಥೆಯ ಜಿಲ್ಲಾ ನಿರ್ದೇಶಕ ಪ್ರವೀಣ್‌ಕುಮಾರ ರವರು ಪ್ರಾಸ್ತಾವಿಕವಾಗಿ ಮಾತನಾಡಿ, ಪೂಜ್ಯ ಡಾ॥ ಡಿ. ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಬ್ಯಾಂಕಿನ ಬಿ.ಸಿ ಟ್ರಸ್ಟ್ ಆಗಿ ಕಾರ್ಯನಿರ್ವಹಿಸುತ್ತಿದೆ. ಯೋಜನೆಯ ಮೂಲಕ ಸ್ವಸಹಾಯ ಸಂಘಗಳನ್ನು ರಚನೆ ಮಾಡಿ ಸಂಘಗಳ ನಿರ್ವಹಣೆಯ ಬಗ್ಗೆ ಸದಸ್ಯರಿಗೆ ಮಾಹಿತಿ ನೀಡಿ ಸಂಘಗಳಿಗೆ ಬ್ಯಾಂಕ್ ಆಫ್ ಬರೋಡಾ ಬ್ಯಾಂಕಿನಿಂದ ಅತೀ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯಗಳನ್ನು ನೀಡುತ್ತಿದೆ ಎಂದು ತಿಳಿಸಿದರು.

ದುರ್ಬಲ ವರ್ಗದ ಮಹಿಳೆಯರಲ್ಲಿ ಕುಟುಂಬ ನಿರ್ವಹಣೆ ಜಾಣ್ಮೆ, ಹಣಕಾಸು ವ್ಯವಹಾರ ಜ್ಞಾನ, ಮಕ್ಕಳ ಶಿಕ್ಷಣ, ಪೌಷ್ಟಿಕ ಆಹಾರ, ಸ್ವ ಉದ್ಯೋಗ, ನಾಗರಿಕ ಸೌಲಭ್ಯಗಳ ಬಳಕೆ, ಮುಂತಾದ ಗುರಿಗಳನ್ನಿರಿಸಿಕೊಂಡು ಯೋಜನೆಯು ಪ್ರಾರಂಭಿಸಿದ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮ ಶ್ರೀ ಮತಿ ಹೇಮಾವತಿ ವಿ. ಹೆಗ್ಗಡೆಯವರ ಅಧ್ಯಕ್ಷತೆಯಲ್ಲಿ ಇಂದು ಜನಪ್ರೀಯ ಕಾರ್ಯಕ್ರಮದ ರೂಪುರೇಶ ಪಡೆದು ಬೆಳೆದು ಬಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೀದರ್ ಕರ್ನಾಟಕ ಬಿ ಇ ಡಿ ಕಾಲೇಜು ಉಪನ್ಯಾಸಕಿ ವಿದ್ಯಾವತಿ ಬಸವರಾಜ ಬಲ್ಲೂರ್ ವಿಶೇಷ ಉಪನ್ಯಾಸ ನೀಡಿ ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡಿ, ಮಹಿಳೆಯೆಂದರೇ ಗುಡಿ ಇಲ್ಲದ ದೇವರ ರೂಪುದವಳಾಗಿದ್ದು, ಗೋವಿನ ತರಹ ತ್ಯಾಗಮಯಿ ಹೆಣ್ಣೇ ಈ ಮಹಾತಾಯಿ. ಮಾರ್ಚ್ 8 ಮಾತ್ರ ಮಾತ್ರ ಮಹಿಳೆಯರು ನೆನೆಪಾಗುವುದು ನಿಲ್ಲಬೇಕು. ಸದಾಕಾಲ ಅವರಿಗಾಗಿ ಶ್ರಮಿಸಬೇಕು. ಮಹಿಳೆಯರಲ್ಲಿ ಬೌದ್ಧಿಕ ರಾಜಕೀಯ ಸಾಮಾಜಿಕ ಆರ್ಥಿಕ ಬಲವನ್ನು ಹೆಚ್ಚಳವಾದಾಗ ಮಾತ್ರ ಮಹಿಳಾ ಸಬಲೀಕರಣ ಸಶಕ್ತತೆಗೆ ಬಲ ಬರುತ್ತದೆ. ಸದಾಕಾಲ ಮಹಿಳೆಯರು ತಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಂಡು ತಮ್ಮ ಆತ್ಮೀಯ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಬೇಕು. ಯಾವಾಗಲೂ ಧನಾತ್ಮಕ ಭಾವನೆಯನ್ನು ಹೊಂದಬೇಕು. ಸಂವಿಧಾನವು ಮಹಿಳೆಯರೆಲ್ಲರಿಗೂ ಸಮಾನತೆ ಹಕ್ಕು ನೀಡಿದೆ. ಪ್ರತಿಯೊಂದು ಕ್ಷೇತ್ರದಲ್ಲಿ ಮಹಿಳೆಯರು ಭಾಗವಹಿಸಲು ಸಹಕಾರ, ಪ್ರೇರಣೆ ನೀಡುತ್ತಿದೆ . ಪ್ರತಿಯೊಬ್ಬರು ಹೆಣ್ಣು ಮಗುವಿನ ಮಗುವಿನ ಬ್ರುಣ ಹತ್ಯೆ, ಲಿಂಗ ಭೇದ, ಮಹಿಳೆಯರ ಆರೋಗ್ಯ ಮತ್ತು ಸಾಕ್ಷರತೆ ಬಗ್ಗೆ ಎಲ್ಲರು ಕೈಜೋಡಿಸಬೇಕು. ಮಹಿಳೆಯರು ಧ್ವನಿ ಇಲ್ಲದವರಿಗೆ ಧಣಿಯಾಗಿ ಅವರ ಹಿಂದೆ ನಿಲ್ಲಬೇಕು. ಸಮಾಜದಲ್ಲಿ ಮಾನವ ಹಕ್ಕುಗಳು ಮತ್ತು ತಾರತಮ್ಯವನ್ನು ಗೌರವಿಸುವುದು ಮತ್ತು ಬೆಂಬಲಿಸುವುದು ಎಲ್ಲರೂ ಕಲಿಯಬೇಕು. ಮಹಿಳೆಯರನ್ನು ಸಬಲೀಕರಣ ಗೊಳಿಸುವ ಉದ್ಯಮ ಅಭಿವೃದ್ಧಿ ಇನ್ನಿತರ ಪೂರೈಕೆ ಸರಪಳಿ ಗಳನ್ನು ಜಾರಿಗೊಳಿಸಬೇಕು ಎಂದರು. ಸ್ಥಳೀಯ ವೀರಕ್ತಮಠದ ಪರಮ ಪೂಜ್ಯ ಶ್ರೀ ಮ.ನಿ.ಪ್ರ. ಸಿದ್ಧಲಿಂಗ ಮಹಾಸ್ವಾಮಿಜಿಗಳು ದಿವ್ಯಸಾನಿದ್ಯವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಾಯ ಪಡೆದು ಸ್ವಾವಲಂಬಿ ಬದುಕು ಸಾಗಿಸುತ್ತಿರುವ 15 ಜನ ಮಹಿಳಾ ಸಾಧಕಿಯರಿಗೆ ಗೌರವಿಸಿ ಸನ್ಮಾನಿಸಲಾಯಿತು.

ಮಹಿಳಾ ಸಂಘದ ಸದಸ್ಯರಿಂದ ನೃತ್ಯ, ಕೋಲಾಟ ಸೇರಿದಂತೆ ಇನ್ನಿತರ ಮನರಂಜನಾ ಕಾರ್ಯಕ್ರಮಗಳು ಜರುಗಿದವು. ಮಸ್ತ್ ಊಟ ಕಾರ್ಯಕ್ರಮಕ್ಕೆ ಆಗಮಿಸಿದ ಔರಾದ್, ಕಮಲನಗರ ತಾಲೂಕಿನ ನೂರಾರು ಸಂಘದ ಮಹಿಳೆಯರಿಗೆ ಹುಗ್ಗಿ, ಪಾಯಸ, ಅನ್ನ ಸಾಂಬಾರುವಿನ ಪ್ರಸಾದ ವ್ಯವಸ್ಥೆ ಮಾಡಲಾಯಿತು.

ಈ ಸಂದರ್ಭದಲ್ಲಿ

ಗ್ರಾ.ಪಂ ಅಧ್ಯಕ್ಷ ಕಾಶಿನಾಥ ಜೀರ್ಗೆ, ಜಿಲ್ಲಾ ಜನ ಜಾಗೃತಿ ಉಪಾಧ್ಯಕ್ಷ ಡಾ. ಶಾಲಿವಾನ್ ಉದಗಿರೆ, ಜಿಲ್ಲಾ ಜನ ಜಾಗೃತಿ ಸದಸ್ಯ ಮಲ್ಲಪ್ಪ ಗೌಡಾ, ಶಿವರಾಜ್ ಅಲಮಾಜೆ, ರಾಮಶೆಟ್ಟಿ ಪನ್ನಾಳೆ, ಕೇರಬಾ ಪವಾರ್, ಉಮಾಕಾಂತ ಪಾಟೀಲ, ಮಲ್ಲಿಕಾರ್ಜುನ, ಅನೀಲ್ ದಾವಣೆ, ಲೋಕೇಶ ಭಾಲ್ಕೆ, ಬಸವರಾಜ್, ಲಕ್ಷ್ಮಿ ??ಕಾಂತ, ಸಂಗೀತಾ, ಉಮೇಶ ಗೌಡಾ, ಇತರರಿದ್ದರು. ತಾಲೂಕು ಯೋಜನಾಧಿಕಾರಿ ರಾಘವೇಂದ್ರ ಗೌಡ ಸ್ವಾಗತಿಸಿ ವಂದಿಸಿದರು. ವಿಲಾಸ ಪೂಜಾರಿ ನಿರೂಪಣೆ ಮಾಡಿದರು.

# ಡಾ, ಪುನೀತ ರಾಜಕುಮಾರ ಸರ್ ರವರ ಜನ್ಮದಿನ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ಸೇಡಂ,ಮಾ,17.ರಂಜೋಳ ಗ್ರಾಮದ ಚಿಗುರು ಕಲಿಕಾ ಕೇಂದ್ರದಲ್ಲಿ ಪರಮಪೂಜ್ಯ ತಿಪ್ಪಯ್ಯ ಮುತ್ಯ ಮೌಲಾಲಿ ದೇವಸ್ಥಾನ ರಘಪೂರ ಇವರು ಕರ್ನಾಟಕ ರತ್ನ ಡಾ. ಪುನೀತ ರಾಜಕುಮಾರ ಅವರ ಹುಟ್ಟು ಹಬ್ಬದ ಪ್ರಯುಕ್ತ ಐವತ್ತಕ್ಕೂ ಹೆಚ್ಚು ಚಿಕ್ಕ ಮಕ್ಕಳಿಗೆ ಪರೀ–ಕ್ಷೆ ಒತ್ತಿಗೆ ಪ್ಯಾಡ್ ನೋಟು ಪುಸ್ತಕ ಪೆನ್ನುಗಳನ್ನು ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕಾಧ್ಯಕ್ಷ ಡಾ. ರಾಮಚಂದ್ರ ಗುತ್ತೇದಾರ. ರಾಜಶೇಖರ ಬಳಗಾರ.

ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಮಾಂತೇಶ ಸುತಾರ. ಚಂದ್ರಶೇಖರ ಮಡಿವಾಳ ಮುಖ್ಯ ಗುರುಗಳಾದ ಚಂದ್ರಶೇಖರ ಪೂಜಾರ ನಾಮವಾರ ಹಾಗೂ ಶಿಕ್ಷಕರು ಇದ್ದರು.

# ಸಂಗೀತ ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ:– ಗುರು ಬಸವ ಪಟ್ಟದೇವರು



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಕರಕನಳ್ಳಿ ಗ್ರಾಮದಲ್ಲಿ ಶ್ರೀ ಗುರುಗಂಗಾಧರ ಭಕ್ಕಪ್ರಭುಗಳ 211ನೇ ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಸಂಗೀತ ದರಬಾರ ಕಾರ್ಯಕ್ರಮ ಉದ್ಘಾಟಿಸಿದ ಭಾಲ್ಕಿಯ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದೇವರು ಮಾತನಾಡಿ ಮನಸ್ಸನ್ನು ಅರಳಿಸುವ ಶಕ್ತಿ ಸಂಗೀತಕ್ಕಿದೆ ಎಂದು ನುಡಿದರು ಮತ್ತು ಗುರು ಗಂಗಾಧರ್ಭಕ್ಕೆ ಪ್ರಭುಗಳು ಈ ಭಾಗದಲ್ಲಿ ಪವಾಡ ಪುರುಷರು ಮಹಾನ್ ವ್ಯಕ್ತಿಗಳಾಗಿ ಹೊರಹಮ್ಮಿದ್ದಾರೆ ಮತ್ತು ಬೇಡಿದ ವರವ ಬೇಡಿದವರಿಗೆ ವರವ ನೀಡುವ ಕಾಮಧೇನು ಕಲ್ಪವೃಕ್ಷವಾಗಿದ್ದಾರೆ ಎಂದು ಆಶೀರ್ವಚನ ನೀಡಿದರು. ನೇತೃತ್ವವಹಿಸಿ ಮಾತನಾಡಿದ ಪರಮಪೂಜ್ಯ ಕರಸ್ಥಲ ಬ್ರಹ್ಮ ಡಾ. ಬಸವಲಿಂಗ ಅವಧೂತ ಮಲ್ಲಣಗಿರಿ ಆಶೀರ್ವಚನ ನೀಡಿ ಜೀನವು ಸಾಗಬೇಕಾದರೆ ಭಕ್ತಿ ಪರಂಪರೆ ತಾನು ನನ್ನವರು ಎಂದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ ಮತ್ತು ಜೀವನ ಇರೋವರೆಗೂ ತಂದೆ ತಾಯಿಗಳ ಸೇವೆ ಮಾಡಿದಾಗ ನಿಜವಾದ ಭಗವಂತ ಅವರಲ್ಲಿ ನೆಲೆಸಿರುತ್ತಾನೆ ಅಲ್ಲದೆ ಮೌಲ್ಯಗಳಿಗೆ ತಿಲಾಂಜಲಿ ಇಟ್ಟು ವೈಧಾನಿಕ ಮನೋಭಾವ ಬೆಳೆಸಿಕೊಳ್ಳಬೇಕೆಂದು ಆಶೀರ್ವಚನ ನೀಡಿದರು. ಷ.ಬ್ರ ಶ್ರೀ. ಶಿವಕುಮಾರ ಶಿವಾಚಾರ್ಯರು ಸ್ವಂತ ಹಾಗೂ ನರನಾಳ ಷಬ್ರಶ್ರೀ ಮರುಳಾಧ್ಯ ಶಿವಾಚಾರ್ಯರು ಚಾಂಗಲೇರಾ ಹಾಗೂ ಚಿಟಗುಪ್ಪ, ಷ.ಬ್ರ. ಶ್ರೀ ಶಿವಯೋಗಿ ಶಿವಾಚಾರ್ಯರು ಮಹಾಸ್ವಾಮಿ ಜಂಗಮಯ್ಯಾ ಗುಡ್ಡತಗಡಂಪಳ್ಳಿ(ತೆಲಂಗಾಣಾ] ಷ. ಬ್ರ. ಡಾ. ವೀರಪ್ರಭು ಪಂಡಿತಾರಾಧ್ಯ ಶಿವಾಚಾರ್ಯರು ಮಹಾಸ್ವಾಮಿಗಳು ಜಗದ್ಗುರು ರೇವಣಸಿದ್ದೇಶ್ವರಮಠ,ಕುಡಂಬಲ ನೈತೃತ್ವವಹಿಸಿದ್ದರು.ಡಾ.ನೀತಾ ಬೆಲ್ದಾಳೆ, ಶಕುಂತಲಾ ಬೆಲ್ದಾಳೆ, ಪ್ರಮುಖರಾದ ಮಲ್ಲಿಕಾರ್ಜುನಪ್ಪಾ ಹತ್ತಿ ವಿಶ್ರಾಂತ ಸಹಾಯಕ ಆಯುಕ್ತರು ಬೀದರ, ನೀಲಾವತಿ ಪಾಟೀಲ್ ಅಧ್ಯಕ್ಷರು ಗ್ರಾ. ಪಂ ಉಡಮನಳ್ಳಿ, ಮೋಹನದಾಸ ನಾರಾಯಣರಾವ ಮಾಧವಶೆಟ್ಟಿ ಕಲಬುರಗಿ ಕಲ್ಯಾಣ ಮಂಟಪ ಹಾಗೂ ಮಹಾದ್ವಾರ ಕಟ್ಟಿಸಿದ ದಾನಿಗಳು ಶ್ರೀ ಸಿದ್ದಪ್ಪಾ ನಾಗೂರೆ, ಬೀದರ ಪ್ರಭು ಸಂಗಯ್ಯಾ ಗೋಪನಹಳ್ಳಿ, ಹೈದ್ರಾಬಾದ ಲಕ್ಷ್ಮಣರಾವ ಕಲ್ಲಾ ಹೈದ್ರಾಬಾದ ಶ್ರೀ ಬಕ್ಕಯ್ಯಾ ಸೇರ್ ಕೋಮಶೆಟ ಪಳ್ಳಿ (ಸದಾಶಿವಪೇಟ್) ಮಲ್ಲಿಕಾರ್ಜುನ ಪಾಟೀಲ್ ನೆಲವಾಳ ಹೈದ್ರಾಬಾದ ದೇವಿಂದ್ರಪ್ಪಾ ಚಾಂಗಲೇರಾ, ಶೈಲೇಂದ್ರ ಕಾವಡಿ, ಸತ್ಯ ನಾರಾಯಣ–ರೆಡ್ಡಿ ಎಲಬೆಲ, ಗಂಗಾರೆಡ್ಡಿ ಮಟಾಟಿ, ಪಾಂಡುರಂಗ ರೆಡ್ಡಿ, ಲಕ್ಷ್ಮಿಕಾಂತರೆಡ್ಡಿ, ಗೋಪಾಲರೆಡ್ಡಿ ನಿರ್ಣಾ, ಅಶೋಕ ರಾಮಜಿ, ರಾಜಪ್ಪಾ ಮುತ್ಯಾ ಲಕ್ಷ್ಮಿಕಾಂತ ಕುಲಕರ್ಣಿ, ಜಗನ್ನಾಥ ರೆಡ್ಡಿ ಮಟಾಟಿ, ನಾಗಪ್ಪಾ ಮಕಾಜಿ, ಪ್ರಭು ಫಾಟೊಳ್ಳಿ ಜಗನ್ನಾಥ ಗಾರಿ, ಅನಂತ ಭಕ್ತ ಸಮೂಹ ಭಾಗವಹಿಸಿ ಯಶಸ್ವಿಗೊಳಿಸಿದ್ದರು. ಸಂಗೀತ ದರ್ಬಾರದಲ್ಲಿ ಭಾಗವಹಿಸಿದ ಕಲಾವಿದರು. ಧುಳಪ್ಪಾ ಮುಡಬಿ ಆಕಾಶವಾಣಿ ಕಲಾವಿದರು ಕಲಬುರಗಿ, ಗೋಪಾಲ ಶಾಂತಪ್ಪಾ ಸಾವರಮಠ ಶಿವಾನಿ ಆಕಾಶವಾಣಿ ದೂರದರ್ಶನ ಕಲಾವಿದರು ಕಲಬುರಗಿ, ರೇವಣಸಿದ್ದಯ್ಯಾ ಸ್ವಾಮಿ ಹಿರೇಮಠ ಸಂಗೀತ ಶಿಕ್ಷಕರು ಕಲ್ಲೂರ, ನಾಗೇಂದ್ರ ರಾಣಾಪೂರ ಖ್ಯಾತ ಸಂಗೀತ ಕಲಾವಿದರು ಬೆಂಗಳೂರು, ವಿನಿತಕುಮಾರ ರಾಣಾಪೂರ ಖ್ಯಾತ ಸಂಗೀತ ಕಲಾವಿದರು ಬೆಂಗಳೂರ. ಶಿವಕುಮಾರ ಪಂಚಾಳ ಸಂಗೀತ ಶಿಕ್ಷರು ಬೀದರ ತುಕಾರಾಮ ಚಿಮಕೊಡೆ ಸಂಗೀತ ಶಿಕ್ಷರು, ಅಶ್ವಿನಿ ರಾಜಕುಮಾರ ಹಿರೇಮಠ ಖ್ಯಾತ ಸಂಗೀತ ಕಲಾವಿದರು ಬೀದರ, ಮಾನಸಾ, ಶಿವಕುಮಾರ ಪಂಚಾಳ ಯುವ ಸಂಗೀತ ಕಲಾವಿದರು ಬೀದರ, ತಬಲಾವಾದಕರು ನವಲಿಂಗ ಪಾಟೀಲ್ ಆಕಾಶವಾಣಿ ಕಲಾವಿದರು ಮನ್ನಾಏಖೇಳ್ಳಿ, ಪರಿಸರವಾದಿ ಶೈಲೇಂದ್ರ ಕಾವಡಿ, ದಯಾನಂದ ಹಿರೇಮಠ, ಜನಾರ್ಧನ ವಾಘಮಾರೆ ಕ.ಕ. ಸಂಗೀತ ಪ್ರಶಸ್ತಿ ಪುರಸ್ಕೃತರು ಹುಮನಾಬಾದ, ರಾಜಕುಮಾರ ಹಿರೇಮಠ ಬೀದರ. ಆದಿತ್ಯ ಶಿವಕುಮಾರ ಪಂಚಾಳ ಬೀದರ ಸೇರಿದಂತೆ ಅಪಾರ ಭಕ್ತಾಧಿಗಳು ಉಪಸ್ಥಿತರಿದ್ದರು.



ಚಿಟಗುಪ್ಪ: ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ತಾಲೂಕ ಕಚೇರಿಯಲ್ಲಿ ಸೋಮವಾರ ಆಯೋಜಿಸಿದ. ಇಫ್ತಾರ್ ಕೂಟದಲ್ಲಿ ಪುರಸಭೆ ಮುಖ್ಯಧಿಕಾರಿ ಹುಸಾಮುದ್ದೀನ್ ಬಾಬಾ, ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ, ಯೋಜನಾಧಿಕಾರಿ ಬಸವರಾಜ ಕೆ, ಜನಜಾಗೃತಿ ವೇದಿಕೆ ಸದಸ್ಯ ಶಾಮರಾವ ಭುತ್ತಾಳೆ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಅನೀಲಕುಮಾರ ಸಿಂಧೆ, ಪತ್ರಕರ್ತರಾದ ರಾಜಕುಮಾರ ಆರ್. ಹಡಪದ, ಸಜೀಶ ಲಂಬುನೋರ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಯುವ ಪತ್ರಕರ್ತ ಶರಣಯ್ಯ ತೋಂಟದಾರ್ಯಮಠ ನಿಧನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕಿನ ಅತ್ಯಂತ ಉತ್ಸಾಹಿ ಯುವಬರಹಗಾರ ಹಾಗೂ ಯುವ ಸಬಲೀಕರಣ ಆಪ್ತ ಸಮಾಲೋಚಕ, ದಿನಪತ್ರಿಕೆಯ ವರದಿಗಾರರು ಆಗಿದ್ದ ಶರಣಯ್ಯ ತೋಂಟದಾರ್ಯಮಠ ಹೃದಯಾಘಾತದಿಂದ ನಿಧನರಾಗಿದ್ದಾರೆ.

ಕುಕನೂರು ಪಟ್ಟಣದ ರಾಯರೆಡ್ಡಿ ಕಾಲೋನಿ ನಿವಾಸಿಯಾದ ಶರಣಯ್ಯ ತೋಟದಾರ್ಯಮಠ ದಿನಾಂಕ 17.03.2025ರ ಸೋಮವಾರ ಹೃದಯಾಘಾತದಿಂದ ನಿಧನ ಹೊಂದಿದ್ದು ಅವರ ಅಂತ್ಯಕ್ರಿಯೆಯನ್ನು ಕುಕನೂರು ಪಟ್ಟಣದ ವೀರಶೈವ ರುದ್ರ ಭೂಮಿಯಲ್ಲಿ ಸಾಯಂಕಾಲ 6:00 ವೇಳೆಗೆ ನೆರವೇರಿಸಲಾಯಿತು. ಮೃತರು ತಾಯಿ ಇಬ್ಬರ ಸಹೋದರರು ಹಾಗೂ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ.

# ಯುವತಿ ಕಾಣೆ; ಪತ್ತೆಗೆ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.17– ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣೆಯ ವ್ಯಾಪ್ತಿಯ ನಿವಾಸಿಯಾದ ಮಾನಸ ತಂದೆ ಭೀಮರೆಡ್ಡಿ (21) ಎಂಬ ಯುವತಿ 2025ರ ಫೆಬ್ರವರಿ 24ರ ಬೆಳಿಗ್ಗೆ 11ಗಂಟೆಗೆ ಕ್ಲಿನಿಕ್ ಬೀಗದ ಕೀಲಿಯನ್ನು ಕೊಟ್ಟು ಸಂಬಳವನ್ನು ಪಡೆದುಕೊಂಡು ಬರುತ್ತೇನೆಂದು ಮನೆಯಿಂದ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ನೇತಾಜಿನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ: 17/2025 ಕಲಂ ಮಹಿಳೆ ಕಾಣೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಮಹಿಳೆಯ ಚಹರೆ: ದುಂಡು ಮುಖ, ಸಾದಾರಣ ಮೈ ಕಟ್ಟು, ಸಾದ ಕಪ್ಪು ಬಣ್ಣ, ತಲೆಯಲ್ಲಿ ಕಪ್ಪು ಕೂದಲು ಹೊಂದಿದ್ದು, ತಿಳಿ ನೀಲಿ ಬಣ್ಣದ, ಪೈಜಾಮ್ ಡ್ರೇಸ್ ಧರಿಸಲಾಗಿದೆ. ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ.

ಈ ಯುವತಿ ಬಗೆ ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ ಸಂ:08532–240222. ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ: 08532–235635, 08532–235100, 9480803800, ಪಿಎಸ್ಐ;9480803846, ವೃತ್ತ ರಾಯಚೂರು 9480803831ಗೆ

# ಸಾರ್ವಜನಿಕ ಗ್ರಂಥಾಲಯ ಇಲಾಖೆ: ಸಮಿತಿಯಿಂದ ಪುಸ್ತಕ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.17– ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ 2021ರಲ್ಲಿ ಮುದ್ರಣಗೊಂಡು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಕನ್ನಡ, ಆಂಗ್ಲ, ಹಿಂದಿ ಮತ್ತು ಭಾರತೀಯ ಇತರೆ ಭಾಷಾ ಪುಸ್ತಕಗಳನ್ನು ಆಯ್ಕೆ ಸಮಿತಿ ಮುಂದೆ ಮಂಡಿಸಲಾಗಿದೆ. ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಪುಸ್ತಕಗಳನ್ನು ಇಲಾಖೆಯ ಜಾಲತಾಣ dpl.karnataka.gov.inನಲ್ಲಿ ಮಾ.15ರಂದು ಪ್ರಕಟಿಸಲಾಗಿದೆ.

ಲೇಖಕರು, ಲೇಖಕ–ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಸರಬರಾಜುದಾರರು ಸಲ್ಲಿಸಿದ ಪುಸ್ತಕಗಳ ಹೆಸರು, ಪ್ರಕಾಶಕರ ಹೆಸರು, ಸರಬರಾಜುದಾರರ ಹೆಸರು, ಲೇಖಕರ ಹೆಸರು, ಪುಟ ಸಂಖ್ಯೆ, ಮುಖ ಬೆಲೆ, ನಿಗದಿತ ಬೆಲೆ, ಪುಸ್ತಕದ ಅಳತೆ ಹಾಗೂ ಇತರೆ ತಾಂತ್ರಿಕ ವ್ಯತ್ಯಾಸಗಳಿದ್ದಲ್ಲಿ ಮಾ.18ರ ಒಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ:ಅಂಬೇಡ್ಕರ್ ವೀದಿ, ಬೆಂಗಳೂರು–560001, ಇಲ್ಲಿಗೆ ಲಿಖಿತವಾಗಿ ಅಥವಾ ಇ–ಮೇಲ್ ಮೂಲಕ ಮನವಿಗಳನ್ನು ಸಲ್ಲಿಸಬಹುದಾಗಿದೆ. ನಂತರ ಬಂದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ರಾಯಚೂರು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳಾದ ನಿರ್ಮಲಾ ಹೆಚ್.ಹೊಸೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.17– ಯಾದಗಿರಿ ರೈಲ್ವೇ ನಿಲ್ದಾಣದ ವೇದಿಕೆ ನಂ.1ರಲ್ಲಿ ಮಾ.13ರಂದು ಸುಮಾರು 50 ವರ್ಷದ ಒಬ್ಬರು ಅಪರಿಚಿತ ಗಂಡಸು ಯಾವುದೋ ಖಾಯಿಲೆಯಿಂದ ಬಳಲಿ ಸ್ವಾಬಾವಿಕವಾಗಿ ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಯುಡಿಆರ್ ನಂ.19/2025 ಕಲಂ; 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಿಸಿಕೊಂಡು ವಾರಸುದಾರರ ಪತ್ತೆಗೆ ಕೋರಲಾಗಿದೆ. ಮೃತನ ಚಹರೆ ಪಟ್ಟಿ; ವಯಸ್ಸು ಸುಮಾರು 50 ವರ್ಷ, ಎತ್ತರ ಸುಮಾರು 5.4 ಅಡಿ, ಕಪ್ಪು ಮೈಬಣ್ಣ ಸಾಧಾರಣ ಮೈಕಟ್ಟು, ದುಂಡು ಮುಖ, ಸಣ್ಣ ಕಿವಿ, ಉದ್ದ ಮೂಗು ಬೋಳು ತಲೆ ಮತ್ತು ಬಿಳಿ ಗಡ್ಡ ಮೀಸೆ ಹೊಂದಿದ್ದು, ಒಂದು ಬಿಳಿ ಪಂಚೆ, ಒಂದು ಬಿಳಿಯ ಬಣ್ಣದ ಜುಬ್ಬಾ ಶರ್ಟು, ಒಂದು ಹಸಿರು ಬಿಳಿ ಮಿಕ್ಸ್ ಬಣ್ಣದ ಚಡ್ಡಿ ಬಟ್ಟೆಯನ್ನು ಧರಿಸಲಾಗಿದೆ. ಈ ಮೃತ ಅಪರಿಚಿತ ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಗಂಡಸು ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆ–ಯ ದೂರವಾಣಿ ಸಂಖ್ಯೆ: 08532– 231716 ಅಥವಾ ಮೊ.ನಂ:9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆ–ಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಕಡೆ ಗಮನ ಹರಿಸಿ:– ಗುಂಡಪ್ಪ ಹುಡಗೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪರೀಕ್ಷೆ ಸಮಯ ಸಮೀಪಿಸುತ್ತಿರುವುದರಿಂದ ಮಕ್ಕಳು ಟಿವಿ, ಮೊಬೈಲ್ ವೀಕ್ಷಣೆ ಕಡಿಮೆ ಮಾಡಿ, ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಈ ಬಗ್ಗೆ ಪೋಷಕರು ಗಮನ ಹರಿಸಬೇಕು,"ಎಂದು ವಿಷಯ ಪರಿವೀಕ್ಷಕ ಗುಂಡಪ್ಪ ಹುಡಗೆ ಹೇಳಿದರು. ಪಟ್ಟಣದ ವಿದ್ಯಾ ವಿಜ್ಞಾನ ಪ್ರಾಥಮಿಕ ಹಾಗೂ ಜ್ಞಾನ ದರ್ಶನ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಹತ್ತನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಹಾಗೂ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು. ವಿದ್ಯಾರ್ಥಿಗಳಿಗೆ ಪರೀಕ್ಷಾ ಸಮಯ ಹತ್ತಿರ ಬರುತ್ತಿದ್ದು, ಈ ಸಮಯದಲ್ಲಿ ಓದಿನ ಕಡೆಗೆ ಹೆಚ್ಚಿನ ಗಮನ ಹರಿಸಿದರೆ ಒಳ್ಳೆಯ ಫಲಿತಾಂಶ ಪಡೆಯಬಹುದು. ಈ ಬಗ್ಗೆ ಶಿಕ್ಷಕರು ಮತ್ತು ಪೋಷಕರು ಲಕ್ಷ್ಯ ಕೊಡಬೇಕು. ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಸಹ ಮಕ್ಕಳು ಪಾಲ್ಗೊಂಡು ಜ್ಞಾನ ಹೆಚ್ಚಿಸಿಕೊಳ್ಳಬೇಕು, ಎಂದರು. ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ ಮಾತನಾಡಿ, ಜೀವನಕ್ಕೆ ಶಿಕ್ಷಣ ಮುಖ್ಯ, ಜೀವನದಲ್ಲಿ ಗಳಿಸಿದ ಆಸ್ತಿ ಸಂಪತ್ತು ಬೇರೆಯವರ ಪಾಲಾಗಬಹುದು ಆದ–ರೆ, ಕಲಿತ ಶಿಕ್ಷಣ ಮಾತ್ರ ಬೇರೆಯವರ ಪಾಲಾಗುವುದಿಲ್ಲ. ವಿದ್ಯಾರ್ಥಿಗಳು ಜೀವನದಲ್ಲಿ ಗುರಿ ಇಟ್ಟುಕೊಂಡು ಸಾಧನೆ ಮಾಡಬೇಕು. ಸಾಧನೆ ಮಾಡಿದವರ ಇತಿಹಾಸ ಅರಿತುಕೊಳ್ಳಬೇಕು. ಸಾಧನೆ ಹಿಂದಿನ ರಹಸ್ಯಗಳು ಅರಿತುಕೊಳ್ಳುವ ಮೂಲಕ ಉನ್ನತ ಸಾಧನೆಗೆ ಪ್ರಯತ್ನಿಸಬೇಕು ಎಂದು ಸಲಹೆ ನೀಡಿದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಈ ಶಾಲೆಯಲ್ಲಿ ಓದುವ ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆ ಉತ್ತಮ ಸಂಸ್ಕಾರವನ್ನೂ ಕೊಡುವ ಕೆಲಸ ಈ ಸಂಸ್ಥೆ ಮಾಡುತ್ತಿದೆ. ಈ ಶಾಲೆಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಪುಣ್ಯವಂತರು. ಇಲ್ಲಿ ಸಿಗುವ ಶಿಕ್ಷಣ ಮತ್ತು ಸಂಸ್ಕಾರವು ನಿಮ್ಮ ಜೀವನದಲ್ಲಿ ಒಳ್ಳೆಯ ಭವಿಷ್ಯ ರೂಪಿಸುತ್ತದೆ, ಪ್ರತಿಯೊಬ್ಬರು ತಮ್ಮ ತಮ್ಮ ಮನೆಗಳಲ್ಲಿ ತುಳಸಿ ಗಿಡ ಹಚ್ಚಬೇಕು, ಅದರಿಂದ ನಮಗೆ ದಿನನಿತ್ಯ ಒಳ್ಳೆಯ ಗಾಳಿ ಸಿಗುತ್ತದೆ ಎಂದು ತಿಳಿಸಿದರು. ಸಂಸ್ಥೆಯ ಕಾರ್ಯದರ್ಶಿ ಚಂದ್ರಶೇಖರ್ ದಾನಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ನಿರ್ದೇಶಕರಾದ ಅಶೋಕ್ ಪುರಿ, ರೇವಣ್ಣಸಿದ್ದಪ್ಪ ಧನಶ್ರೀ ಮಾತನಾಡಿದರು. ಜಿಲ್ಲಾ ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಹಾಗೂ ದೈಹಿಕ ಶಿಕ್ಷಕಿಯರಿಗೆ ಸಮಾರಂಭದಲ್ಲಿ ಹಾಜರಿದ್ದ ಗಣ್ಯರು ಸನ್ಮಾನಿಸಿ ಅಭಿನಂದಿಸಿ ಪ್ರಮಾಣ ಪತ್ರ ವಿತರಿಸಿದರು. ಈ ಸಂದರ್ಭದಲ್ಲಿ ಪ್ರೌಢ ಶಾಲೆ ಮುಖ್ಯ ಗುರುಗಳಾದ ಮಹಾದೇವ ಗುಜ್ಜರ್, ಸೇರಿದಂತೆ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಿಕ್ಷಕ ತುಕಾರಾಮ ಹಳ್ಳಿಖೇಡ ನಿರೋಪಿಸಿದರು. ಗೋಪಾಲ್ ವಂದಿಸಿದರು.



ಚಿಟಗುಪ್ಪ:ಜಿಲ್ಲಾ ರಾಜ್ಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಹಾಗೂ ದೈಹಿಕ ಶಿಕ್ಷಕಿಯರಿಗೆ ಸಮಾರಂಭದಲ್ಲಿ ಹಾಜರಿದ್ದ ಗಣ್ಯರು ಸನ್ಮಾನಿಸಿ ಅಭಿನಂದಿಸಿ ಪ್ರಮಾಣ ಪತ್ರ ವಿತರಿಸಿದರು.



ಚಿಟಗುಪ್ಪ:– ಮಹಾರಾಷ್ಟ್ರ ರಾಜ್ಯದ ಧಾರಾಶಿವ ಜಿಲ್ಲೆಯ ಕಳಂಬ ಗ್ರಾಮದಲ್ಲಿ ಪಾಟೀಲ್ ಪರಿವಾರದ ಪೂಜಾ ವಿಶಾಲ ಅವರ ಮದುವೆ ಸಮಾರಂಭದ ನ್ನಿಮಿತ್ಯ ಹಮ್ಮಿಕೊಂಡಿದ್ದ ಔತಣಕೂಟದಲ್ಲಿ ಕರ್ನಾಟಕ ರಾಜ್ಯದ ಬೀದರ್ ಜಿಲ್ಲೆಯ ಫಾತ್ಮಪುರ್ ಗ್ರಾಮದ ಜಮಾದರ್ ಪರಿವಾರದವರು ಭಾಗವಹಿಸಿ ಶುಭ ಹಾರೈಸಿದರು. (ಮಲ್ಲಮ್ಮ ನುಡಿ ಚಿತ್ರ)

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ; ಅರ್ಜಿಯ ಅವಧಿ ಮಾ.30ರವರೆಗೆ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.17– ಇಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2023–24ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳ ಕೋರ್ಸುಗಳಿಗೆ ಶುಲ್ಕ ಮರು ಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿ ಮಾ.30ರವರೆಗೆ ವಿಸ್ತರಿಸಲಾಗಿದೆ.

ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತ–ಕೋತ್ತರ ಪದವಿಗಳ ಕೆಲ ಕೋರ್ಸುಗಳಿಗೆ ಕೌನ್ಸೆಲಿಂಗ್ ತಡವಾಗಿ ಪ್ರಾರಂಭವಾಗಿರುವ ಮತ್ತು ಹಿಂದಿನ ಶೈಕ್ಷಣಿಕ ವರ್ಷದ ಫಲಿತಾಂಶ ತಡವಾಗಿ ನೀಡಿದ ಕಾರಣ ಈ ಕೋರ್ಸುಗಳಿಗೆ ಶುಲ್ಕ ಮರು ಪಾವತಿ ಯೋಜನೆ ಸೌಲಭ್ಯಕ್ಕಾಗಿ ಅವಧಿಯನ್ನು ವಿಸ್ತರಿಸಲಾಗಿದೆ. ಆಸಕ್ತರು ವೆಬ್ ಸೈಟ್ ವಿಳಾಸ: http://ssp.postmatric.karnataka.gov.in/ ನಲ್ಲಿ ಮಾ.30ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: ʼಣಣಠಿ://ಛಿಛಿತಿಜ.ಞಚಿಡಿ–ಟಿಚಿಣಚಿಞಚಿ.ರಠತ.ಟಿ ಭೇಟಿ ನೀಡಬಹುದಾಗಿದೆ. ಇಲಾಖೆ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005, ಇಮೇಲ್: ಛಿಛಿತಿಜ–ʼಜಟಠಿಟುಟಜ@ರಟಚಿಟ.ಛಿಂಟ ಅಥವಾ ಲ್ರಾಜಗಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್: ಠಿಥಣಟಚಿಣಡಿಟಿಭಿಜಟಠಿ@ಞಚಿಡಿಟಚಿಣಚಿಞಚಿ.ರಠತ.ಟಿಗೆ ಭೇಟಿ ನೀಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ನೂತನ ಗೋಶಾಲೆ ಉದ್ಘಾಟನೆ ಹಾಗೂ ಶಂಕರ ಮಠದ ಶಿಲಾನ್ಯಾಸ ಕಾರ್ಯಕ್ರಮ: ನರಸಿಂಹ ದಿಕ್ಷಿತ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ನಾಳೆ (ಈ ತಿಂಗಳ 18ರಂದು) ಶೃಂಗೇರಿ ಶಾರದಾ ಪೀಠದ ಪ್ರಸ್ತುತ ಉತ್ತರಾಧಿಕಾರಿ ಶ್ರೀ ಶ್ರೀ ಶ್ರೀ ವಿಧುಶೇಖರ ಭಾರತಿ ತೀರ್ಥ ಸ್ವಾಮಿಜಿ ಅವರು ಪ್ರ ಪ್ರಥಮ ಬಾರಿಗೆ ಬೀದರ್‌ಗೆ ಆಗಮಿಸುತ್ತಿದ್ದು,ದಕ್ಷಿಣಾಮ್ನಾಯ ಶೃಂಗೇರಿ ಶಾರದಾ ಪೀಠದ ಜಗದ್ಗುರು ಶ್ರೀ ಶ್ರೀ ಶ್ರೀ ಭಾರತಿ ತೀರ್ಥ ಮಹಾ ಸ್ವಾಮಿಜಿ ಅವರ ಪಿಠಾರೊಹಣದ ಸುವರ್ಣ ಮಹೋತ್ಸವದ ನಿಮಿತ್ಯ ಸನಾತನ ಧರ್ಮ ವಿಜಯ ಯಾತ್ರೆ ಕೈಗೊಳ್ಳುವ ಮೂಲಕ ಬೀದರ್ ನಗರಕ್ಕೆ ಆಗಮಿಸುತ್ತಿರುವರು ಎಂದು ರಾಂಪುರೆ ಕಾಲೋನಿಯ ಶ್ರೀ ಸತ್ಯನಾರಾಯಣ ಗೋಶಾಲೆಯ ಅರ್ಚಕರಾದ ನರಸಿಂಹ ದಿಕ್ಷಿತ ಮಹಾರಾಜ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿರವಿವಾರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಉತ್ತರ ಭಾರತದಲ್ಲಿ ಪ್ರಯಾಗರಾಜ, ವಾರಣಾಸಿ, ಅಯೋಧ್ಯ, ಉಜ್ಜಯನಿ ಹೀಗೆ ನಾಲ್ಕು ಶಂಕರಾಚಾರ್ಯರ ಪೀಠಗಳು ಇದ್ದಂತೆ ಕರ್ನಾಟಕದ ಶೃಂಗೇರಿ ಶಾರದಾ ಪೀಠದಲ್ಲಿ ದಕ್ಷಿಣ ಭಾರತದ ಮಠ ಇದಾಗಿದೆ. ಆದ್ದರಿಂದ ಇದ–ಕ್ಕೆ ದಕ್ಷಿಣಾಮ್ನಾಯ ಎಂದು ಕರೆಯಲಾಗುತ್ತದೆ ಎಂದವರು ತಿಳಿಸಿದರು.

ಪೂಜ್ಯ ವಿಧುಶೇಖರ ತೀರ್ಥ ಸ್ವಾಮಿಗಳ ಎರಡು ದಿವಸದ ಕಾರ್ಯಕ್ರಮದ ವಿವರಣೆ ನೀಡಿರುವ ದಿಕ್ಷಿತರವರು, 18ರಂದು ಮಂಗಳವಾರ ಸಾಯಂಕಾಲ 5 ಗಂಟೆಗೆ ಪೂಜ್ಯರನ್ನು ಬರಮಾಡಿಕೊಳ್ಳುವ ಕಾರ್ಯಕ್ರಮ ಜರುಗಲಿದೆ.ನಗರದ ಎಮ್.ಎಸ್.ಪಾಟೀಲ ಫಂಕ್ಷನ್ ಹಾಲ್‌ನಿಂದ ಸತ್ಯನಾರಾಯಣ ಮಂದಿರದ ಗೋಶಾಲೆ ವರೆಗೆ ವೇದಘೋಷ ಹಾಗೂ ವಿವಿಧ ಸಮಾಜದ ಸುಮಂಗಲೆಯರಿಂದ ಕುಂಭ ಕಳಸದೊಂದಿಗೆ ಪೂಜ್ಯರ ಶೋಭಾಯಾತ್ರೆ ಜರುಗಲಿದೆ. ನಂತರ ಧೂಳಿ ಪಾದ ಪೂಜನ, ನಂತರ ವಿವಿಧ ಸಮಾಜ ಮುಖಂಡರಿಂದ ಪೂಜ್ಯರಿಗೆ ಸನ್ಮಾನ ಹಾಗೂ ಫಲಪುಷ್ಪ ಸಮರ್ಪಣೆ,ತದನಂತರ ಪೂಜ್ಯ–ರಿಂದ ಅನುಗ್ರಹ ಭಾಷಣ, ತದನಂತರ ನೆರೆದ ಭಕ್ತಾದಿಗಳಿಗೆ ಮಹಾ ಪ್ರಸಾದ ವಿತರಣೆ ಕಾರ್ಯಕ್ರಮ ಜರುಗಲಿದೆ ರಾತ್ರಿ 9.30 ಗಂಟೆಗೆ ಸರಿಯಾಗಿ ಚಂದ್ರಮೌಳೇಶ್ವರ ಪೂಜಾ ಆರಂಭವಾಗಲಿದೆ ಎಂದರು.

19ರಠದು ಬುಧವಾರ ಬೆಳಿಗ್ಗೆ 10 ಗಂಟೆಗೆ ಗೋಪೂಜನ,ನಂತರ ನೂತನವಾಗಿ ನಿರ್ಮಿಸಿರುವ ಗೋಶಾಲೆಯ ಉದ್ಘಾಟನೆ ಕಾರ್ಯಕ್ರಮ ಜರುಗಲಿದೆ. ನಂತರ ರಾಜಗೋಪುರದ ಪೂಜೆ,ತದನಂತರ ಶಂಕರಮಠ ನಿರ್ಮಾಣದ ಭೂಮಿ ಪೂಜನ ಮತ್ತು ಶಿಲಾನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ. ಇದಾದ ಬಳಿಕ ಗುರು ಪಾದ ಪೂಜನ, ಗುರುದರ್ಶನ, ತರುವಾಯ ಮಹಾಪ್ರಸಾದ ವಿತರಣೆ ಜರುಗಲಿದೆ. ಈ ಎಲ್ಲ ಕಾರ್ಯಕ್ರಮಗಳು ಶಂಕರ ಸೇವಾ ಭಕ್ತ ಮಂಡಳಿ, ಬೀದರ್ ವೈದಿಕ ವಿಪ್ರ ಸಂಘ ಹಾಗೂ ಗುರು ಸೇವಾ ನಿಧಿಯ ಸಮಸ್ತ ಪರಿವಾರದವರು ಆಯೋಜಿಸಿದ್ದಾರೆ ಎಂದು ನರಸಿಂಹ ದಿಕ್ಷಿತ ಮಹಾರಾಜ ಹೇಳಿದರು.

ಮೇಲಿನ ಮೂರು ಸಂಸ್ಥೆಗಳ ಮುಖ್ಯಸ್ಥರಾದ ಶಾಮಕಾಂತ ಕುಲಕರ್ಣಿ, ಸೂರ್ಯಕಾಂತ ಕುಲಕರ್ಣಿ, ದಿನಕರರಾವ ಕುಲಕರ್ಣಿ, ಪ್ರಭುರಾವ ಕುಲಕರ್ಣಿ ರವಿಂದ್ರ ಸ್ವಾಮಿ ಪತ್ರಿಕಾಗೋಷ್ಠಿಯಲ್ಲಿದ್ದರು.

# ನರಸಪ್ಪಗೆ ಪುನೀತ್ ರಾಜಕುಮಾರ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ತಾಲ್ಲೂಕಿನ ನಾಗೋರಾ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನರಸಪ್ಪ ಜಾನಕನೋರ ಅವರಿಗೆ ಸಮಾಜ ಸೇವೆಗಾಗಿ ಕರ್ನಾಟಕ ರಕ್ಷಣಾ ವೇದಿಕೆ ಕಾವಲು ಪಡೆಯ ರಾಜ್ಯಮಟ್ಟದ ಕರ್ನಾಟಕ ರತ್ನ ಪುನೀತ್ ರಾಜಕುಮಾರ ಪ್ರಶಸ್ತಿ ದೊರೆತಿದೆ. ನಗರದ ಕನ್ನಡ ಸಾಹಿತ್ಯ ಸಂಘದಲ್ಲಿ ವೇದಿಕೆ ಕಾವಲು ಪಡೆ ವತಿಯಿಂದ ಸೋಮವಾರ ನಡೆದ ಚಿತ್ರನಟ ಪುನೀತ್ ರಾಜಕುಮಾರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಜೈ ಭಾರತ ಮಾತಾ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜ ಪ್ರಶಸ್ತಿ ಪ್ರದಾನ ಮಾಡಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ವೇದಿಕೆ ಕಾವಲು ಪಡೆಯ ರಾಜ್ಯ ಅಧ್ಯಕ್ಷ ಸುರೇಶ, ಜಿಲ್ಲಾ ಅಧ್ಯಕ್ಷ ಅವಿನಾಶ್ ಬುಧೇರಾ–ಕರ್ ಮತ್ತಿತರರು ಇದ್ದರು.

# 23ರಂದು ಒಳ ಮೀಸಲಾತಿ ಕುರಿತು ರಾಜ್ಯ ಮಟ್ಟದ ವಿಚಾರ ಸಂಕೀರಣ: ಮಾರುತಿ ಬೌದ್ದೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ಈ ತಿಂಗಳ 23ರಂದು ಭಾನುವಾರ ಬೆಳಿಗ್ಗೆ 11. 30 ಗಂಟೆಗೆ ರಾಜ್ಯ ರಾಜ್ಯಧಾನಿ ಬೆಂಗಳೂರಿನ ಕಂಟನ್‌ಮೆಂಟ್ ರೈಲ್ವೆಸ್ಟೇಷನ್ ಬಳಿ ಇರುವ ವಸಂತನಗರ ಬಡಾವಣೆಯಲ್ಲಿರುವ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಒಳ ಮೀಸಲಾತಿ ಕುರಿತು ರಾಜ್ಯ ಮಟ್ಟದ ವಿಚಾರ ಸಂಕಿರಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬಲಗೈ ಹೊಲೆಯ ಸಂಬಂಧಿತ ಜಾತಿಗಳ ಒಳ ಮೀಸಲಾತಿ ಹೋರಾಟ ಸಮಿತಿ ಜಿಲ್ಲಾ ಅಧ್ಯಕ್ಷ ಮಾರುತಿ ಬೌದ್ದೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಈ ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿ ಒಳಮೀಸಲಾತಿ ಏಕ ಸದಸ್ಯತ್ವ ವಿಚಾರಣಾ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ನಾಗವೋಹನ ದಾಸರು ಭಾಗವಹಿಸಿ ಮನವಿ ಪತ್ರ ಸ್ವೀಕರಿಸಲು ಒಪ್ಪಿರುತ್ತಾರೆ. ಮತ್ತು ರಾಜ್ಯದ ವಿವಿಧ ಜಿಲ್ಲೆಗಳಿಂದ ಬಲಗೈ ಹೊಲೆಯ ಸಂಬಂಧಿ ಉಪಜಾತಿಗಳ ಪ್ರತಿನಿಧಿಗಳು ಭಾಗವಹಿಸಿ ಆಯೋಗದ ಅಧ್ಯಕ್ಷರಿಗೆ ಮನವಿ ಪತ್ರ ಸಲ್ಲಿಸಲಿದ್ದಾರೆ. ಇದರಲ್ಲಿ ಕುಲಬಾಂಧವರು ವಿಚಾರವಂತರು, ಗಣ್ಯರು, ವಕೀಲರು, ರಾಜಕಾರಣಿಗಳು, ವಿದ್ಯಾರ್ಥಿಗಳು, ಸಮಾಜದ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದವರು ತಿಳಿಸಿದರು.

ಸಮಿತಿ ಉಪಾಧ್ಯಕ್ಷ ವಿಠಲದಾಸ ಪ್ಯಾಗೆ ಮಾತನಾಡಿ, ದೇಶದ ಪ.ಜಾ.ಗಳಲ್ಲಿನ ಉಪಜಾತಿಗಳಿಗೆ ಒಳಮೀಸಲಾತಿ ಜಾರಿ ಮಾಡಲು ಆಯಾ ರಾಜ್ಯ ಸರಕಾರಗಳು ಅಧಿಕಾರ ಹೊಂದಿವೆ ಎಂದು ಅಗಸ್ಟ 01, 2024 ರಂದು ಸುಪ್ರಿಂಕೋರ್ಟಿನ ಏಳು ನ್ಯಾಯಾಧೀಶರನ್ನೊಳಗೊಂಡು ಸಂವಿಧಾನ ಪೀಠ ತೀರ್ಪು ನಿಡುತ್ತಿದ್ದಂತೆ ಇಡಿಭಾರತದಾದ್ಯಂತ ರಾಜಕೀಯ ಸಂಚಲನ ಉಂಟಾಗಿದೆ ಉತ್ತರ ಭಾರತದ ಪ್ರಮುಖ ರಾಜ್ಯಗಳಾದ ಉತ್ತರ ಪ್ರದೇಶ, ಬಿಹಾರ, ಮಧ್ಯಪ್ರದೇಶಗಳಲ್ಲಿ ಒಳ ಮೀಸಲಾತಿ ವಿವಾದ ವ್ಯಕ್ತವಾಗಿದೆ. ತೇಲಂಗಾಣಾ, ಕರ್ನಾಟಕ ಸರಕಾರಗಳು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಏಕಸದಸ್ಯ ಆಯೋಗವನ್ನು ನೇಮಿಸಿ ವರದಿಯನ್ನು ಆಹ್ವಾನಿಸಿದೆ. ಕರ್ನಾಟಕದಲ್ಲಿ ಒಳಮೀಸಲಾತಿ ಸಂಬಂಧ ಸುಪ್ರಿಂಕೋರ್ಟ ತೀರ್ಪನ್ನು ಎಡಗೈ–ಬಲಗೈ(ಹೊಲೆಯ–ಮಾದಿಗ) ಸಮುದಾಯಗಳು ಸ್ವಾಗತಿಸಿವೆ ಎಂದರು.

ಮಾದಿಗ ಸಮುದಾಯದ ಸಂಘಟನೆಗಳು ಮತ್ತು ಮುಖಂಡರುಗಳು ಸದಾಶಿವ ವರದಿ ಆಧಾರದ ಮೇಲೆ ತಕ್ಷಣವೇ ಜಾರಿಗೆ ತರಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರಕಾರದ ಮೇಲೆ ಒತ್ತಡ ಹೇರುತ್ತಿದ್ದಾರೆ. ಆದರೆ ಬಲಗೈ ಸಮುದಾಯದ ಮುಖಂಡರು ಮತ್ತು ಸಂಘಟನೆಗಳು ಸದಾಶಿವ ಆಯೋಗದ ವರದಿ ಆಧಾರದ ಮೇಲೆ ಒಳ ಮೀಸಲಾತಿ ಜಾರಿ ತರುವುದು ಬೇಡ. ಏಕೆಂದರೆ ಈ ವರದಿಯಲ್ಲಿರುವ ದತ್ತಾಂಶ ಅಂಕಿ ಅಂಶಗಳು ತಪ್ಪು ಮಾಹಿತಿಯಿಂದ ಕೂಡಿದ್ದು ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂಬ ಉಪಜಾತಿಗಳ ಶೀರುನಾಮೆಯಡಿ ದಕ್ಷಿಣ ಕರ್ನಾಟಕ, ಮಧ್ಯ ಕರ್ನಾಟಕ ಉತ್ತರ ಕರ್ನಾಟಕ ಮತ್ತು ಕರಾವಳಿ ಕರ್ನಾಟಕದ ಭಾಗಗಳಲ್ಲಿ ಪರಸ್ಪರ ಏರುಪೇರು ಆಗಿದೆಯೆಂದು ಮತ್ತು ಈ ಆಯೋಗದಲ್ಲಿ ಉಲ್ಲೇಖಿಸಿರುವ 101 ಉಪಜಾತಿಗಳು ಈಗ 184ಕ್ಕೆ ಏರಿರುವುರಿಂದ ಮತ್ತೊಮ್ಮೆ ವೈಜ್ಞಾನಿಕ ವರದಿ ಉಪಜಾತಿಗಳೊಂದಿಗೆ ಸ್ಪಷ್ಟವಾಗಿ ನಮೂದಿಸಿ ಜಾರಿಗೊಳಿಸಬೇಕಾಗಿದೆ ಎಂದರು.

ಈ ಹಿಂದಿನ ಬಿಜೆಪಿ ಕರ್ನಾಟಕ ಸರ್ಕಾರ ತರಾತುರಿಯಲ್ಲಿ ಪ.ಜಾ. ಯೊಳಗಿನ (ಎಸ್.ಸಿ.) ಒಳಮೀಸಲಾತಿಯನ್ನು ನಾಲ್ಕು ಗುಂಪುಗಳಾಗಿ ವಿಂಗಡಿಸಿ ಬಿಜೆಪಿ ಸರಕಾರ ನ್ಯಾಯ ಸಮ್ಮತವಾಗಿರುವುದಿಲ್ಲ. ವಸ್ತು ನಿಷ್ಠೆ, ವೈಜ್ಞಾನಿಕ ಸಮಗ್ರ ಅಧ್ಯಯನವಿಲ್ಲದೇ ಅಸ್ಪೃಶ್ಯರು (ಹೊಲೆಯ) ಬಲಗೈ ಸಮುದಾಯವು ಎಲ್ಲಾ ಸೌಲಭ್ಯ ಪಡೆದಿರುವುದೆಂದು ಹಿಂದಿನ ಬಿಜೆಪಿ ಸರಕಾರದ ಸಚಿವ ಸಂಪುಟ ಉಪ ಸಮಿತಿ ಅಧ್ಯಕ್ಷರಾದ ಮಾಜಿ ಸಚಿವ ಜೆ.ಸಿ. ಮಾದುಸ್ವಾಮಿ ಉಪ ಸಮಿತಿ ವರದಿಯಲ್ಲಿ ಹೇಳಿರುವುದು ಅವೈಜ್ಞಾನಿಕವಾಗಿದೆ. ನ್ಯಾಯಮೂರ್ತಿ ಎ.ಜಿ. ಸದಾಶಿವ ಆಯೋಗದ ವರದಿ ಸಹ ಬೊಮ್ಮಾಯಿ ಸರಕಾರ ಸಾರಾಸಗಟವಾಗಿ ತಿರಸ್ಕಾರ ಮಾಡಿದೆ. ಸಚಿವ ಸಂಪುಟದ ಉಪ ಸಮಿತಿ ತನ್ನದೇ ಆದ ಸೂತ್ರದ ಪ್ರಕಾರ ಪರಿಶಿಷ್ಟ ಜಾತಿಗಳನ್ನು (ಎಸ್.ಸಿ.) ವರ್ಗೀಕರಣ ಮಾಡಿದೆ. ಗ್ರೂಪ್–1,ಗ್ರೂಪ್–2,ಗ್ರೂಪ್–3, ಗ್ರೂಪ್–4 ಗುಂಪುಗಳನ್ನು ಮಾಡಿ ಗ್ರೂಪ್–2ರಿಂದ ಹಾಗೂ ಗ್ರೂಪ್–3 ಕೆಲವು ಜಾತಿಗಳನ್ನು ಗ್ರೂಪ್–4ನ್ನು ಮಾಡಿ ಹೊಲೆಯ, ಹೊಲಿಯ, ಹೊಲೆಯಾರ, ಉಪಜಾತಿಗಳನ್ನು ಸೇರಿಸಿ ಬಲಗೈ ಸಮಾಜಕ್ಕೆ ಬಿಜೆಪಿ ಸರಕಾರ ಘನಘೋರ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು.

ಸಮಿತಿಯ ಗೌರವಾಧ್ಯಕ್ಷರಾದ ಡಾ.ಕಾಶಿನಾಥ ಚಲವಾ ಮಾತನಾಡಿ, ಹಾಲಿ ಸಿದ್ಧರಾಮಯ್ಯನವರ ನೇತೃತ್ವದ ಸರಕಾರ ನ್ಯಾಯಮೂರ್ತಿ ನಾಗವೋಹನ ದಾಸ್ ಅಧ್ಯಕ್ಷತೆಯಲ್ಲಿ ಒಳಮೀಸಲಾತಿ ಆಯೋಗವನ್ನು ನೇಮಿಸಿದೆ. ಹಾಗಾಗಿ ಈ ಹಿಂದಿನ ಬಿಜೆಪಿ ಸರ್ಕಾರವನ್ನು ಅವೈಜ್ಞಾನಿಕ ಒಳ ಮೀಸಲಾತಿಯುನ್ನು ಹಂಚಿಕೆ ಮಾಡಿರುವುದು ಅಸಮರ್ಪಕವಾಗಿದೆ. ಆದ್ದರಿಂದ ಕರ್ನಾಟಕ ರಾಜ್ಯದಲ್ಲಿರುವ ಬಲಗೈ ಹೊಲೆಯ ಸಂಬಂಧಿ ಉಪಜಾತಿಗಳು ಬಹು ದೊಡ್ಡ ಸಂಖ್ಯೆಯಲ್ಲಿದೆ. ಒಟ್ಟಾರೆ ಬಲಗೈ ಸಮುದಾಯವು 60 ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿದೆ. ಈ ಹಿನ್ನೆಲೆಯಲ್ಲಿ ಒಳ ಮೀಸಲಾತಿ ಹಂಚಿಕೆಯಲ್ಲಿ ಯಾವ ಸಮುದಾಯಕ್ಕೂ ಅನ್ಯಾಯವಾಗದಿರಲೆಂದು ನಮ್ಮ ಸಮಿತಿ ಒತ್ತಾಯಿಸುತ್ತದೆ ಎಂದರು. ಪ್ರಧಾನ ಕಾರ್ಯದರ್ಶಿ ಉಪಾಧ್ಯಕ್ಷ ಮಹಾಲಿಂಗ ಬೆಲ್ದಾಳ, ಗಂಗಮ್ಮ ಫುಲೆ, ಜಿಲ್ಲ ಸಹ ಕಾರ್ಯದರ್ಶಿ ರಾಜಪ್ಪ ಗುನ್ನಳ್ಳಿಕರ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ವಿನಯ ಮಾಳಗೆ, ಖಜಾಂಚಿ ದಶರಥ ಗುರು, ಯುವ ಮುಖಂಡರಾದ ಸುಂದರ್, ಶ್ರೀಧರ ಸೋಮನೋರ್ ಹಾಗೂ ಇತರರು ಪತ್ರಿಕಾಗೋಷ್ಟಿಯಲ್ಲಿದ್ದರು.

# ಗುರು ನಾನಕ ಬಿ.ಇಡ್. ಕಾಲೇಜಿಗೆ ನ್ಯಾಕ್ ಬಿ+



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ.17 : ನಗರದ ಟೀರ್ಸ್ ಕಾಲೋನಿಯಲ್ಲಿರುವ ಗುರು ನಾನಕ ಬಿ.ಇಡ್ ಕಾಲೇಜ್ ಮೊದಲು ಸುತ್ತಿನ ಮೌಲ್ಯಮಾಪನದಲ್ಲಿಯೇ ನ್ಯಾಕ್ ಬಿಪ್ಲಸ್ ಗ್ರೇಡಿಂಗ್ ಪಡೆದು–ಕೊಂಡಿದೆ. ನ್ಯಾಕ್ ಪೀರ್ ತಂಡವು ಗುರು ನಾನಕ್ ಶಿಕ್ಷಣ ಮಹಾವಿದ್ಯಾಲಯಕ್ಕೆ (ಬಿ.ಇಡ್) ಭೇಟಿ ನೀಡಿದ್ದು, ನ್ಯಾಕ್ ನಿರ್ಧರಿಸಿದ ಏಳು ಮಾನದಂಡಗಳ ಆಧಾರದ ಮೇಲೆ ಕಾಲೇಜಿನ ಕಾರ್ಯಕ್ರಮಗಳನ್ನು ಮೌಲ್ಯಮಾಪನ ಮಾಡಿ 7.00 ಸ್ಕೇಲ್‌ನಲ್ಲಿ 2.57 ಸಿಜಿಪಿಎ ಯೊಂದಿಗೆ ನ್ಯಾಕ್ ಬಿಪ್ಲಸ್ ಗ್ರೇಡ್‌ದೊಂದಿಗೆ ಮಾನ್ಯತೆ ಮಾಡಿರುತ್ತಾರೆ. ಪೀರ್ ತಂಡವು ಕಾಲೇಜಿನ್ ಎಲ್ಲಾ ದಾಖಲೆಗಳು ಸಾಕ್ಷಿಗಳು ಮತ್ತು ಸಾಧನೆಗಳನ್ನು ಪರಿಶೀಲಿಸಿ ವಿದ್ಯಾರ್ಥಿಗಳ ದೃಷ್ಟಿಕೋನವನ್ನು ವಿಸ್ತರಿಸಲು ಮತ್ತು ಕೌಶಲ್ಯ ಹಾಗೂ ವೃತ್ತಿಪರ ಶ್ರೇಷ್ಠತೆಯನ್ನು ಬೆಳೆಸುವಲ್ಲಿ ಸಂಸ್ಥೆಯ ಪ್ರಯತ್ನಗಳನ್ನು ಶ್ಲಾಘಿಸಿದೆ. ನ್ಯಾಕ್ ಮಾನ್ಯತೆಯಲ್ಲಿ ಪ್ರಥಮ ಬಾರಿಗೆ ರಾಷ್ಟ್ರಮಟ್ಟದಲ್ಲಿ ಬಿಪ್ಲಸ್ ಗ್ರೇಡ್ ಪಡೆದ ಸಂಸ್ಥೆಗಳಲ್ಲಿ ಗುರು ನಾನಕ ಶಿಕ್ಷಣ ಮಹಾವಿದ್ಯಾಲಯವು 12ನೇ ಸ್ಥಾನದಲ್ಲಿದ್ದು, ಕರ್ನಾಟಕದಲ್ಲಿ ಖಾಸಗಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮೊದಲನೇ ಸ್ಥಾನ ಪಡೆದು–ಕೊಂಡು ಗೌರವಕ್ಕೆ ಪಾತ್ರವಾಗಿದೆ.

ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು ಮಾತನಾಡುತ್ತ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ವಿವಿಧ ವಿಭಾಗಗಳಲ್ಲಿ ವ್ಯಾಸಂಗ ಮಾಡಲು ಅವಕಾಶ ಕಲ್ಪಿಸಲಾಗುತ್ತಿದೆ. ಪಾರದರ್ಶಕ ಮತ್ತು ನಿರಂತರ ಮೌಲ್ಯಪಾಪನವು ವಿದ್ಯಾರ್ಥಿಗಳ ಒಟ್ಟಾರೆ ಅಭಿವೃದ್ಧಿಗೆ ಸಹಾಯ ವಾಗಲಿದೆ ಎಂದು ಗುರು ನಾನಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ॥ ರೇಷ್ಮಾ ಕೌರ ಹೇಳಿದರು. ನಾವು ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಬದ್ಧಗಾಗಿದ್ದೇವೆ ಮತ್ತು ಇತ್ತೀಚಿನ ಸಾಧನೆಯು ಶ್ರಮದಾಯಕ ಪ್ರಯತ್ನಗಳ ಫಲಿತಾಂಶವಾಗಿದೆ ಎಂದರು. ಮುಂಬರುವ ವರ್ಷಗಳಲ್ಲಿ ಅತ್ಯುತ್ತಮವಾಗಿ ಮತ್ತು ಹೊಸ ಎತ್ತರವನ್ನು ಮುಟ್ಟಲು ಸಂಸ್ಥೆಗೆ ಸಹಾಯವಾಗಲಿದೆ ಎಂದರು.

ಸಂಸ್ಥೆಯ ಅಧ್ಯಕ್ಷ ಡಾ॥ ಬಲಬೀರ ಸಿಂಗ್ ಅವರು ಈ ಗಮನಾರ್ಹ ಸಾಧನೆಗೆ ಕಾರಣಕರ್ತರಾದ ಪ್ರಾಂಶುಪಾಲರು, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು, ಹಳೆಯ ವಿದ್ಯಾರ್ಥಿಗಳು ಮತ್ತು ಪೋಷಕರನ್ನು ಅಭಿನಂದಿಸಿದ್ದಾರೆ.

# ಜಿಲ್ಲೆಯ ರೈತರ ಜ್ವಲಂತ ಸಮಸ್ಯೆಗಳು ಬಗೆಹರಿಸಲು ಮುಖ್ಯಮಂತ್ರಿಗಳಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ಜಿಲ್ಲೆಯ ರೈತರು ಪ್ರತಿ ವರ್ಷ ಹಲವಾರು ಸಮಸ್ಯೆಗಳಿಗೆ ಸಿಲುಕಿ ನರಳಾಡುತ್ತಿದ್ದು, ಆ ಸಮಸ್ಯೆಗಳಿಗೆ ಸರ್ಕಾರ ರೈತರ ಈ ಕೆಳಕಂಡ ಸಮಸ್ಯೆಗಳಿಗೆ ಸ್ಪಂದಿಸಿ, ಅತೀ ಶೀಘ್ರದಲ್ಲಿ ಬಗೆಹರಿಬೇಕು.ರಾಜ್ಯದಲ್ಲಿ ರೈತರು ಹೊಸದಾಗಿ ಕೃಷಿ ಪಂಪಸೆಟ್‌ಗಳು ಅಳವಡಿಕೆ ಮಾಡಲು ವಿದ್ಯುತ್ ನೊಂದಣಿ ಸಲುವಾಗಿ ಸುಮಾರು 50–60 ಸಾವಿರ ಖರ್ಚು ಬರುತ್ತಿದ್ದು, ಅದನ್ನು ಮೊದಲಿನಂತೆ ಜಾರಿ ಮಾಡಬೇಕು ಮತ್ತು ನೊಂದಣಿ ಪ್ರಕ್ರಿಯೆ ಶೀಘ್ರದಲ್ಲಿ ಜಾರಿ ಮಾಡಬೇಕು. ಬೀದರ ಸಹಕಾರ ಸಕ್ಕರೆ ಕಾರ್ಖಾನೆ ಈಗಾಗಲೇ ಡಿ.ಸಿ.ಸಿ. ಬ್ಯಾಂಕಿನವರು ತಮ್ಮ ವಶಕ್ಕೆ ಪಡೆದು ಮಾರಾಟ ಮಾಡಿರುತ್ತಾರೆ. ಆದರೆ ತಮ್ಮ ನೇತೃತ್ವದಲ್ಲಿ ಅದನ್ನು ವಾಪಸ್ ಪಡೆಯಲಾಯಿತು. ಆದರೆ ಜಿಲ್ಲಾಡಳಿತದಿಂದ ಇಲ್ಲಿಯವರೆಗೆ ಲೀಸ್ ಅಥವಾ ಇನ್ನೀತರ ಕಾರ್ಖಾನೆ ಪ್ರಾರಂಭ ಮಾಡುವ ಪ್ರಕ್ರಿಯೆ ನಡೆದಿಲ್ಲ. ಕೂಡಲೇ ಏನಾದರೂ ಮಾಡಿ, ಕಾರ್ಖಾನೆ ಪ್ರಾರಂಭ ಮಾಡಿಸಬೇಕು. ಜಿಲ್ಲಾ ಸಹಕಾರ ಬ್ಯಾಂಕಿನಿಂದ (ಡಿ.ಸಿ.ಸಿ) ರೈತರಿಗೆ ಸಾಲ ಸಿಗುತ್ತಿಲ್ಲ.

ಅದನ್ನು ಕೂಡಲೇ ರೈತರಿಗೆ ಸಾಲ ಕೊಡಿಸುವ ವ್ಯವಸ್ಥೆ ಮಾಡಿಸಬೇಕು.ಬೆಳೆ ವಿಮೆ ಮಾಡಿಸಿದ ರೈತರಿಗೆ ಇಲ್ಲಿಯವರೆಗೆ ಬೆಳೆ ಹಾಳಾದರೂ ಕೂಡ ಬೆಳೆ ವಿಮೆ ಪರಿಹಾರ ಖಾತೆಗೆ ಜಮೆ ಆಗಿರುವುದಿಲ್ಲ. ಅದನ್ನು ಶೀಘ್ರದಲ್ಲಿ ಜಮೆ ಮಾಡಿಸಬೇಕು.ಪ್ರಸಕ್ತ ಸಾಲಿನಲ್ಲಿ ಮಂಜಿನಿಂದ ತೊಗರಿ ಬೆಳೆ ಸಂಪೂರ್ಣ ಹಾಳಾಗಿದ್ದು,ಅದಕ್ಕೆ ಅತೀ ಶೀಘ್ರದಲ್ಲಿ ಎಕರೆಗೆ ರೂ. 25000/– ರಂತೆ ಬೆಳೆ ಹಾನಿ ಪರಿಹಾರ ಕೊಡಿಸಬೇಕು. ಸಕ್ಕರೆ ಕಾರ್ಖಾನೆಗಳಿಗೆ ರೈತರು ಕಬ್ಬು ಸರಬರಾಜು ಮಾಡಿ, 3 ತಿಂಗಳು ಕಳೆದರೂ ಕೂಡ ಇಲ್ಲಿಯವರೆಗೆ ಯಾವ ರೈತರ ಖಾತೆಗೆ ಕೂಡ ಬಿಲ್ಲು ಜಮೆ ಆಗಿರುವುದಿಲ್ಲ.ಅದನ್ನು ಶೀಘ್ರದಲ್ಲಿ ಎಲ್ಲಾ ರೈತರ ಖಾತೆಗೆ ಜಮೆ ಮಾಡಿಸಬೇಕು.ಪ್ರಸಕ್ತ ಸಾಲಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜಿಲ್ಲೆಯ ಎಲ್ಲಾ ಸಕ್ಕರೆ ಕಾರ್ಖಾನೆಯ ಅಧ್ಯಕ್ಷರು ಹಾಗೂ ರೈತ ಮುಖಂಡರ ಸಮ್ಮುಖದಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸಭೆ ನಡೆಸಿ, ಪ್ರತಿ ಟನ್ ಕಬ್ಬಿಗೆ ರೂ. 2700/–ನಿಗದಿಪಡಿಸಲಾಗಿತ್ತು. ಆದರೆ ಇಲ್ಲಿಯವರೆಗೆ ಕಾರ್ಖಾನೆಯವರು ರೂ. 2700/– ಕೊಟ್ಟಿರುವುದಿಲ್ಲ. ಆದಕಾರಣ ಅತೀ ಶೀಘ್ರದಲ್ಲಿ ಸಚಿವರು ಬೆಲೆ ನಿಗದಿ ಮಾಡಿದಂತೆ ರೂ. 2700/–ರೈತರ ಖಾತೆಗೆ ಜಮೆ ಮಾಡಿಸಬೇಕು. ರೈತರು ಬೆಳೆದ ಬೆಳೆ ಕಾಡು ಪ್ರಾಣಿಗಳು, ದೊಡ್ಡ ಪ್ರಮಾಣದಲ್ಲಿ ಬೆಳೆ ನಾಶ ಮಾಡುತ್ತಿದ್ದು, ರೈತರು ಸಂಕಷ್ಟಕ್ಕೀಡಾಗಿದ್ದಾರೆ. ಕಾರಣ ಶೀಘ್ರದಲ್ಲಿ ಪರ್ಯಾಯ ವ್ಯವಸ್ಥೆ ಹುಡುಕಿ, ಅದಕ್ಕೆ ಕಡಿವಾಣ ಹಾಕಬೇಕು. 2020 ರಲ್ಲಿ ಕೊರೊನಾ ಸಮಯದಲ್ಲಿ ಕೇಂದ್ರ ಸರ್ಕಾರ 3 ಕೃಷಿ ವಿರೋಧಿ ಕಾಯ್ದೆ ತಂದಿತ್ತು. ಅದೇ ಪ್ರಕಾರ ರಾಜ್ಯದಲ್ಲಿ ಕೂಡ ಅಂದಿನ ಸರ್ಕಾರ ಜಾರಿ ಮಾಡಿದೆ. ಈವಾಗ ಕೇಂದ್ರ ಸರ್ಕಾರ ವಾಪಸ್ಸು ತೆಗೆದುಕೊಂಡಿದೆ. ಆದರೂ ನಮ್ಮ ರಾಜ್ಯ ಸರ್ಕಾರ ವಾಪಸ್ಸು ಪಡೆದಿಲ್ಲ. ಶೀಘ್ರದಲ್ಲಿ ವಾಪಸ್ಸು ಪಡೆಯಬೇಕು.

ಇಲ್ಲದಿದ್ದಲ್ಲಿ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಯ ವತಿಯಿಂದ ಇಂದು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷರಾದ ಕೋಡಿಹಳ್ಳಿ ಚಂದ್ರಶೇಖರ, ಜಿಲ್ಲಾಧ್ಯಕ್ಷರಾದ ಸಿದ್ರಾಮಪ್ಪಾ ಆಣದೂರೆ, ಜಿಲ್ಲಾ ಕಾರ್ಯಾಧ್ಯಕ್ಷರಾದ ಶ್ರೀಮಂತ ಬಿರಾದಾರ, ಶೇಷರಾವ ಕಣಜಿ, ಚಂದ್ರಶೇಖರ ಜಮಖಂಡಿ, ದಯಾನಂದ ಸ್ವಾಮಿ ಸಿರ್ಸಿ, ಶಂಕ್ರೆಪ್ಪಾ ಪಾರಾ, ಗೂಡಿಹಾಳ ಬಸವರಾಜ, ಮಲ್ಲನಗೌಡ ಪಾಟೀಲ, ಪ್ರವೀಣ ಕುಲಕರ್ಣಿ, ಬಾಬುರಾವ ಜೋಳದಾಬಕಾ, ಶೋಭಾವತಿ ಕಾರಭಾರಿ, ಮಹಾನಂದಾ ದೇಶಮುಖ, ಸುವರ್ಣ ಬಳತೆ, ಸುಭಾಷ ರಗಟೆ,. ಭಾಗ್ಯಶ್ರೀ ದೇಶಮುಖ, ನಾಗಯ್ಯಾ ಸ್ವಾಮಿ, ಪ್ರಕಾಶ ಬಾವಗೆ, ಮಲ್ಲಿಕಾರ್ಜುನ ಬಿರಾದಾಗ ವಿಠಲರಾವ ಪಾಟೀಲ, ರೇವಣಸಿದ್ದಪ್ಪ ಯರಬಾಗ, ಸುಮಂತ ಗ್ರಾಮಲೆ, ವಿಶ್ವನಾಥ ಧರಣೆ, ಮಲ್ಲಿಕಾರ್ಜುನ ಚಕ್ಕಿ, ರಾಜಕುಮಾರ ಪಾಟೀಲ, ಧೂಳಪ್ಪಾ ಆಣದೂರ, ಬಸಪ್ಪಾ ಆಲೂರೆ, ಮೋಹನರಾವ ಮರಖಲ್ ಸೇರಿದಂತೆ ಅನೇಕ ರೈತ ಮುಖಂಡರು ಇದ್ದರು.

# ವಿದ್ಯಾರ್ಥಿಗಳು ಉನ್ನತ ಸಾಧನೆಗೆ ಪ್ರಯತ್ನಿಸಲಿ




ಮಲ್ಲಮ್ಮನುಡಿವಾರ್ತೆ ಬೀದರ. ಮಾ. 17 : ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಸಾಧನೆ ಮಾಡಲು ಪ್ರಯತ್ನಿಸಬೇಕು ಎಂದು ನವೀನ್ ಪಬ್ಲಿಕ್ ಶಾಲೆಯ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಹೇಳಿದರು. ನಗರದ ಕುಂಬಾರವಾಡ ರಸ್ತೆಯಲ್ಲಿ ಇರುವ ನವೀನ್ ಪಬ್ಲಿಕ್ ಶಾಲೆಯಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಛಲವಿದ್ದರೆ ಯಾವುದೂ ಅಸಾಧ್ಯವಲ್ಲ. ನಿರಂತರ ಪರಿಶ್ರಮದಿಂದ ಅಂದುಕೊಂಡದ್ದನ್ನು ಸಾಧಿಸಬಹುದು ಎಂದು ತಿಳಿಸಿದರು. ಉದ್ಯಮಿ, ವಿಜ್ಞಾನಿ, ರಾಜಕಾರಣಿ, ಉನ್ನತ ಅಧಿಕಾರಿ ಮೊದಲಾದ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಕೊಡುಗೆ ನೀಡಬೇಕು. ಅಕ್ಷರ ಕಲಿತ ಶಾಲೆ, ಶಿಕ್ಷಕರು ಹಾಗೂ ಪಾಲಕರಿಗೆ ಕೀರ್ತಿ ತರಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳಾದ ಅವಿನಾಶ್ ಹಾಗೂ ಶಿವಾನಿ ಹಡಪದ ಮಾತನಾಡಿದರು. ಶಾಲೆಯ ಕಾರ್ಯದರ್ಶಿ ಶೀಲಾ ಚಿಕ್ಕಬಸೆ, ಮುಖ್ಯಶಿಕ್ಷಕ ರಾಜಪ್ಪ ಬಿರಾದಾರ, ಶಿಕ್ಷಕಿಯರಾದ ಸುಧಾರಾಣಿ, ಪ್ರವೀಣಾ, ದೀಪಾರಾಣಿ, ಸುಜಾತಾ, ಆರತಿ, ಅಂಜಲಿ, ಸುಮಾ, ಶಿವಲೀಲಾ, ಭಾನುಪ್ರಿಯಾ, ಉಷಾ, ವಿದ್ಯಾರ್ಥಿನಿ ವೀರಿಕಾ ತಗಾರೆ ಇದ್ದರು.

ಸಾಯಿಪ್ರಸಾದ ಸ್ವಾಗತಿಸಿದರು. ಸಂಗಮೇಶ್ವರಿ ನಿರೂಪಿಸಿದರು.

# ಸಾಮಾಜಿಕ ಕಾರ್ಯಗಳಿಂದ ಆತ್ಮತೃಪ್ತಿ : ಕು. ಲಲಿತಾ ಅನಪೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಪ್ರಸಕ್ತ ದಿನಗಳಲ್ಲಿ ನಾವೆಲ್ಲರೂ ನಮ್ಮ ದೈನಂದಿನ ಕಾರ್ಯಗಳ ಜೊತೆಗೆ ಸ್ವಲ್ಪ ಸಮಯ ಸಮಾಜಮುಖಿ ಚಟುಟಿಕೆಗಳಿಗೆ ವಿನಿಯೋಗಿಸುವುದರಿಂದ ಸಿಗುವ ಆತ್ಮತೃಪ್ತಿ ಬೇರೆ ಯಾವುದರಿಂದ ಸಿಗುವುದಿಲ್ಲ ಎಂದು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪೂರ ಹೇಳಿದರು.

ನಗರದ ಬಸವೇಶ್ವರ ಗಂಜ್ ವೃತ್ತದಲ್ಲಿರುವ ಶ್ರೀ ಹೊನ್ನಯ್ಯ ತಾತ ದೇವಸ್ಥಾನ ಆವರಣದಲ್ಲಿ ಉದ್ಯಮಿ ಮೌಲಾಲಿ ಅನಪೂರ ಅವರು ದೇವಿ ಟ್ರಸ್ಟ್ ಹಾಗೂ ಮಾತಾ ಮಾಣಿಕೇಶ್ವರ ಕೃಪಾಶೀರ್ವಾದದಿಂದ ಸಾರ್ವಜನಿಕರಿಗಾಗಿ ಆರಂಭಿಸಿರುವ ಗಂಜಿ ವಿತರಣಾ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು.


ಬಿಸಿಲು ನಾಡಾಗಿರುವ ಜಿಲ್ಲಾ ಕೇಂದ್ರದಲ್ಲಿ ದಿನ ದಿನಕ್ಕೆ ಬಿಸಿಲು ಹೆಚ್ಚಾಗುತ್ತಿದೆ, ಈ ಭಾಗದಲ್ಲಿ ಹೆಚ್ಚು ಜನರು ಸೇರುತ್ತಾ-ರೆ, ಮಧ್ಯಾಹ್ನ ಸಮಯದಲ್ಲಿ ಬೇಸಿಗೆ ಮುಗಿಯುವವರೆಗೆ ಗಂಜಿ ವಿತರಿಸುವ ಕಾರ್ಯ ಇತರರಿಗೆ ಪ್ರೇರಣೆಯಾಗಲಿ ಎಂದು ತಿಳಿಸಿದರು.

ಉದ್ಯಮಿ ಮೌಲಾಲಿ ಅನಪೂರ ಮಾತನಾಡಿ, ನಮ್ಮ ಕುಟುಂಬ ಮೊದಲಿನಿಂದಲೂ ಬೇಸಿಗೆ ಸಮಯದ 3 ತಿಂಗಳ ಕಾಲ ಮದ್ಯಾಹ್ನದಲ್ಲಿ ರೈತರಿಗೆ, ಕೂಲಿ ಕಾರ್ಮಿಕರಿಗೆ, ಆಟೋ ಚಾಲಕರಿಗೆ ಜೋಳದ ಗಂಜಿ ವಿತರಿಸಿಕೊಂಡು ಬಂದಿದ್ದೇವೆ, ಆ ಭಗವಂತ ನಮಗೆ ನೀಡಿರುವ ಸಂಪತ್ತಿನಲ್ಲಿ ಸ್ವಲ್ಪ ಹಣ ಇಂತಹ ಕಾರ್ಯಗಳಿಗೆ ಖರ್ಚು ಮಾಡುವುದರಿಂದ ಮಾನಸಿಕ ನೆಮ್ಮದಿ ಸಿಗುತ್ತದೆ, ಇದರ ಲಾಭ ಎಲ್ಲರೂ ಪಡೆದುಕೊಳ್ಳಿ ಎಂದು ಮನವಿ ಮಾಡಿದರು.

ಈಗಾಗಲೇ ಪ್ಲಾಸ್ಟಿಕ್ ಕಪ್, ಗ್ಲಾಸ್‌ಗಳ ಬಳಕೆಯಿಂದ ಜನರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ನೀಡಿರುವುದರಿಂದ ಈ ವರ್ಷ ನಾವೂ ಚಿಕ್ಕ ಮಡಿಕೆಗಳಲ್ಲಿ ಬಿಸಿಯಾದ ಗಂಜಿ ವಿತರಿಸುತ್ತಿದ್ದೇವೆ, ಜೊತೆಗೆ ನೀರಿನ ಸೌಕರ್ಯ ಕೂಡ ಕಲ್ಪಿಸಿದ್ದೇವೆ, ಶೀಘ್ರವೇ ನಗರದ ಕೋರ್ಟ್ ಮುಂಭಾಗದಲ್ಲಿ ಹೆಚ್ಚಿನ ಜನರು ಸೇರುತ್ತಾರೆ, ಅಲ್ಲಿ ಕೂಡ ಮಧ್ಯಾಹ್ನ 1 ಗಂಟೆಯಿಂದ 3 ಗಂಟೆಯವರೆಗೆ ಗಂಜಿ ವಿತರಿಸುವ ಕಾರ್ಯ ಅನುಷ್ಠಾನಕ್ಕೆ ಶ್ರಮಿಸುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯ ಮನ್ಸೂರ ಅಫ್ಘಾನ್, ಮರೆಪ್ಪ ಗೋಸಿ, ಮಲ್ಲಯ್ಯ ಅಂಬಿಗೇರ, ಸಿದ್ಲಿಂಗಪ್ಪ, ಮರಿಲಿಂಗಪ್ಪ ಜಿನಕೇರಾ ಸೇರಿದಂತೆ ಸಾರ್ವಜನಿಕರೂ ಉಪಸ್ಥಿತರಿದ್ದರು.

# ಯಾದಗಿರಿ ಜಿಲ್ಲಾ ಕ್ರಷರ್ ಹಾಗೂ ಕ್ವಾರಿ ಮಾಲಿಕರ ಸಂಘ ಅಸ್ತಿತ್ವಕ್ಕೆ, ನೂತನ ಪದಾಧಿಕಾರಿಗಳ ಆಯ್ಕೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನಗರದ ಹಳೆ ಐಬಿ(ಪ್ರವಾಸಿ ಮಂದಿರ)ದಲ್ಲಿ ಸೋಮವಾರ ಕ್ರಷರ್ ಹಾಗೂ ಕ್ವಾರಿ ಮಾಲಿಕರ ಸಂಘದ ಯಾದಗಿರಿ ಜಿಲ್ಲಾ ಘಟಕ ಅಸ್ತಿತ್ವಕ್ಕೆ ತರಲಾಯಿತು.

ಸಂಘದ ನೂತನ ಜಿಲ್ಲಾಧ್ಯಕ್ಷರಾಗಿ ರವೀಂದ್ರನಾಯಕ, ಯಾದಗಿರಿ ತಾಲ್ಲೂಕು ಅಧ್ಯಕ್ಷರಾಗಿ ಮಲ್ಲು ಮಾಳಿಕೇರಿಯರವನ್ನು ಆಯ್ಕೆ ಮಾಡಲಾಯಿತು.

ಈ ವೇಳೆಯಲ್ಲಿ ಮಾತನಾಡಿದ, ಯಾದಗಿರಿ ತಾಲೂಕು ಅಧ್ಯಕ್ಷ ಮಲ್ಲು ಮಾಳಿಕೇರಿ, ಸಂಘದ ರಚನೆ ಮತ್ತು ಉದ್ದೇಶಗಳು ಪ್ರತಿಯೋರ್ವ ಮಾಲೀಕರು ಮತ್ತು ಸಿಬ್ಬಂದಿಗಳ ಹಿತಕಾಪಾಡುವುದಾಗಿದೆ ಆಗಿದ್ದು, ನಮ್ಮಲ್ಲಿರುವ ಪ್ರತಿಯೊಬ್ಬರ ಹಕ್ಕು ಬಾಧ್ಯತೆಗಳನ್ನು ಕಾಪಾಡೋದು ಮತ್ತು ಸರ್ಕಾರದ ನಿಯಮದಂತೆ ಕಾರ್ಯಚಟುವಟಿಕೆಗಳನ್ನು ನಡೆಸುವುದಾಗಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ತಿಂಗಳಿಗೊಮ್ಮೆ ಸಭೆ ಸೇರಿ ಜಿಲ್ಲಾ ಘಟಕದ ಸಹಕಾರದೊಂದಿಗೆ ಕಾರ್ಯಚಟುವಟಿಕೆಗಳನ್ನು ನಡೆಸುವುದು ಹಾಗೂ ಕಾರ್ಯಕ್ರಮಗಳ ಬಗ್ಗೆ ಚಿಂತನೆ ನಡೆಸುವುದು, ನಮ್ಮ ಕ್ವಾರಿ ಮತ್ತು ಕ್ರಷರ್ ಮಾಲೀಕರಿಗೆ ಸಹಾಯ ಸಹಕಾರ ಒದಗಿಸುವುದಾಗಿದೆ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಲಿಂಗಾರಡ್ಡಿ ಮಾನೆಗಾರ. ಮಲ್ಲಯ್ಯ ಜಲಾಲ. ವೆಂಕಟೇಶ ಮಿಲ್ಕಿ. ಎಮ್. ಡಿ ಸೋಫಿ. ಸೋನು ಅಂಬದಾಸ್. ಎಮ್.ಡಿ ಸೋಹೇಲ್. ಅಜಯ್ ದಶರಥ ನಾಯಕ. ಕಾಶಪ್ಪ ಮಾದ್ವಾರ್. ಶ್ರೀಮಂತ ಕಟ್ಟಿಮನಿ ಸೇರಿದಂತೆ ಇತರರಿದ್ದರು.

ನೂತನ ಪದಾಧಿಕಾಗಿಳ ಆಯ್ಕೆ

ಜಿಲ್ಲಾ ಉಪಾಧ್ಯಕ್ಷರಾಗಿ ಅಬ್ದುಲ್ ಸಮದ್, ಅಬ್ದುಲ್ ಮಜಿದ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಶ್ರೀಶೈಲ್, ಜಿಲ್ಲಾ ಕಾರ್ಯದರ್ಶಿಯಾಗಿ ಅಕ್ತರ್, ಖಜಾಂಚಿ ಹಣಮಂತ ಶಹಾಪುರ, ಯಾದಗಿರಿ ತಾಲೂಕು ಉಪಾಧ್ಯಕ್ಷರಾಗಿ ಶಂಕರ ಗೋಸಿ ರವರನ್ನು ಆಯ್ಕೆ ಮಾಡಲಾಯಿತು.

## ಶ್ರೀ ಯೋಗಿನಾರೇಯಣ ಯತೀಂದ್ರರ ಜಯಂತಿ : ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಶ್ರೀ ಯೋಗಿನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಶ್ರೀ ಯೋಗಿನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ನವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ಮರಬನಳ್ಳಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ತಹಶಿಲ್ದಾರ ವಿನಾಯಕ್ ಗೋಡಬೊಲೆ ಹಾಗೂ ಸಮಾಜದ ಅಧ್ಯಕ್ಷರಾದ ಶ್ರೀನಿವಾಸ ಕಟ್ಟಿಮನಿ, ಮುಖಂಡರು ಹಾಗೂ ಸದಸ್ಯರಾದ ನಾಗರಾಜ ಕನಕಗಿರಿ, ಗಿರೀಶ್ ಕನಕಗಿರಿ, ರವಿ ಕನಕಗಿರಿ, ವರಲಕ್ಷ್ಮಿ ಚಿಂತಪಲ್ಲಿ, ವಿನಯ ಕಟ್ಟಿಮನಿ, ನಾಗರತ್ನ ಕನಕಗಿರಿ, ಸರೋಜ ಶಿಂಧೆ, ಆಂಜನೇಯ, ಅಶೋಕ ಹುಣಶಿಗಿಡದ, ವೆಂಕಟೇಶ್ ಕಟ್ಟಿಮನಿ, ಗುರು ಹುಣಶಿಗಿಡದ ಸೇರಿದಂತೆ ಇನ್ನೂ ಹಲವಾರು ಮತ್ತು ಜಿಲ್ಲಾಧಿಕಾರಿ ಕಚೇರಿಯ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಮಕ್ಕಳೊಂದಿಗೆ ಅಸಭ್ಯ ವರ್ತನೆ ತೋರಿದ ಶಿಕ್ಷಕ ತಿಲಕ ಅಮಾನತ್ತು



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ತಾಲೂಕಿನ ಗಡಿ ಸೋಮನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂಗ್ಲಿಷ್ ಸಹ ಶಿಕ್ಷಕನಾಗಿ ಸೇವೆ ಸಲ್ಲಿಸುತ್ತಿದ್ದ ಎ.ಜಿ.ತಿಲಕ( ಜಿಟಿಟಿ) ಶಾಲಾ ಮಕ್ಕಳೊಂದಿಗೆ ತೋರಿದ ಅಸಭ್ಯವರ್ತನೆ, ದುರ್ನಡತೆ ಹಾಗೂ ಕರ್ತವ್ಯಲೋಪದ ಹಿನ್ನೆಲೆಯಲ್ಲಿ ಅಮಾನತ್ತು ಗೊಂಡಿದ್ದಾರೆ. ತಾಳಿಕೋಟಿ ತಾಲೂಕಿನ ದೇವರ ಹಿಪ್ಪರಗಿ ಮತಕ್ಷೇತ್ರ ವ್ಯಾಪ್ತಿಯ ಗಡಿ ಸೋಮನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂಗ್ಲಿಷ್ ಸಹ ಶಿಕ್ಷಕನಾಗಿ ಸೇವೆ ಸಲ್ಲಿಸುತ್ತಿದ್ದ ಎ.ಜಿ.ತಿಲಕ ಎಂಬ ಈ ಶಿಕ್ಷಕ 2016-17 ನೇ ಸಾಲಿನಲ್ಲಿ ಶಿಕ್ಷಕನಾಗಿ ನೇಮಕಾತಿಗೊಂಡು ಮುದ್ದೇಬಿಹಾಳ ತಾಲೂಕಿನ ಘಾಳಪೂಜಿ, ಚವನಭಾವಿ, ಹಗರಗುಂಡ, ದೇವರಹುಲಗಬಾಳ ಗ್ರಾಮಗಳ ಶಾಲೆಯಲ್ಲಿ ಸೇವೆ ಸಲ್ಲಿಸುತ್ತಾ ಬಂದಿದ್ದು ಕೆಲವು ಕಡೆಗಳಲ್ಲಿ ಇದೇ ರೀತಿಯ ದುರ್ವರ್ತನೆಯ ನಡತೆಯಿಂದಾಗಿ ಒಂದು ಬಾರಿ ಅಮಾನತ್ತು ಗೊಂಡು ನಾಲ್ಕು ಬಾರಿ ವರ್ಗಾವಣೆಗೊಂಡಿದ್ದರು. 19-9- 2019 ರಿಂದ ಗಡಿ ಸೋಮನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂಗ್ಲಿಷ್ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದು ಇಲ್ಲಿಯೂ ತನ್ನ ಮೊದಲಿನ ಕೆಟ್ಟ ಚಾಳಿ ಮುಂದುವರಿಸಿದ್ದರು. ಮಾರ್ಚ್ 10 -2025 ರಂದು ಸದರಿ ಶಿಕ್ಷಕರ ಈ ಅನುಚಿತ ವರ್ತನೆ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಎಸ್ ಡಿ ಎಮ್ ಸಿ ಆಡಳಿತ ಸಮಿತಿಯವರು ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಇವರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಅವರು ಶಾಲೆಗೆ ಭೇಟಿ ನೀಡಿ ವರದಿ ಪಡೆದು ದಿನಾಂಕ 11.03.2025 ರಂದು ಉಪ ನಿರ್ದೇಶಕರು ವಿಜಯಪುರ ಹಾಗೂ ಶಾಲಾ ಶಿಕ್ಷಣ ಇಲಾಖೆ ಧಾರವಾಡ ಅಪರ್ ಆಯುಕ್ತರಿಗೆ ಪತ್ರ ಬರೆದು ಸದರಿ ಶಿಕ್ಷಕರು ಕರ್ನಾಟಕ ನಾಗರಿಕ ಸೇವಾ ನಡತೆ ನಿಯಮ- 2021ರ ನಿಯಮ 1,2 ಮತ್ತು 3ನ್ನು ಮತ್ತು 33( ಎ) ಗಳನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಸಾಬೀತಾದ ಹಿನ್ನೆಲೆಯಲ್ಲಿ ಅವರ ಮೇಲೆ ಶಿಸ್ತು ಕ್ರಮಕ್ಕೆ ಭಿನ್ನಯಿಸಿಕೊಂಡಿದ್ದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಈ ವರದಿಯ ಹಿನ್ನೆಲೆಯಲ್ಲಿ ಶ್ರೀಮತಿ ಟಿ.ಎಸ್.ಕೋಲಾರ ಶಿಸ್ತು ಪ್ರಾಧಿಕಾರಿ ಗಳು ಹಾಗೂ ಉಪ ನಿರ್ದೇಶಕರು ( ಆಡಳಿತ) ಶಾಲಾ ಶಿಕ್ಷಣ ಇಲಾಖೆ ವಿಜಯಪುರ ಇವರು ದಿನಾಂಕ 15-3-2025 ರಂದು ಕರ್ನಾಟಕ ನಾಗರಿ ಸೇವಾ ನಿಯಮ- 1957 ( ವರ್ಗೀಕರಣ,ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ -10(1) ಡಿ.ರನ್ವಯ ಅವರಿಗಿರುವ ಪದದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಕ್ಷಕ ಎ.ಜಿ.ತಿಲಕ ಇವರನ್ನು ಕರ್ತವ್ಯಲೋಪ, ಅಸಭ್ಯವರ್ತನೆ ಹಾಗೂ ದುರ್ನಡತೆ ತೋರಿದ ಹಿನ್ನೆಲೆಯಲ್ಲಿ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶ ಹೊರಡಿಸಿದ್ದಾರೆ.

# ಅನ್ನ ಭಾಗ್ಯ ಯೋಜನೆ: ಫೆಬ್ರವರಿ ಮಾಹೆಯಿಂದ ಡಿ.ಬಿ.ಟಿ. ಹಣ ಬದಲಾಗಿ ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ:-ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.17-ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಪ್ರಸ್ತುತ ಜಿಲ್ಲೆಯಲ್ಲಿರುವ ಅಂತ್ಯೋದಯ ಅನ್ನಭಾಗ್ಯ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗಳಿಗೆ ಪ್ರತಿ ತಿಂಗಳು ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ 5 ಕೆ.ಜಿ. ಅಕ್ಕಿ ಬದಲಾಗಿ ನೀಡಲಾಗುತ್ತಿರುವ ಹಣದ ಬದಲಾಗಿ ಕಳೆದ ಫೆಬ್ರವರಿ ಮಾಹೆಯಿಂದ ಜಾರಿಗೆ ಬರುವಂತೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿ 5 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುತ್ತಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಅಂತ್ಯೋದಯ ಅನ್ನ ಯೋಜನೆಯ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚು ಸದಸ್ಯರುವುಳ್ಳ ಎವ್ವೆ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ಹೆಚ್ಚುವರಿಯಾಗಿ 5ಕೆ.ಜಿ ಅಕ್ಕಿ ವಿತರಿಸಲಾಗುವುದು. ಫೆಬ್ರವರಿ ಮಾಹೆಯ ಪಡಿತರ ವಿತರಣಾ ಪ್ರಕ್ರಿಯೆ ಮುಕ್ತಾಯವಾಗಿರುವುದರಿಂದ ಮಾರ್ಚ್ ಮಾಹೆಯ ಪಡಿತರ ವಿತರಣೆಯಲ್ಲಿ ಕಳೆದ ಮಾಹೆಯ ಮತ್ತು ಮಾರ್ಚ್ ಮಾಹೆಯ ಪ್ರತಿ ಸದಸ್ಯನಿಗೆ ತಲಾ 5.ಕೆ.ಜಿ. ಹೆಚ್ಚುವರಿ ಅಕ್ಕಿ ವಿತರಿಸಲಾಗುತ್ತದೆ ಎಂದಿದ್ದಾರೆ.

ಮಾರ್ಚ್ ಮಾಹೆಯಲ್ಲಿ ಅನ್ನ ಭಾಗ್ಯ ಯೋಜನೆಯಡಿ ಅಂತ್ಯೋದಯ ಪಡಿತರರಿಗೆ 1 ರಿಂದ 3 ಸದಸ್ಯರಿರುವ ಕಾರ್ಡಿಗೆ 35 ಕೆ.ಜಿ ಅಕ್ಕಿ, 4 ಸದಸ್ಯರ ಕಾರ್ಡಿಗೆ 45ಕೆ.ಜಿ ಅಕ್ಕಿ. 5 ಸದಸ್ಯರ ಕಾರ್ಡಿಗೆ 65 ಕೆ.ಜಿ ಅಕ್ಕಿ, 6 ಸದಸ್ಯರ ಕಾರ್ಡಿಗೆ 85 ಕೆ.ಜಿ ಅಕ್ಕಿ, 7 ಸದಸ್ಯರ ಕಾರ್ಡಿಗೆ 105 ಕೆ.ಜಿ ಅಕ್ಕಿ, 8 ಸದಸ್ಯರ ಕಾರ್ಡಿಗೆ 125 ಕೆ.ಜಿ ಅಕ್ಕಿ, 9 ಸದಸ್ಯರ ಕಾರ್ಡಿಗೆ 145 ಕೆ.ಜಿ ಅಕ್ಕಿ, 10 ಸದಸ್ಯರ ಕಾರ್ಡಿಗೆ 165 ಕೆ.ಜಿ ಅಕ್ಕಿ, 11 ಸದಸ್ಯರ ಕಾರ್ಡಿಗೆ 185 ಕೆ.ಜಿ ಅಕ್ಕಿ, 12 ಸದಸ್ಯರ ಕಾರ್ಡಿಗೆ 205 ಕೆ.ಜಿ ಅಕ್ಕಿಯನ್ನು, 13 ಸದಸ್ಯರ ಕಾರ್ಡಿಗೆ 225 ಕೆ.ಜಿ ಅಕ್ಕಿ, 14 ಸದಸ್ಯರ ಕಾರ್ಡಿಗೆ 245 ಕೆ.ಜಿ ಅಕ್ಕಿವ ಹಾಗೂ 15 ಸದಸ್ಯರಿರುವ ಕಾರ್ಡಿಗೆ 265 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.

ಅದೇ ರೀತಿ ಆದ್ಯತಾ ಪಡಿತರ (ಪಿಹೆಚ್‌ಹೆಚ್/ಬಿಪಿಎಲ್) ಚೀಟಿಯಲ್ಲಿನ ಪ್ರತಿಯೊಬ್ಬ ಸದಸ್ಯರಿಗೆ 15 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಡಲಾಗುತ್ತಿದ್ದು, ಅರ್ಹ ಪಡಿತರ ಚೀಟಿದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

ಹಣ ಕೇಳಿದರೆ ದೂರು ಕೊಡಿ: ಯಾವುದೇ ನ್ಯಾಯಬೆಲೆ ಅಂಗಡಿದಾರರು ವಿತರಣಾ ಪ್ರಮಾಣದಲ್ಲಿ ಸರ್ಕಾರ ನಿಗದಿಪಡಿಸಿದ ಪ್ರಮಾಣದಂತೆ ನೀಡದೆ ಕಡಿಮೆ ಪ್ರಮಾಣದ ಪಡಿತರ ವಿತರಣೆ ಮಾಡಿದ್ದಲ್ಲಿ ಅಥವಾ ಪಡಿತರ ವಿತರಿಸಲು ಹಣ ಕೇಳಿದ್ದಲ್ಲಿ ಸಾರ್ವಜನಿಕರು ನಿಶುಲ್ಕ ಸಹಾಯವಾಣಿ ಸಂಖ್ಯೆ 1967, 1800-425-9339 ಹಾಗೂ 14445ಕ್ಕೆ ಹಾಗೂ ಆಯಾ ತಾಲೂಕಿನ ತಹಸೀಲ್ದಾರ ಕಚೇರಿ ಅಥವಾ ಕಲಬುರಗಿ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ದೂರು ಸಲ್ಲಿಸುವಂತೆ ಡಿ.ಸಿ. ತಿಳಿಸಿದ್ದಾರೆ.

ಪಡಿತರ ಮಾರಾಟ ಮಾಡಿದಲ್ಲಿ ರೇಷನ್ ಕಾರ್ಡ್ ರದ್ದು: ಇನ್ನು ಅನ್ನ ಭಾಗ್ಯ ಯೋಜನೆಯಡಿ ರಾಜ್ಯ ಸರ್ಕಾರ ಉಚಿತವಾಗಿ ವಿತರಿಸಲಾಗುವ ಆಹಾರಧಾನ್ಯವನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದು ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆಯ ದರಕ್ಕೆ ದಂಡವಿಧಿಸಿ ವಸೂಲಿ ಮಾಡಲಾಗುವುದಲ್ಲದೆ ಅವರ ಪಡಿತರ ಚೀಟಿಯನ್ನು ಅಮಾನತ್ತು ಅಥವಾ ರದ್ದುಗೊಳಿಸಲಾಗುವುದು ಎಂದು ಡಿ.ಸಿ. ಎಚ್ಚರಿಕೆ ನೀಡಿದ್ದಾರೆ.

# ರಾಘಪುರ ಗ್ರಾಮದ ದೇವಸ್ಥಾನದ ರಸ್ತೆ ಮಾಡಿಸುವಂತೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಸೇಡಂ,ಮಾ.17.ತಾಲೂಕಿನ ಸುಕ್ಷೇತ್ರ ರಾಘಪುರ ಗ್ರಾಮದ ಬೆಟ್ಟದ ಮೇಲಿರುವ ಶ್ರೀ ಮೌಲಾಲಿ ಮುತ್ಯಾ ದೇವಸ್ಥಾನ ಹಾಗೂ ಶ್ರೀ ಭವಲಿಂಗೇಶ್ವರ ಹವಾ ಮಲ್ಲಿನಾಥ ದೇವಸ್ಥಾನಕ್ಕೆ ಹೋಗಲು ರಸ್ತೆ ಮಾಡಿಕೊಡಬೇಕೆಂದು

ಡಾ. ಶರಣಪ್ರಕಾಶ ಪಾಟೀಲಜಿ ಸಚಿವರು ಇವರಿಗೆ

ಡಾ. ರಾಮಚಂದ್ರ ಗುತೆ-ೇದಾರ ಮನವಿ ಪತ್ರ ನೀಡಿ ಗ್ರಾಮದ ಬೆಟ್ಟದ ಮೇಲಿರುವ ದೇವಸ್ಥಾನಗಳು ಹಿಂದೂ ಮತ್ತು ಮುಸ್ಲಿಂ ಧರ್ಮದ ಭಾವೈಕ್ಯತೆ ಕೇಂದ್ರವಾಗಿ ಪ್ರಜ್ವಲಿಸುತ್ತಿರವುದು ರಾಘಪುರ ಕ್ಷೇತ್ರ ಈ ಗ್ರಾಮಕ್ಕೆ ಪ್ರತಿ ಸೋಮವಾರ ಮತ್ತು ಗುರುವಾರ ಸಾವಿರಾರು ಜನ ಭಕ್ತರು ಹಗಲನ್ನದೆ ರಾತ್ರಿಯನ್ನದೆ ದರ್ಶನಕ್ಕೆ ಬರ್ತಾರೆ ಅದರಲ್ಲೂ ಚಿಕ್ಕ ಚಿಕ್ಕ ಮಕ್ಕಳು ಹಿರಿಯರು ತಾಯಿಯಂದಿರು ಯಜಮಾನರು ರಾತ್ರಿ 12 ಗಂಟೆ ಒಂದು ಗಂಟೆಯನ್ನದೆ ದೇವರ ಕೃಪೆಕೆ ಪಾತ್ರರಾಗಿ ಹೊಗ್ತಾರೆ ಅನ್ನುವುದು ನಮ್ಮ ತಾಲೂಕಿಗೆ ಗೌರವ ಮತ್ತು ಹೆಮ್ಮೆಯ ಸಂಗತಿಯೆ ಸರಿ. ಆದ್ರೆ ದೇವಸ್ಥಾನ ಕ್ಕೆ ಬರಲು ಉತ್ತಮ ರಸ್ತೆ ಇಲ್ಲದಿರುವುದು ವಿಪರ್ಯಾಸ ರಸ್ತೆ ಇದೆ ಅದು ಮೊದಲು ಕಾಲು ದಾರಿಯಾಗಿ-ತ್ತು ಈಗ ಅಣಾದಿಯಾಗಿದೆ.

ಆದರಿಂದ ತಾವುಗಳು ಈ ಸಮಸ್ಸೆಯನ್ನು ಗಂಭೀರವಾಗಿ ಪರಿಗಣಿಸಿ ಆದಷ್ಟು ಬೇಗನೆ ಉತ್ತಮ ಗುಣಮಟ್ಟದ ರಸ್ತೆ ಮಾಡಿಸಿ ಕೊಡಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ತಿಪ್ಪಯ್ಯ ಮುತ್ಯಾ ರಾಘಪುರ. ಶ್ರೀನಿವಾಸ ರೆಡ್ಡಿ ಮದನ. ಗುಂಡಪ್ಪ ಪೂಜಾರಿ. ಚಂದ್ರಶೇಖರ ಮಡಿವಾಳ. ಮಹೇಶರೆಡ್ಡಿ. ರವಿಸಿಂಘ. ವೆಂಕಟೇಶ ಕೊಡ್ಲಾ. ಆಶಪ್ಪ. ಅಶೋಕ. ವೆಂಕಟೇಶ. ನಾಗಪ್ಪ. ಹಾಗೂ ಇನ್ನಿತರರು ಇದ್ದರು.

## ಅಕ್ರಮ ಮದ್ಯ ಮಾರಾಟ: ಇಬ್ಬರ ಬಂಧನ

ಕಲಬುರಗಿ,ಮಾ.16-ನಗರದ ಆಳಂದ ಚೆಕ್‌ಪೋಸ್ಟ್‌ದಿಂದ ರಾಣೆಸ್ಪೀರ್ ದರ್ಗಾ ಕಡೆಗೆ ಹೋಗುವ ರಸ್ತೆಯಲ್ಲಿರುವ ಹೋಟೆಲ್ ಮುಂದುಗಡೆ ಮತ್ತು ಹೇರೂರ (ಬಿ) ಗ್ರಾಮದ ಚೌಡಯ್ಯ ಸರ್ಕಲ್ ಹತ್ತಿರದ ಮನೆಯ ಹಿಂದುಗಡೆ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಬ್-ಅರ್ಬನ್ ಮತ್ತು ಫರಹತಾಬಾದ ಠಾಣೆ ಪೊಲೀಸರು ದಾಳಿ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ.

# ಹಳೆ ವೈಷಮ್ಯ ಜೋಡಿ ಕೊಲೆ1 ಸೈದಾಪುರ ಹತ್ತಿರದಲ್ಲಿ ಘಟನೆ! ಸ್ವಗ್ರಾಮದ ಮದ್ದರ್ಕಿಯಲ್ಲಿ ಬೂದಿ ಮುಚ್ಚಿದ ಕೆಂಡ ಪೋಲಿಸ್ ಬಿಡಾರ,

(ಮಲ್ಲಿಕಾರ್ಜುನ ಎಂ.)





ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಭೀ,ಗುಡಿ ಸರ್ಕಲ್ ಗೆ ಬಂದು ಮುಖ ಸೇವಿಂಗ್ಸ್ ಮಾಡಿಕೊಂಡು ತರಕಾರಿ ಖರದೀಸಿಕೊಂಡು ಬೈಕ್ ಮೇಲೆ ಮರಳಿ ಸ್ವಗ್ರಾಮದ ಮದ್ದರ್ಕಿಗೆ ಹೊರಟ್ಟಿದ್ದ ಮಾಪಣ್ಣ ತಂದೆ ಭೀಮರಾಯ ಬಡಿಗೇರ,[52] ಅಲ್ಲಿಸಾಬ್ ತಂದೆ ಬಡೆಸಾಬ್ [57] ಎನ್ನವರಿಗೆ ಸೈದಾಪುರ ಸಮೀಪದಲ್ಲಿ ಕಾರಿನಿಂದ ಬಂದ ಐದಾರು ಜನ ದುಷ್ಕರ್ಮಿಗಳು ಕಾರದ ಪುಡಿ ಕಣ್ಣಿಗೆರಚಿ, ಲಾಂಗು ಮಚ್ಚುಗಳಿಂದ ಮಾಪಣ್ಣನವರ ಮೇಲೆ ಸಿಕ್ಕಂತೆ ಇರಿದು ಕೊಚ್ಚಿಕೊಂದಿದ್ದಾರೆ. ಬೈಕ್ ಸವಾರಿಯಲ್ಲಿದ್ದ ಸಲಿಂ ಓಡೋಡಿ ಹೋಗಿ ಮಾಪಣ್ಣನನ್ನು ಕೊಲೆ ಮಾಡಿದ್ದಾರೆ ಎಂದು ಗ್ರಾಮದೊಳಗೆ ಹೋಗಿ ತನ್ನ ಮನೆಯಲ್ಲಿ ಕುಳಿತ್ತಿದ್ದಾಗ ರೊಚ್ಚಿಗೆದ್ದ ಮಾಪಣ್ಣವರ ಸಂಭಂಧಿಕರು ಆತನನ್ನು ಕೊಲೆ ಮಾಡಿದ್ದಾರೆ ಎಂದು ಹೆಳಲಾಗುತ್ತದೆ, ಇನ್ನೂ ನಿಖರವಾದ ಮಾಹಿತಿ ತಿಳಿದು ಬಂದಿಲ್ಲ, ಘಟನೆ ವಿವರ, ಹಳೆ ವೈಷಮ್ಯದ ಹಿನ್ನೆಲೆಯಲ್ಲಿ ಮಾಪಣ್ಣನವರನ್ನು ಕೊಲೆ ಮಾಡಿದ್ದು ಎಂದು ಸಾಮಾನ್ಯರಿಂದ ತಿಳದು ಬಂದಿದೆ, ಕಳೆದ 2014ರಂದು ಭೀ,ಗುಡಿ ಕ್ರಾಸ್ ನಲ್ಲಿ ಸಿಂಗನಳ್ಳಿ ಹುಸೇನಸಾಬ್ ಎನ್ನುವರು ಮಾಪಣ್ಣನವರ ಮೇಲೆ ಗುಂಡು ಹಾರಿಸಿ ಕೊಲೆಗೆ ಯತ್ನ ಮಾಡಿದ್ದರ ವೈಷಮ್ಯ ಹಿನ್ನನಲೆಯ ಗುಮಾನಿ ಇದ್ದು ತನಿಖೆಯಿಂದ ಸತ್ಯಾಸತ್ಯೆಗಳು ಹೊರಬರಲ್ಲಿವೆ, ಅಲ್ಲಿಸಾಬ್ ತಂದೆ ಬಡೆಸಾಬ್ ಎನ್ನುವಾತನಿಗೂ ಸಿಂಗನಳ್ಳಿ ಹುಸೇನಸಾಬನಿಗೂ ನಂಟು ಇತ್ತು ಎನ್ನುವ ಆಕ್ರೋಶದಿಂದ ಕೊಲೆ ಮಾಹಿತಿ ನೀಡಲು ಹೊಗಿದ್ದ ಅಲ್ಲಿಸಾಬನನ್ನು ಮದ್ದಕಿ ಕೊಣೆಯಲ್ಲಿ ಕೊಲೆ ಮಾಡಿದ್ದಾರೆ, ಬೆಳ್ಳಂಬೆಳಿಗ್ಗೆ ಮದ್ದರ್ಕಿ ಸ್ವಗ್ರಾಮದಲ್ಲಿ ಜೊಡಿ ಕೊಲೆಗಳಿಂದ ಜನರು ಆತಂಕಗೊಂಡಿದ್ದಾರೆ, ಗ್ರಾಮದಲ್ಲಿ ಭಯದ ವಾತವಾರಣವಿತ್ತು, ಪೋಲಿಸ್ ಸೂಕ್ತ ಬಂದೋಬಸ್ತ ನಿಂದ ಶಾಂತಯುತವಾಗಿದೆ ಎನ್ನಲಾಗಿದೆ. ಭೀ,ಗುಡಿ ಠಾಣೆಗೆ ದೂರು ನೀಡಿದ ಪತ್ನಿ,

ನಮ್ಮೂರಿನ ಪಕ್ಕದ ಯುವಕನೋರ್ವನೊಂದಿಗೆ ಶಾಮೀಲಾಗಿ ಗ್ರಾಮದ ಕೆಲ ಮುಖಂಡರು ನನ್ನ ಗಂಡನ ಕೊಲೆಗೆ ಕಾರಣರಾಗಿದ್ದಾರೆ, ಅನೇಕ ಬಾರಿ ಕೊಲೆ ಮಾಡುವ ಪ್ರಯತ್ನದಿಂದ ನನ್ನ ಗಂಡ ಪ್ರಾನಾಪಾಯದಿಂದ ಪಾರಾಗಿದ್ದು, ನನ್ನ ಗಂಡನ ಗೆಳೆಯನೊಂದಿಗೆ ಸಮಪರ್ಕ ವಿಟ್ಟುಕೊಂಡು ಉದ್ದೇಶಿತವಾಗಿಯೇ ನನ್ನ ಗಂಡ ಮಾಪಣ್ಣ ಬಡಿಗೇರ ಕೊಲೆ ಮಾಡಿದ್ದಾರೆ ಎಂದು ಪತ್ನಿ ಲಕ್ಷ್ಮಿ ಭೀ,ಗುಡಿ ಠಾಣೆಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ,

ರೌಡಿ ಶೀಟರಾಗಿದ್ದ ಮಾಪಣ್ಣ ಬಡಿಗೇರ ಸುಮಾರು 9 ಪ್ರಕರಣದಲ್ಲಿ ಆರೋಪಿತನಾಗಿದ್ದನು, ಮಾಪಣ್ಣನ್ನು ಕೊಲೆ ಮಾಡಲು ಹುಸೇನಿ ಕಾರಣ ಎಂದು ಹೆಳುತ್ತಿದ್ದು ಸೂಕ್ತ ತನಿಖೆ ಮಾಡಿ ಆರೋಪಿಗಳನ್ನು ಶಿಘ್ರವಾಗಿ ಬಂದಿಸುತ್ತೇವೆ, ಮಾಪಣ್ಣನ ಮೇಲೆ ಈ ಹಿಂದೆ ಮಾರ್ಡರ ಮಾಡ ಯತ್ನ ನಡೆದಿತ್ತು, ಎಂದು ಗೊತ್ತಾಗಿದೆ ಯಾವುದಕ್ಕೂ ತನಿಖೆಯಿಂದ ಸತ್ಯಾತೆಗಳನ್ನು ಹೊರತರಲಾಗುತ್ತದೆ,

## ಯುವಕರು ಶಿಕ್ಷಣದ ಜೊತೆ ಕ್ರೀಡೆಯಲ್ಲೂ ತೊಡಗಿಸಿಕೊಳ್ಳಬೇಕು: ಮೇಯರ್ ಮುಲ್ಲಂಗಿ ನಂದೀಶ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17 -ಕ್ರೀಡೆ ಎಂಬುದುಕೇವಲಮನರಂಜನೆಗೆ ಮಾತ್ರ ಸೀಮಿತವಾಗಿರದೇ ಮನುಷ್ಯನ ಮಾನಸಿಕ ಹಾಗೂ ಸಾಂಸ್ಕೃತಿಕ ಬೆಳವಣಿಗೆಗೂ ಸಾಕಷ್ಟುಪ್ರಯೋಜನಕಾರಿಯಾಗಿದೆ ಎಂದು ಮಹಾನಗರಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.

ನೆಹರು ಯುವ ಕೇಂದ್ರ, ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯ ಹಾಗೂ ಲಿಯಾ ಯೂತ್ ಅಸೋಸಿಯೇಷನ್(ರಿ) ಇವರ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀಮತಿ ಗಾಲಿ ರುಕ್ಮಣಮ್ಮ ಚೆಂಗಾರೆಡ್ಡಿ ಸ್ಮಾರಕ ಸರ್ಕಾರಿ ವಾಣಿಜ್ಯ ಮತ್ತು ನಿರ್ವಾಹಣ ಕಾಲೇಜ್‌ನಲ್ಲಿ ಸೋಮವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಕ್ರೀಡಾಕೂಟ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯುವಜನತೆಯಲ್ಲಿ ಶಿಸ್ತು, ನಾಯಕತ್ವ ಹಾಗೂ ಸಂಘಟನೆ ಮುಖ್ಯ.ಶಿಕ್ಷಣದಜೊತೆಕ್ರೀಡೆಯಲ್ಲೂ ತೊಡಗಿಸಿಕೊಳ್ಳುವುದರಿಂದ ಇವುಗಳು ಬೆಳೆಯಲು ಸಾಧ್ಯ ಎಂದು ತಿಳಿಸಿದರು.

ಶ್ರೀಮತಿ ಗಾಲಿ ರುಕ್ಮಣಮ್ಮ ಚೆಂಗಾರೆಡ್ಡಿ ಸ್ಮಾರಕ ಸರ್ಕಾರಿ ವಾಣಿಜ್ಯ ಮತ್ತು ನಿರ್ವಾಹಣ ಕಾಲೇಜಿನ ಪ್ರಾಚಾರ್ಯರಾದ ಡಾ.ಸುಧಾಕರ.ಡಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಓದಿನೊಂದಿಗೆ ಕ್ರೀಡೆಗೂ ಒತ್ತು ನೀಡಿದಾಗ ಯುವ ಸಮುದಾಯ ಆರೋಗ್ಯವಂತರಾಗಿರಬಹುದು ಎಂದು ತಿಳಿಸಿದರು.

ನೆಹರು ಯುವ ಕೇಂದ್ರದ ಯುವ ಅಧಿಕಾರಿ ಮೊಂಟ್ ಪತ್ತಾರ್ ಅವರು ಕ್ರೀಡೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಸಂಕ್ಷಿಪ್ತ ಮಾಹಿತಿ ನೀಡಿದರು.

ಕ್ರೀಡಾಕೂಟದಲ್ಲಿ ವಾಲಿಬಾಲ್, ಖೋಖೋ, 100 ಮೀ. ಓಟ ಸ್ಪರ್ಧೆ, ಸ್ಲೋಸೈಕಲಿಂಗ್ ಕ್ರೀಡೆಗಳನ್ನು ಆಯೋಜಿಸಲಾಗಿತ್ತು. ಕ್ರೀಡಾಕೂಟದಲ್ಲಿ ವಿಜೇತರಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಕ ಮುತ್ತೇಗೌಡ, ಕ್ರೀಡಾಕೂಟ ಆಯೋಜಕ ಆರ್.ಕೆ.ಅಬ್ರಹಾಂ, ಎನ್.ಐ.ಎಫ್.ಎ.ಎ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

*ಕ್ರೀಡಾಕೂಟದಲ್ಲಿ ವಿಜೇತರಾದವರು:*

100 ಮೀ. ಓಟ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ-ಮೇಘನಾ, ದ್ವಿತೀಯ ಬಹುಮಾನ-ರತ್ತಮ್, ತೃತೀಯ ಬಹುಮಾನ-ಶಾಂತ.

ಖೋಖೋ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ-ಎಎಸ್‌ಎಮ್ ಕಾಲೇಜ್, ದ್ವಿತೀಯ ಬಹುಮಾನ-ಎಸ್‌ಎಲ್‌ಆರ್‌ಸಿಎಮ್ ಕಾಲೇಜಿನ ಶೃತಿ.

ವಾಲಿಬಾಲ್ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ-ಎಸ್‌ಎಲ್‌ಆರ್‌ಸಿಎಮ್ ಕಾಲೇಜ್‌ನ ಚಂದ್ರಶೇಖರ, ದ್ವಿತೀಯ ಬಹುಮಾನ-ಶ್ರೀ ಮೇಧಾ ಕಾಲೇಜಿನ ಪಂಪಾಪತಿ.

ಸ್ಲೋ-ಸೈಕಲಿಂಗ್ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ-ಮೇಧ, ದ್ವಿತೀಯ ಬಹುಮಾನ-ನಂದಿನಿ, ತೃತೀಯ ಬಹುಮಾನ-ನಿವೇದಿತ್

## ಇಂದು ಪೂರ್ವಭಾವಿ ಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-ಬರುವ ಏಪ್ರಿಲ್ 05 ರಂದು ಮಾಜಿ ಉಪ ಪ್ರಧಾನಮಂತ್ರಿ ಹಾಗೂ ಹಸಿರು ಕ್ರಾಂತಿ ಹರಿಕಾರರಾದ ಡಾ.ಬಾಬು ಜಗಜೀವನ ರಾಂ ಅವರ 118 ನೇ ಜಯಂತೋತ್ಸವ ಮತ್ತು ಏ.14 ರಂದು ಭಾರತ ರತ್ನ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತೋತ್ಸವ ಆಚರಣೆ ಕುರಿತು ಚರ್ಚಿಸಲು ಮಾ.18 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್‌ನ ನೂತನ ನಜೀರ್ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ನಿಗದಿಪಡಿಸಲಾಗಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಸಭೆಗೆ ಎಲ್ಲಾ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ.

## ನಾರಿ-ಕಿಲ್ವ್ ಯೋಜನೆಯ ಕುರಿತು ಮಹಿಳಾ ಗಣತಿದಾರರಿಗೆ ತರಬೇತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-ಕಡು ಬಡತನದ ಕುಟುಂಬಗಳಿಗೆ ಸರ್ಕಾರದ ಯೋಜನೆಗಳ ಮಾಹಿತಿ ನೀಡಿ ಅವರ ಜೀವನೋಪಾಯುವನ್ನು ಸುಧಾರಿಸಿ ಬಡತನದಿಂದ ಹೊರಬರುವಂತೆ ಮಾಡುವುದು ನಾರಿ-ಕಿಲ್ವ್ ಯೋಜನೆಯ ಉದ್ದೇಶವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್ ಅವರು ಹೇಳಿದರು.

ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಅಭಿಯಾನದಡಿ ನಾರಿ-ಕಿಲ್ವ್ ಯೋಜನೆಯ ಕುರಿತು ಸ್ವಸಹಾಯ ಗುಂಪಿನ ಮಹಿಳೆಯರಿಗೆ ಜಿಲ್ಲಾ ಪಂಚಾಯತ್‌ನ ಜಿಲ್ಲಾ ಸಂಪನ್ಮೂಲ ಕೇಂದ್ರದಲ್ಲಿ ಇತ್ತೀಚೆಗೆ ಆಯೋಜಿಸಿದ್ದ ನಾಲ್ಕು ದಿನಗಳ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಾರಿ-ಕಿಲ್ವ್ ಕಾರ್ಯಕ್ರಮವನ್ನು ಮೊದಲ ಹಂತದಲ್ಲಿ ಜಿಲ್ಲೆಯ 2 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಇದರಲ್ಲಿ ಅತೀ ಬಡವರನ್ನು ಗುರಿಯಾಗಿಸಿ, ಅಂತಹ ಕುಟುಂಬಗಳ ಗುರುತಿಸುವಿಕೆಗೆ ಸಂಬಂಧಿಸಿದ ಚಟುವಟಿಕೆಗಳನ್ನು (ಪಿಆರ್‌ಎ ಮನೆ-ಮನೆ ಸಮೀಕ್ಷೆ) ಕೈಗೊಳ್ಳಲು ಪ್ರತಿ ಗ್ರಾಮ ಪಂಚಾಯತಿಗೆ ಇಬ್ಬರಂತೆ ಸ್ವ-ಸಹಾಯ ಸಂಘದ ಸದಸ್ಯರನ್ನು ಆಯ್ಕೆ ಮಾಡಿ ಅವರಿಗೆ 4 ದಿನಗಳ ಕ್ಷೇತ್ರ ಭೇಟಿ ಒಳಗೊಂಡಂತೆ ತರಬೇತಿ ನೀಡಲಾಗುತ್ತದೆ ಎಂದು ತಿಳಿಸಿದರು.

ಕಡುಬಡತನದ ಕುರಿತು ಸರಿಯಾದ ಕ್ರಮದಲ್ಲಿ ಮಹಿಳಾ ಸಮೀಕ್ಷೆದಾರರು ತರಬೇತಿ ಪಡೆದು ಅತ್ಯಂತ ದುರ್ಬಲ ಕುಟುಂಬಗಳ ಸಮೀಕ್ಷೆ ಮಾಡಿ ಸರ್ಕಾರಕ್ಕೆ ಮಾಹಿತಿ ನೀಡಿದರೆ ನಾರಿ-ಕಿಲ್ವ್ ಯೋಜನೆಯ ಅನುಷ್ಠಾನ ಪ್ರಯೋಜನವಾಗುವುದು ಎಂದು ಮಹಿಳಾ ತರಬೇತಿ ಗಣತಿದಾರರಿಗೆ ತಿಳಿಸಿದರು.

ಜಿಲ್ಲೆಯ 2 ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯತಿಯಿಂದ ಇಬ್ಬರಂತೆ ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ತರಬೇತಿ ನೀಡಲಾಗಿದೆ ಎಂದರು.

ನಾರಿ-ಕಿಲ್ವ್ ಡಿಆರ್‌ಡಿಎ ಯೋಜನಾ ನಿರ್ದೇಶಕರು ಯೋಜನೆಯ ಉದ್ದೇಶಗಳು, ಗುರಿಗಳ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಕರ್ನಾಟಕ ಅಂತರ್ಗತ ಜೀವನೋಪಾಯ ಕಾರ್ಯಕ್ರಮ ಅಧಿಕಾರಿ ಮೇಡಂಲಿಸ್ಸಿ, ಎನ್‌ಆರ್‌ಎಲ್‌ಎಂ ಜಿಲ್ಲಾ ವ್ಯವಸ್ಥಾಪಕ ವಿಜಯಕುಮಾರ್, ಎನ್‌ಎಆರ್‌ಐ-ಕೆಐಎಲ್‌ಪಿ ಜಿಲ್ಲಾ ಸಂಯೋಜಕ ವೀರಣ್ಣ.ಕೆ., ಕಂಪ್ಲಿಯ ಡಿಆರ್‌ಪಿ ದ್ರಾಕ್ಷಾಯಿಣಿ ಹಾಗೂ ಕುರುಗೋಡು ತಾಲ್ಲೂಕು ಸಂಯೋಜಕರು ಹಾಜರಿದ್ದರು.

## ಕಲಬುರಗಿಯಲ್ಲಿ ಬೃಹತ್ ಉದ್ಯೋಗಮೇಳ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಕಲಬುರಗಿಯಲ್ಲಿ ಏಪ್ರಿಲ್ ಮೊದಲನೇ ವಾರದಂದು ಬೃಹತ್ ಉದ್ಯೋಗಮೇಳವನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತ ನಿರುದ್ಯೋಗಿ ಯುವಕ ಮತ್ತು ಯುವತಿಯರು ಭಾಗವಹಿಸಬಹುದು.

ಉದ್ಯೋಗ ಮೇಳದಲ್ಲಿ 250 ಕ್ಕೂ ಹೆಚ್ಚಿನ ಪ್ರತಿಷ್ಠಿತ ಕಂಪನಿಗಳು ಪಾಲ್ಗೊಳ್ಳಲಿದ್ದು, ಯಾವುದೇ ವಿದ್ಯಾರ್ಹತೆ ಹೊಂದಿರುವ ನಿರುದ್ಯೋಗಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಉದ್ಯೋಕಾಂಕ್ಷಿಗಳು ನೋಂದಣಿಗಾಗಿ ಇಲಾಖೆಯಿಂದ ಸೃಜಿಸಲಾಗಿರುವ ಲಿಂಕ್: https://udyogamela.skillconnect.kaushalkar.com/ ಗೆ ಭೇಟಿ ನೋಂದಾಯಿಸಿಕೊಳ್ಳಬಹುದಾಗಿದೆ ಅಥವಾ ಕ್ಯೂಆರ್ ಕೋಡ್ ನ್ನು ಸ್ಕ್ಯಾನ್ ಮಾಡಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಈ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ: 08022075030 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶ್ಯಲಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-ಸಿರುಗುಪ್ಪ ಪಟ್ಟಣದ ವಿವಿ ನಗರದ 13ನೇ ವಾರ್ಡ್ನ ನಿವಾಸಿ ಎಲ್. ವಸಂತ ಕುಮಾರ್ ಎನ್ನುವ 44 ವರ್ಷದ ವ್ಯಕ್ತಿಯು 2023 ರ ಅ.05 ರಂದು ದುಡಿಯಲು ಬೆಂಗಳೂರಿಗೆ ಹೋಗುತ್ತೇನೆಂದು ಹೇಳಿ ಹೋದವನು ಮರಳಿ ಮನೆಗೆ ಬಾರದೇ ಕಾಣೆಯಾಗಿರುತ್ತಾನೆ. ಈ ಕುರಿತು ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು: 6.1 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಬಲ ಹೊಟ್ಟೆಯ ಭಾಗದಲ್ಲಿ ಹಳೆ ಅಪರೇಷನ್ ಕಲೆ ಗುರುತು ಇರುತ್ತದೆ. ಕನ್ನಡ, ತೆಲುಗು, ಹಿಂದಿ, ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ಕಂದು, ಬಿಳಿ ಚೌಕಳಿ ಬಣ್ಣದ ತುಂಬು ತೋಳಿನ ಅಂಗಿ, ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ.

ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಸಿರುಗುಪ್ಪ ಪೊಲೀಸ್ ಠಾಣೆಯ ಪಿಎಸ್‌ಐ ದೂ.08396-220333,ಸಿರುಗುಪ್ಪ ಸಿಪಿಐ ದೂ.08396-220003, ಸಿರುಗುಪ್ಪ ಉಪವಿಭಾಗ ಡಿಎಸ್‌ಪಿ ದೂ.08396-276000, ಬಳ್ಳಾರಿ ಎಸ್‌ಪಿ ಕಚೇರಿ ದೂ.08392-258400 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ

## ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-: ನಗರದ 03 ಪರೀಕ್ಷಾ ಕೇಂದ್ರಗಳಲ್ಲಿ ಮಾ.18 ರಿಂದ 21 ರವರೆಗೆ ಲೋಕೋಪಯೋಗಿ ಇಲಾಖೆಯ ಹೈದರಾಬಾದ್ ಕರ್ನಾಟಕ ವೃಂದದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಗ್ರೇಡ್-1) ಗ್ರೂಪ್-ಎ ವೃಂದದ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣವನ್ನು ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ 2023 ರ ಕಲಂ 163 ಮೇರೆಗೆ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣದಲ್ಲಿನ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಪ್ರತಿಬಂಧಿಸಿ ಆದೇಶಿಸಿದ್ದಾರೆ.

ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶವನ್ನು ನಿಷೇಧಿಸಿದೆ. ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಪುಸ್ತಕಗಳ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-2021ರಲ್ಲಿ ಮುದ್ರಣಗೊಂಡು ಪ್ರಕಟಣೆಗೊಂಡ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಪುಸ್ತಕಗಳ ಪಟ್ಟಿಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ ಎಂದು ಬಳ್ಳಾರಿ ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ನರಸಣ್ಣ ಅವರು ತಿಳಿಸಿದ್ದಾರೆ.

2021ರಲ್ಲಿ ಮುದ್ರಣಗೊಂಡ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಕನ್ನಡ, ಆಂಗ್ಲ ಹಿಂದಿ ಮತ್ತು ಭಾರತೀಯ ಇತರ ಭಾಷಾ ಪುಸ್ತಕಗಳನ್ನು ಆಯ್ಕೆ ಸಮಿತಿ ಮುಂದೆ ಮಂಡಿಸಲಾಗಿತ್ತು. ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಪುಸ್ತಕಗಳನ್ನು ಇಲಾಖೆಯ ಜಾಲತಾಣ dpl.karnataka.gov.in ರಲ್ಲಿ ಮಾ.15 ರಂದು ಪ್ರಕಟಿಸಲಾಗಿದೆ.

ಲೇಖಕರು, ಲೇಖಕ-ಪ್ರಕಾಶಕರು ಮತ್ತು ಪ್ರಕಾಶಕರು ಮತ್ತು ಪುಸ್ತಕ ಸರಬರಾಜುದಾರರು ಸಲ್ಲಿಸಿದ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪುಟ ಸಂಖ್ಯೆ ಮುಖ ಬೆಲೆ, ನಿಗದಿತ ಬೆಲೆ, ಪುಸ್ತಕ ಅಳತೆ ಹಾಗೂ ಇತರೆ ತಾಂತ್ರಿಕ ವ್ಯತ್ಯಾಸಗಳಿದ್ದಲ್ಲಿ ಮಾ.18 ರೊಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ, ಡಾ. ಅಂಬೇಡ್ಕರ್ ವೀದಿ, ಬೆಂಗಳೂರು-560001. ಇಲ್ಲಿಗೆ ಲಿಖಿತವಾಗಿ ಅಥವಾ ಇ-ಮೇಲ್ ಮೂಲಕ ಮನವಿಗಳನ್ನು ಸಲ್ಲಿಸಬಹುದಾಗಿದೆ.

ನಂತರ ಬಂದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೌರ್ಯ, ಧೈರ್ಯ, ದೇಶಪ್ರೇಮದ ಹೋರಾಟಗಾರ ಶಿವಾಜಿ ಮಹಾರಾಜ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿದ ಮಹಾನ್ ನಾಯಕರಲ್ಲಿ ಶಿವಾಜಿ ಮಹಾರಾಜರು ಆದರ್ಶಪ್ರಾಯರಾಗಿದ್ದಾರೆ, ಸರ್ವರು ಅವರ ದೇಶಪ್ರೇಮವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶ್ರೀಮರುಳಾರಾಧ್ಯ ಶಿವಾಚಾರ್ಯರು ತಿಳಿಸಿದರು.

ಗ್ರಾಮದಲ್ಲಿ ಶ್ರೀಶಿವಾಜಿ ಮಹಾರಾಜ ಸೇವಾ ಸಮಿತಿ ಹಾಗೂ ಗ್ರಾಮಸ್ಥರ ವತಿಯಿಂದ ನಡೆದ ಶ್ರೀಛತ್ರಪತಿ ಶಿವಾಜಿ ಮಹಾರಾಜರ 398ಜೇ ಜಯಂತಿ ಕಾರ್ಯಕ್ರಮದ ಮೆರವಣಿಗೆ ಕಾರ್ಯಕ್ರಮವನ್ನು ಉದ್ದೇಶಿಸಿ ಭಾನುವಾರ ಮಾತನಾಡಿದರು. ತಳಿರು ತೋರಣ, ಹೂಗಳಿಂದ ಅಲಂಕರಿಸಿದ ತೆರೆದ ವಾಹನದಲ್ಲಿ ಶಿವಾಜಿಯವರ ಪ್ರತಿಮೆಯನ್ನಿರಿಸಿ ಮಹಿಳೆಯರ ಕಳಸ, ಕುಂಭ ಹಾಗೂ ಸಕಲ ವಾದ್ಯ ಮೇಳದೊಂದಿಗೆ ಗ್ರಾಮದ ಬನ್ನಿಕಟ್ಟಿಯಿಂ ಪ್ರಾರಂಭವಾದ ಮೆರವಣಿಗೆ ಶ್ರೀಮಾರುತೇಶ್ವರ ದೇವಸ್ಥಾನದವರೆಗೂ ಅದ್ದೂರಿಯಿಂದ ನಡೆಯಿತು, ನಂತರ ಅನ್ನ ಸಂತರ್ಪಣೆ ಕಾರ್ಯಕ್ರಮ ನಡೆಯಿತು.

ಶಿವಾಜಿಯವರ ಶೌರ್ಯ, ಧೈರ್ಯ, ದೇಶಪ್ರೇಮ,

ಮಾತೃಪ್ರೇಮ ಎಂದೆಂದಿಗೂ ಪ್ರೇರಣೆದಾಯಕವಾಗಿವೆ, ಸಾರ್ವಜನಿಕರು ಜಾತ್ಯಾತೀತವಾಗಿ ಇಂತಹ ದೇಶಭಕ್ತರ ಜಯಂತಿಗಳನ್ನು ಆಚರಿಸಬೇಕು. ಅಂದಾಗ ಮಾತ್ರ ಸರ್ವರಲ್ಲಿ ಒಗ್ಗಟ್ಟಿನ ಭಾವನೆ ಮೂಡಲು ಸಾದ್ಯ. ಶಿವಾಜಿಯವರು ಬಾಲ್ಯದಲ್ಲಿಯೇ ತಾಯಿಯವರಿಂದ ಧೈರ್ಯ, ನ್ಯಾಯಯುತ ಮೌಲ್ಯಗಳನ್ನು ಕಲಿತರು. ಯುವಕರು ಸಹ ಸಂಸ್ಕಾರ, ದೈರ್ಯ

ಗುಣಗಳನ್ನು ಕಲಿತು ಜೀವನದಲ್ಲಿ ಸಾಧನೆ ಮೆರೆಯಬೇಕು ಎಂದರು. ಪ್ರಮುಖರಾದ ಡಾ.ಸಿದ್ದಲಿಂಗಸ್ವಾಮಿ ಇನಾಮದಾರ, ಕುಮಾರಸ್ವಾಮಿ ಆರೇರ, ಪ್ರಶಾಂತ ಆರೇರ, ಅನ್ವರ ಗಡಾದ, ಗುರುಬಸವರಾಜ, ರೇಣುಕಪ್ಪ, ಪ್ರಕಾಶ, ಮಲ್ಲಪ್ಪ ಮತ್ತಿರರು ಉಪಸ್ಥಿತಿ ಇದ್ದರು.

## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.17-ಜಿಲ್ಲೆಯಲ್ಲಿನ ಪರಿಶಿಷ್ಟವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 2025-26ನೇ ಸಾಲಿಗೆ ಜನಸೇವಾ ವಿದ್ಯಾಕೇಂದ್ರ (ರಿ) ಆಂಗ್ಲ ಮತ್ತು ಕನ್ನಡ ಮಾಧ್ಯಮ ಶಾಲೆ, ಮಾಗಡಿ ರಸ್ತೆ, ಚೆನ್ನನಹಳ್ಳಿ, ಬೆಂಗಳೂರು ಇಲ್ಲಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

5ನೇ ತರಗತಿ ಕನ್ನಡ ಮಾಧ್ಯಮ ಮತ್ತು 8ನೇ ತರಗತಿ ಕನ್ನಡ, ಆಂಗ್ಲ ಮಾಧ್ಯಮ ತರಗತಿ ದಾಖಲಾತಿಗೆ ಏ.06 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ.

ಪ್ರವೇಶ ಪರೀಕ್ಷೆ ಬರೆಯಲು ಇಚ್ಛಿಸುವ ಪರಿಶಿಷ್ಟ ವರ್ಗದ ಅರ್ಹ ವಿದ್ಯಾರ್ಥಿಗಳು ಅರ್ಜಿಗಳನ್ನು ಬಳ್ಳಾರಿ, ಸಂಡೂರು, ಸಿರುಗುಪ್ಪ, ತಾಲ್ಲೂಕುಗಳ ಪರಿಶಿಷ್ಟವರ್ಗಗಳ ಕಲ್ಯಾಣಧಿಕಾರಿಗಳ ಕಚೇರಿಯಲ್ಲಿ ಪಡೆದುಕೊಳ್ಳಬಹುದು. ಅರ್ಜಿ ಸಲ್ಲಿಸಲು ಮಾ.26 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿಗಳ ಕಚೇರಿ ಅಥವಾ ದೂ.08392-242453 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ದಿವಾಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುದುರಿ ಮೋದಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮಹಿಳಾ ದಿನಾಚರಣೆ : ವಿವಿಧ ಸ್ಪರ್ಧೆ ಆಯೋಜನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರು ಕುದರಿಮೋತಿ ಸರಕಾರಿ ಪ್ರೌಢಶಾಲೆಯಲ್ಲಿ ಮಹಿಳಾ ದಿನಾಚರಣೆಯ ಅಂಗವಾಗಿ ಮಹಿಕೋ ಸೀಡ್ಸ್ ಪ್ರೆವೆಟ್ ಲಿಮಿಟೆಡ್ ಕಂಪನಿಯವತಿಯಿಂದ ಸದೃಢ ಭಾರತಕ್ಕಾಗಿ ಮಹಿಳಾ ಸಬಲೀಕರಣ ಎಂಬ ಶಿರ್ಷೀ-ಕೆಯಡಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ರಂಗೋಲಿ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆ ಆಯೋಜಿಸಿ, ಎರಡು ಸ್ಪರ್ಧೆಯಲ್ಲಿ ವಿಜೇತರಾದ 9ನೇ ಮತ್ತು 10ನೇ ತರಗತಿಯ ವಿದ್ಯಾರ್ಥಿನಿಯರಿಗೆ ಹಾಗೂ ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಿದ ಮಹಿಳಾ ಸ್ಪರ್ಧಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕರ್ನಾಟಕ ರೀಜನಲ್ ಪ್ರೊಡಂಕ್ಷನ್ ಮ್ಯಾನೇಜರ್ ಡಾ.ಮಹೇಶ್ ಹೆಗಡೆ, ಶಿವಸಾಗರ ಜಗದಲೆ ಕೊಪ್ಪಳ, ಭರತ್ ಖಾಮ್ಕರ್, ಸಂದೀಪ್ ಶೇರಿಕಾರ್, ಶ್ರೀಧರ , ರಿಯಾಜ್ ಮುಜವರ್. ಪಂಪನಗೌಡ ಮಾಲಿಪಾಟೀಲ್, ಹನುಮೇಶ,

ಬಸವರಾಜ್ ಲಗಳೂರ್, ಶಂಕ್ರಪ್ಪ ರಾಥೋಡ್, ಹುಸೇನ್ ಭಾಷಾ, ಸೇರಿದಂತೆ ಶಾಲಾ ಶಿಕ್ಷಕರು, ಸಿಬ್ಬಂದಿಯವರು, ವಿದ್ಯಾರ್ಥಿಗಳು ಇದ್ದರು.

# ಮಾರ್ಚನಿಂದ ಹಣದ ಬದಲಿಗೆ ಅಕ್ಕಿ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.17-ಸಾರ್ವಜನಿಕ ವಿತರಣಾ ಪದ್ದತಿಯಡಿ ಆದ್ಯತಾ ಪಡಿತರ ಚೀಟಿಯ ಫಲಾನುಭವಿಗಳಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುವ ಕೇಂದ್ರ ಸರಕಾರದ 5 ಕೆಜಿ ಆಹಾರ ಧಾನ್ಯದೊಂದಿಗೆ ರಾಜ್ಯ ಸರಕಾರದ ವತಿಯಿಂದ ಹೆಚ್ಚುವರಿಯಾಗಿ 5 ಕೆಜಿ ಆಹಾರ ಧಾನ್ಯದ ಬದಲಾಗಿ ನೀಡುತ್ತಿದ್ದ ಹಣದ ಬದಲಿಗೆ ಮಾರ್ಚ ತಿಂಗಳಿಂದ ಅಕ್ಕಿಯನ್ನು ವಿತರಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯ ಸರಕಾರದಿಂದ ಹೆಚ್ಚುವರಿಯಾಗಿ ನೀಡುವ 5 ಕೆಜಿ ಅಕ್ಕಿ ಬದಲಿಗೆ ಈ ಹಿಂದೆ ಪ್ರತಿ ಕೆಜಿಗೆ ರೂ.35 ರಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ರೂ.170 ರಂತೆ ಹಣವನ್ನು ವರ್ಗಾಯಿಸಲಾಗುತ್ತಿತ್ತು. ಆದರೆ ಫೆಬ್ರವರಿ ಮಾಹೆಯಿಂದ ಜಾರಿಗೆ ಬರುವಂತೆ ನೇರ ನಗದು ವರ್ಗಾವಣೆ ಬದಲಾಗಿ ಅನ್ನಭಾಗ್ಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ 5 ಕೆಜಿ ಅಕ್ಕಿಯನ್ನು ವಿತರಿಸಲು ಸರಕಾರ ಆದೇಶಿಸಿದೆ.

ಫೆಬ್ರವರಿ ಮಾಹೆಯಿಂದ ಅನ್ವಯವಾಗುವಂತೆ 5 ಕೆಜಿ ಹೆಚ್ಚುವರಿ ಅಕ್ಕಿಯನ್ನು ಪಡಿತರ ಚೀಟಿದಾರರಿಗೆ ಬಿಡುಗಡೆ ಮಾಡಲಾಗಿದ್ದು, ಫೆಬ್ರವರಿ ಹಾಗೂ ಮಾರ್ಚ ಮಾಹೆಯ ಹಂಚಿಕೆ ಸೇರಿದಂತೆ 2 ಮಾಹೆಯ ಒಟ್ಟು ಹಂಚಿಕೆಯನ್ನು ಬಿಡುಗಡೆ ಮಾಡಲಾಗಿರುತ್ತದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ (ಎಎವೈ) 1 ರಿಂದ 3 ಸದಸ್ಯರಿರುವ ಪ್ರತಿ ಕಾರ್ಡ 35 ಕೆಜಿ ಅಕ್ಕಿ, 4 ಸದಸ್ಯರಿರುವ ಕಾರ್ಡಗೆ 45 ಕೆಜಿ, 5 ಸದಸ್ಯರಿರುವ ಕಾರ್ಡಗೆ 65 ಕೆಜಿ, 7 ಸದಸ್ಯರಿರುವ ಕಾರ್ಡಗೆ 105 ಕೆಜಿ, 8 ಸದಸ್ಯರಿರುವ ಕಾರ್ಡಗೆ 125 ಕೆಜಿ, 9 ಸದಸ್ಯರಿರುವ ಕಾರ್ಡಗೆ 145 ಕೆಜಿ ಹಾಗೂ 10 ಸದಸ್ಯರಿರುವ ಕಾರ್ಡಗೆ 165 ಕೆಜಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಬಿಪಿಎಲ್ ಪಡಿತರ ಚೀಟಿದಾರರಿಗೆ ಓರ್ವ ಸದಸ್ಯರಿರುವ ಪ್ರತಿ ಕಾರ್ಡಗೆ 15 ಕೆಜಿ, 2 ಸದಸ್ಯರಿರುವ ಕಾರ್ಡಗೆ 30 ಕೆಜಿ, 3 ಸದಸ್ಯರಿರುವ ಕಾರ್ಡಗೆ 45 ಕೆಜಿ, 4 ಸದಸ್ಯರಿರುವ ಕಾರ್ಡಗೆ 60 ಕೆಜಿ, 5 ಸದಸ್ಯರಿರುವ ಕಾರ್ಡಗೆ 75 ಕೆಜಿ, 6 ಸದಸ್ಯರಿರುವ ಕಾರ್ಡಗೆ 90 ಕೆಜಿ, 7 ಸದಸ್ಯರಿರುವ ಕಾರ್ಡಗೆ 105 ಕೆಜಿ, 8 ಸದಸ್ಯರಿರುವ ಕಾರ್ಡಗೆ 120 ಕೆಜಿ, 9 ಸದಸ್ಯರಿರುವ ಕಾರ್ಡಗೆ 135 ಕೆಜಿ ಹಾಗೂ 10 ಸದಸ್ಯರಿರುವ ಕಾರ್ಡಗೆ 150 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.

ಈ ತಿಂಗಳು ಪ್ರತಿದಿನ ತಿಂಗಳ ಕೊನೆಯವರೆಗೆ ಬೆಳಿಗ್ಗೆ 8 ರಿಂದ ರಾತ್ರಿ 8 ವರೆಗೆ ನ್ಯಾಯಬೆಲೆ ಅಂಗಡಿಯನ್ನು ತೆರೆದು ಸರಿಯಾದ ಪ್ರಮಾಣದಲ್ಲಿ ವಿತರಣೆ ಮಾಡತಕ್ಕದ್ದು, ಒಂದು ವೇಳೆ ಲೋಪದೋಷ ಕಂಡುಬಂದಲ್ಲಿ ನ್ಯಾಯಬೆಲೆ ಅಂಗಡಿಕಾರರ ಮೇಲೆ ನಿರ್ಧಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುವುದು. ಹಂಚಿಕೆಯಾದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದಲ್ಲಿ ಅಂತಹವರ ಪಡಿತರ ಚೀಟಿ ರದ್ದುಪಡಿಸಲಾಗುತ್ತದೆ. ಪಡಿತರ ವಿತರಣೆ ಕುರಿತು ದೂರು ಇದ್ದಲ್ಲಿ ಪೊಲೀಸ್ ಇಲಾಖೆಯ ಸಹಾಯವಾಣಿ ಸಂ.112, ಮೊನಂ.9480803900, ಆಹಾರ ಇಲಾಖೆ ಸಹಾಯವಾಣಿ 1967, ದೂಸಂ.08354-235094ಗೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ ಎಂದು ಜಾನಕಿ ಕೆ.ಎಂ. ತಿಳಿಸಿದ್ದಾರೆ.

# ಮಾ.21 ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.17-ಜಿಲ್ಲೆಯಲ್ಲಿ ಎಪ್ರೀಲ್ 5 ರಂದು ಜರುಗುವ ಡಾ.ಬಾಬು ಜಗಜೀವನರಾಂ ಅವರ 118ನೇ ಜಯಂತಿ ಹಾಗೂ ಎಪ್ರೀಲ್ 14 ರಂದು ಜರುಗಲಿರುವ ಡಾ.ಬಿ.ಆರ್.ಅಂಬೇಡ್ಕರವರ 134ನೇ ಜಯಂತಿ ಆಚರಣೆ ಕುರಿತು ಪೂರ್ವಭಾವಿಯಾಗಿ ಚರ್ಚಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಾರ್ಚ 21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ ಹಳೆ ಸಭಾಭವನದಲ್ಲಿ ಸಭೆ ಜರುಗಲಿದೆ.

ಸಭೆಗೆ ಜಿಲ್ಲೆಯ ಎಲ್ಲ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗದ ಧುರಿಣರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಜರಾಗಿ ಸಲಹೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಶೈಲ ಜಾತ್ರೆಗೆ ವಿಶೇಷ ಬಸ್ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.17-ಆಂದ್ರ ಪ್ರದೇಶ ರಾಜ್ಯದ ಶ್ರೀಶೈಲ ಜಾತ್ರೆಗೆ ಬಾಗಲಕೋಟೆ ಜಿಲ್ಲೆಯ ಭಕ್ತಾದಿಗಳ ಅನುಕೂಲಕ್ಕಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬಾಗಲಕೋಟೆ ವಿಭಾಗದಿಂದ ಮಾರ್ಚ 20 ರಿಂದ 31 ವರೆಗೆ ಜಿಲ್ಲೆಯ ಎಲ್ಲ ಘಟಕಗಳಿಂದ ವಿಶೇಷ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ನಿತಿನ್ ಹೆಗಡೆ ತಿಳಿಸಿದ್ದಾರೆ.

ಒಂದು ಗುಂಪಿನಿಂದ ಕನಿಷ್ಠ 45-55 ಜನ ಪ್ರಯಾಣಿಕರು ಲಭ್ಯವಿದ್ದಲ್ಲಿ ದಾರಿ ಮಧ್ಯ ಬರುವ ಯಾತ್ರಾ ಸ್ಥಳಗಳ ದರ್ಶನ ಸಹ ಮಾಡಿಸಲಾಗುತ್ತದೆ. ಊಟಕ್ಕಾಗಿ ಅನ್ನಸಂತರ್ಪಣೆ ಸ್ಥಳಗಳಲ್ಲಿ ನಿಲ್ಲಿಸಲಾಗುತ್ತದೆ. ಘಟಕದ ಕೇಂದ್ರ ಸ್ಥಾನದಿಂದ ಹೆಚ್ಚುವರಿ ಬಸ್‌ಗಳಲ್ಲದೇ ಪ್ರಯಾಣಿಕರು ಇಚ್ಚಿಸಿದಲ್ಲಿ ಅವರ ಗ್ರಾಮಗಳಿಂದ ನೇರವಾಗಿ ಶ್ರೀಶೈಲಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಮಂತ್ರಾಲಯ ಹಾಗೂ ಮಹಾನಂದಿ ದರ್ಶನ ಮಾಡಲು ಇಚ್ಚಿಸಿದಲ್ಲಿ ಆ ಸ್ಥಳಗಳಿಗೆ ತಗಲುವ ಪ್ರಯಾಣದ ದರವನ್ನು ಪಾವತಿಸಿದಲ್ಲಿ ದರ್ಶನ ಮಾಡಿಸಲಾಗುವುದು.

ಶ್ರೀಶೈಲ ಅಂತರ ರಾಜ್ಯ ಮಾರ್ಗದ ಸಾರಿಗೆಗಳಿಗೆ ಶಕ್ತಿ ಯೋಜನೆ ಅನ್ವಯವಾಗುವದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ಸಂಚಾರಿ ವ್ಯವಸ್ಥಾಪಕರು, ವಿಭಾಗೀಯ ನಿಯಂತ್ರಣಾಧಿಕಾರಿಯ ಕಚೇರಿ, ಬಾಗಲಕೋಟೆ (7760991762), ಬಾಗಲಕೋಟೆ ಘಟಕ (7760991775), ಜಮಖಂಡಿ (7760991778), ಬಾದಾಮಿ (7760991776), ಇಲಕಲ್ಲ (7760994777), ಮುಧೋಳ (7760991779), ಬೀಳಗಿ (7760991780), ಗುಳೇದಗುಡ್ಡ (7760991781) ಹಾಗೂ ಹುನಗುಂದ ಘಟಕ (9606068611) ಇವರನ್ನು ಸಂಪರ್ಕಿಸಬಹುದಾಗಿದೆ.

# ಇಂದು ವಿಶ್ವ ಗ್ರಾಹಕರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.17-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆಹಾರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ, ಶಿಕ್ಷಣ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಾರ್ತಾ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಸಹಯೋಗದಲ್ಲಿ ಮಾರ್ಚ 18 ರಂದು ವಿಶ್ವಗ್ರಾಹಕರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಂಗಳವಾರ ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜರುಗಲಿರುವ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಪ್ರಭುಲಿಂಗಸ್ವಾಮಿ ಹಿರೇಮಠ ಅಧ್ಯಕ್ಷತೆ ವಹಿಸಲಿದ್ದಾರೆ. ಜಿ.ಪಂ ಸಿಇಓ ಶಶಿಧರ ಕುರೇರ ಕರಪತ್ರ ಬಿಡುಗಡೆ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯೆ ಸಿ.ಎಚ್. ಸಮಿಉನ್ನಿಸಾ ಅಬ್ರಾರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ವಿವೇಕಾನಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಜಶೇಖರ ಪಟ್ಟಣಶೆಟ್ಟಿ ಭಾಗವಹಿಸಲಿದ್ದು, ನ್ಯಾಯವಾದಿ ಎಸ್.ಎನ್.ಕರ್ಜಗಿ ಉಪನ್ಯಾಸಕರಾಗಿ ಆಗಮಿಸಲಿದ್ದಾರೆ.

# ಅಂಬ್ಯುಲನ್ಸ್ ವಾಹನ ಹಸ್ತಾಂತರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.17-ಸಿ.ಎಸ್.ಆರ್ ಅನುದಾನದಡಿ ಕೋಟಕ್ ಮಹಿಂದ್ರಾ ಬ್ಯಾಂಕ್ ನೀಡಿದ ಸುಸಜ್ಜಿತ ಅಂಬುಲೆನ್ಸ್ ವಾಹನವನ್ನು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಬಾದಾಮಿ ತಾಲೂಕಾ ಆಸ್ಪತ್ರೆಗೆ ಸೋಮವಾರ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ ಸೇರಿದಂತೆ ಇತರರು ಇದ್ದರು.

# ಶ್ರೇಷ್ಠ ಸಾಹಿತಿ ಡಾ|| ಪಂಚಾಕ್ಷರಿ ಹಿರೇಮಠ ನಿಧನಕ್ಕೆ ಶ್ರೀ ಡಾ|| ರಾಜಶೇಖರ ಶಿವಾಚಾರ್ಯರ ಕಂಬನಿ

ಮಲ್ಲಮ್ಮ ನುಡಿ ವಾರ್ತೆ

ಬೀದರ:ನಾಡು-ದೇಶ ಕಂಡ ಅಪ್ರತಿಮ ಸಾಹಿತಿ ದಿಗ್ಗಜರಾಗಿದ್ದ ಧಾರವಾಡದ ಡಾ||ಪಂಚಾಕ್ಷರಿ ಹಿರೇಮಠರು ಲಿಂಗೈಕ್ಯರಾದುದು ಮರೆಯಲಾರದ ಅತೀವ ದುಃಖವನ್ನು ತಂದಿದೆ. ಡಾ|| ಹಿರೇಮಠರು ಕನ್ನಡ ಜೊತೆಗೆ ಉರ್ದು, ಹಿಂದಿ, ಇಂಗ್ಲಿಷ, ಸಂಸ್ಕೃತ ಅನೇಕ ಭಾಷೆಗಳಲ್ಲಿ ಪ್ರಾವಿಣ್ಯ ಹೊಂದಿದ್ದರು. ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಪ್ರಶಸ್ತಿಗಳಿಗೆ ಭಾಜನರಾಗಿ ನಾಡಿಗೆ ಕೀರ್ತಿ ತಂದವರು. ನಾಡು-ನುಡಿಗೆ ಶ್ರೇಷ್ಠ ಕೃತಿ ಪುಷ್ಪಗಳನ್ನು ಸಮರ್ಪಿಸಿದರವರು. ಶ್ರೀಯುತರು ಸ್ವಾತಂತ್ರ ಹೋರಾಟಗಾರರೂ ಹೌದು. ಕಲ್ಯಾಣ ಕರ್ನಾಟಕ ವಿಮೋಚನೆಗಾಗಿ ರಝಾಕಾರ ವಿರುದ್ಧ ಹೋರಾಡಿದವರು. ನಾವು ಪಂಚಪೀಠಗಳ ಕುರಿತು ಸಂಶೋಧನ ಕೈಗೊಂಡ ಸಂದರ್ಭದಲ್ಲಿ ಶ್ರೀಯುತರು ಅನೇಕ ರೀತಿಯ ಮಾರ್ಗದರ್ಶನವನ್ನು ತೋರಿದರಲ್ಲದೇ ಅನೇಕ ಸಭೆ ಸಮಾರಂಭಗಳ್ಳಿ ಪ್ರೋತ್ಸಾಹಿಸಿ ಬೆನ್ನು ತಟ್ಟಿದವರು. ಅವರು ಭಾವಜೀವಿಗಳು. ವಿಶ್ವಮಾನ್ಯ ಸಾಹಿತಿಗಳಾಗಿದ್ದರೂ ಕೂಡ ನಮ್ಮಂತ ಅಂಬೆಗಾಲಿಡುವ ಸಾಹಿತಿ ಯುವ ಸಂಶೋಧಕರಿಗೆ ತುಂಬಾ ಉತ್ಸಾಹ ತುಂಬುತ್ತಿದ್ದರು. ಅವರ ಅಗಲುವಿಕೆ ತುಂಬಾ ದುಃಖ ತಂದಿದೆ.

ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ ಮತ್ತು ಅವರ ಪರಿವಾರದವರಿಗೆ ದುಃಖವನ್ನು ತಡೆದುಕೊಳ್ಳುವ ಶಕ್ತಿ ನೀಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ.



ಬಸವಕಲ್ಯಾಣ :- ತಾಲೂಕಿನ ಹಾರಕೂಡ ಗ್ರಾಮದಲ್ಲಿ ಶ್ರೀ ಮಲಿಕ್ ಸಾಹೇಬ ಜಾತ್ರಾ ಮಹೋತ್ಸವ ನಿಮಿತ್ಯ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶ್ರೀ ಹಜರತ್ ದಾವಲ್ ಮಲಿಕ್ ಸಾಹೇಬರಿಗೆ ಗಂಧ ಲೇಪನ ಮಾಡಿ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ

ಮಲ್ಲಿನಾಥ ಹಿರೇಮಠ ಹಾರಕೂಡ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಖಾಜಾ ಸಾಹೇಬ ಮುಲ್ಲಾ, ಗನಿಸಾಬ್ ಲದಾಫ್, ಸಿದ್ರಾಮ ಹೆಗಡೆ, ಅಪ್ಪಣ್ಣ ಜನವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

### ಮಾ.18 ರಿಂದ 30 ರವರೆಗೆ ಬೆಳಿಗ್ಗೆ 5 ರಿಂದ

# ಮಧ್ಯಾಹ್ನ 12 ರವರೆಗೆ ವಿದ್ಯುತ್ ಸರಬರಾಜು ಮಾಡಲು ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ (ಕರ್ನಾಟಕ ವಾರ್ತೆ) ಮಾರ್ಚ.17: 110/33/11ಕೆವಿ ಜನವಾಡಾ ಉಪ-ಕೇಂದ್ರದಿಂದ ಸರಬರಾಜು ಆಗುವ 11ಕೆವಿ ಕೆ.ಎಮ್.ಎಫ್. ಎನ್.ಜೆ.ವೈ. ಫೀಡರನ ಮೇಲೆ ಖಜಭಿಂಟಿ-ಜಣಭಿಣಂಡುಟಿರ ಕೆಲಸ ಇರುವುದರಿಂದ 11ಕೆವಿ ಚಾಂಬೋಳ ಐಪಿ ಫೀಡರ್‌ದಿಂದ ಚಾಂಬೋಳ, ಹಿಪ್ಪಳಗಾಂವ ಮತ್ತು ದದ್ದಪೂರ ಗ್ರಾಮಗಳಲ್ಲಿ ದಿನಾಂಕ: 19-03-2025 ರಿಂದ 30-03-2025 ರವರೆಗೆ ಬೆಳಿಗ್ಗೆ 5:00 ಗಂಟೆಯಿಂದ ಮಧ್ಯಾಹ್ನ 12:00 ಗಂಟೆವರೆಗೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಪ್ರಯುಕ್ತ ಚಾಂಬೋಳ, ಹಿಪ್ಪಳಗಾಂವ ಮತ್ತು ದದ್ದಪೂರ ಊರಿನ ಫೀಡರಗಳ ಮೇಲೆ ಬರುವ ಎಲ್ಲಾ ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಬೀದರ ವಿಭಾಗದ ಜೆಸ್ಕಾಂ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೆಯುಡಬ್ಲ್ಯೂಜೆಯಲ್ಲಿ ಡಿವಿಜಿ ಜನ್ಮದಿನಾಚರಣೆ

# ಎಲ್ಲಾ ಧರ್ಮಗಳ ಸಾರ ಮಂಕುತಿಮ್ಮನ ಕಗ್ಗದಲ್ಲಿದೆ: ನ್ಯಾಯಧೀಶ ಕೆ.ಎಚ್.ಅಶ್ವತ್ಥ ನಾರಾಯಣಗೌಡ ಅಭಿಮತ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಸಂಘದ ಸ್ಥಾಪಕ ಅಧ್ಯಕ್ಷರಾದ ಡಿವಿಜಿ ಅವರ 138ನೇ ಜನ್ಮ ದಿನಾಚರಣೆಯನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಆಚರಿಸಲಾಯಿತು.

ಮುಖ್ಯಅತಿಥಿಯಾಗಿ ಪಾಲ್ಗೊಂಡಿದ್ದ, ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಕೆ.ಎಚ್. ಅಶ್ವತ್ಥ ನಾರಾಯಣ ಅವರು ಮಾತನಾಡಿ, ಡಿವಿಜಿ ಅವರ ಮಂಕುತಿಮ್ಮನ ಕಗ್ಗದಲ್ಲಿ ಎಲ್ಲಾ ಧರ್ಮಗಳ ಮತ್ತು ಬದುಕಿನ ಸಾರವೂ ಅಡಗಿದೆ ಎಂದು ಹೇಳಿದರು.

ಡಿವಿಜಿ ಅವರು ತಮ್ಮ ಕೃತಿಗಳ ಮೂಲಕ ಕಾರ್ಮಿಕ ಸಾರವನ್ನು ಸಮಾಜಕ್ಕೆ ಧಾರೆ ಎರೆದು ಸಾಮಾಜಿಕ ಕಳಕಳಿಯನ್ನು ಮೆರೆದಿದ್ದಾರೆ. ಅವರ ವ್ಯಕ್ತಿತ್ವ ಸಮಾಜದ ಭಾಗವಾಗಿರುವ ನಮಗೆಲ್ಲರಿಗೂ ಉತ್ತಮ ಸಂದೇಶ ಎಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಭೂಕಬಳಿಕೆ ನ್ಯಾಯಾಂಗ ಸದಸ್ಯರಾದ ನಾಗಲಿಂಗನ ಗೌಡ ಪಾಟೀಲ್, ಪತ್ರಿಕಾರಂಗ ಮತ್ತು ನ್ಯಾಯಾಂಗ ಅನ್ಯೋನ್ಯವಾಗಿರಬೇಕು. ಸರ್ಕಾರದ ಆಸ್ತಿ ಕಬಳಿಸಿದವರ ಕುರಿತು ಮಾಹಿತಿ ದೊರೆತರೆ ಅದನ್ನು ತಿಳಿಸಲು ಪತ್ರಕರ್ತರೂ ಬದ್ಧರಾಗಬೇಕು ಎಂದರು.

ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಮಾತನಾಡಿ, 1932ರಲ್ಲಿ ಸ್ಥಾಪಿತವಾದ ಕಾರ್ಯನಿರತ ಪತ್ರಕರ್ತರ ಸಂಘವು ಹತ್ತು ಸಾವಿರದಷ್ಟು ಸದಸ್ಯರನ್ನು ಹೊಂದಿದ್ದು, ಬೃಹತ್ ಸಂಘಟನೆಯಾಗಿದೆ. ಡಿವಿಜಿ ಅವರ ಆದರ್ಶದ ಜೀವನ ನಮ್ಮೆಲ್ಲರಿಗೂ ಆದರ್ಶನೀಯ ಎಂದು ಹೇಳಿದರು.

ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ, ಖಜಾಂಚಿ ವಾಸುದೇವ ಹೊಳ್ಳ, ಬೆಂಗಳೂರು ನಗರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್, ಪತ್ರಿಕಾ ವಿತರಕರ ಸಂಘದ ಅಧ್ಯಕ್ಷ ಕೆ. ಶಂಭುಲಿಂಗ ಸೇರಿದಂತೆ ಹಲವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಜಿಲ್ಲಾ ಘಟಕದ ಅಧ್ಯಕ್ಷ ಕೆ. ಸತ್ಯನಾರಾಯಣ, ಉಪಾಧ್ಯಕ್ಷ ಜಿಕ್ರಿಯಾ, ಎ.ಬಿ. ಶಿವರಾಜ್, ಕೆ. ಹರೀಶ್, ಸದಸ್ಯರಾದ ಕೆ. ಶಶಿಕಲಾ, ಶಿವಾನಂದ, ಸುಂದರೇಶ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ರಮೇಶ್ ಸೇರಿದಂತೆ ಹಲವಾರು ಜಿಲ್ಲಾ ಪದಾಧಿಕಾರಿಗಳು, ಸಮಿತಿ ಸದಸ್ಯರು ಮತ್ತು ಸಂಘದ ಇತರ ಸದಸ್ಯರು ಉಪಸ್ಥಿತರಿದ್ದರು.

# ಆದರ್ಶ ಅದ್ಬುತ ಶ್ರೇಯಸ್ಸಿನ ಅಡಿಪಾಯ - ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮಾ 17 ಶ್ರೇಯಸ್ಕರವಾದ ಮಹೋನ್ನತವಾದ ಬದುಕಿನ ಸಾಧ್ಯತೆಗೆ ಆದರ್ಶವೇ ಅಡಿಪಾಯವಾಗಿರುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಿಂದ ಸಂಚಾಲಿತ ಶ್ರೀ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಪ್ರೌಢ ಶಾಲೆಯ ವಾರ್ಷಿಕೋತ್ಸವ ಹಾಗೂ 10ನೇ ತರಗತಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಆದರ್ಶ ಎಂಬುವುದು ಕೇವಲ ಪದವಾಗಿರದೆ ಅದು ಪ್ರಯೋಗ ಶೀಲತೆಯಿಂದ ಕೂಡಿದ್ದು ಮನುಷ್ಯನ ಬದುಕಿಗೆ ಮಾಣಿಕ್ಯದ ದೀಪ್ತಿ ಇದ್ದಂತೆ.

ಯಾವ ಸಮಾಜದಲ್ಲಿ ಆದರ್ಶಗಳು ಮಾತನಾಡುತ್ತವೆಯೋ ಅಂತಹ ಸಮಾಜ ಶ್ರೇಷ್ಠ ಮನಸ್ಥಿತಿಯನ್ನು ಹೊಂದಿರುತ್ತದೆ.

ಶಿಸ್ತು, ಸಂಯಮ, ಕಠಿಣ ಪರಿಶ್ರಮ, ಸತ್ಯನಿಷ್ಠೆ, ಪ್ರಾಮಾಣಿಕತೆ ಬಾಲ್ಯದಿಂದಲೇ ಧಾರಣ ಮಾಡಿದರೆ ಅಂತಹವರ ಬದುಕು ಸಮಾಜಕ್ಕೆ, ರಾಷ್ಟ್ರಕ್ಕೆ ಆದರ್ಶಪ್ರಾಯವಾಗಿರುತ್ತದೆ.

ಆದರ್ಶ ಎಂಬುದು ಅಂತರಂಗ ಬಹಿರಂಗಗಳೆರಡೂ ಶುಚಿಗೊಳಿಸುವ ಸಾಧನವಾಗಿದ್ದು ಪ್ರತಿ ವಿದ್ಯಾರ್ಥಿಯು ಇದನ್ನು ವೃತದ ರೂಪದಲ್ಲಿ ಪಾಲಿಸಬೇಕು.

ಪರೀಕ್ಷೆಗಳನ್ನು ಹಬ್ಬದ ರೀತಿಯಲ್ಲಿ ಸಂಭ್ರಮಿಸಬೇಕೆ ಹೊರತು ಆತಂಕ ಪಡಬಾರದು.

ಧೈರ್ಯ ವಿವೇಕದಿಂದ ಪರೀಕ್ಷೆಯನ್ನು ಎದುರಿಸಿ ಎಲ್ಲರೂ ಉತ್ತಮ ಶ್ರೇಯಾಂಕದೊಂದಿಗೆ ಉತ್ತೀರ್ಣರಾಗುವಂತೆ ಶುಭ ಹಾರೈಸಿದರು. ಅಂಬಾರಾಯ ಉಗಾಜಿ ಕೋಹಿನೂರ ಮಾತನಾಡಿ ಹಾರಕೂಡ ಮಠದ ಶಾಲೆ ಬಡ ಮಕ್ಕಳಿಗೆ ಅನ್ನ, ಅಕ್ಷರ, ಅರಿವು, ಆಶ್ರಯ, ಔಷಧ ಉಚಿತವಾಗಿ ಒದಗಿಸಿಕೊಡುವ ಕಾಮಧೇನುವಾಗಿದೆ.

ಸಮಾಜವನ್ನು ಎತ್ತರಿಸುವ ಪೂಜ್ಯರ ಸಾಮಾಜಿಕ ಕಳಕಳಿ ದೂರದೃಷ್ಟಿ ಅವರ ಪ್ರಬುದ್ಧ ವ್ಯಕ್ತಿತ್ವಕ್ಕೆ ದೊಡ್ಡ ನಿದರ್ಶನವೆಂದು ನುಡಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಐ.ಜಿ.ಮಠಪತಿ, ಶರಣು ಬಿರಾದಾರ, ಹೇಮಲತಾ ಎಂ. ಹಿರೇಮಠ, ಗಜೇಂದ್ರ ಸಂತಾಜಿ, ಸಂತೋಷ ಟೋಣಪೆ, ಲಕ್ಷ್ಮಣ ಸಿ. ಆರ್. ಪಿ. ಪಂಡಿತ ಪೂಜಾರಿ, ಪರಮೇಶ್ವರ ಹೊಳಕುಂದೆ, ಡಾ. ರಾಜಶೇಖರ ಮದರಿ, ಚನ್ನಬಸಯ್ಯ ಮಠ, ಅಲ್ಲಮಪ್ರಭು ಹಿರೇಮಠ, ಸುಧಾರಾಣಿ ಹಾರಕೂಡೆ, ದಿಲೀಪ ಕಲೋಜಿ. ಅಂಬಿಕಾ ಯಲದಗುಂಡಿ, ವಾಣಿ ಸೈದಾಪೂರ, ಮಲ್ಲಿಕಾರ್ಜುನ ಪೆಂಚನಪಳ್ಳಿ, ರೋಹಿತ ಮುಡಬಿ , ಎಂಡಿ ರಿಹಾನ್ ಕುಮಾರ ಚಿಂಚೋಳಿ, ಮೌನೇಶ್ ಬಬಲಾದ, ಅಮರ ಬೇಲೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಶ್ಮಿ ಪವಾಡಶೆಟ್ಟಿ ವಚನ ಗಾಯನ ಮಾಡಿದರು.

ಕಾರ್ಯಕ್ರಮದಲ್ಲಿ 10ನೇ ತರಗತಿ ವಿದ್ಯಾರ್ಥಿಗಳು ಹಾರಕೂಡ ಶ್ರೀಗಳಿಗೆ 784ನೇ ತುಲಾಭಾರ ಮಾಡಿ 21ತೊಲೆ ಬೆಳ್ಳಿ ಪ್ರಸಾದ ತಾಟು ನೀಡಿ ಆಶೀರ್ವಾದ ಪಡೆದರು. ನವಲಿಂಗ ಪಾಟೀಲ ಸ್ವಾಗತಿಸಿದರು. ನಿರೂಪಿಸಿದರು.

ಶಿವಾನಂದ ಪೂಜಾರಿ ವಂದಿಸಿದರು.

# ಒಂದು ವಾರದ ಯೋಗ ಶಿಬಿರ ಮುಕ್ತಾಯ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮಾ 17 ಅಂತರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಒಂದು ವಾರದ ಯೋಗ ಶಿಬಿರವನ್ನು ರೋಟರಿ ಕ್ಲಬ್ ವತಿಯಿಂದ ಇಲ್ಲಿನ ಕಂಬಳಿ ಮಠದಲ್ಲಿ ಆಯೋಜನೆ ಮಾಡಲಾಯಿತು. ಯೋಗ ಗುರೂಜಿಯಾದ ಶ್ರೀ ಆನಂದ್ ಮೊಳಕೆರ ಯೋಗ ಮಾಡುವುದನ್ನು ನಡೆಸಿಕೊಡುತ್ತಿದ್ದಾರೆ. ಮುಖ್ಯ ಅತಿಥಿಗಳಾಗಿ ಅರ್ಚನಾ ಮಂಡಿ ಅವರು ಯೋಗದ ಅರಿವು ಮೂಡಿಸಿದರು ಮತ್ತು ಅತಿಥಿಗಳಾದ ಸಂಗೀತ ಮಂಠಾಳೆ. ನಗರ ಸಭೆಯ ಸದಸ್ಯರಾದ ನಿರ್ಮಲಾ ಕೆ. ಹಾಗೂ ಸುಮಿತ್ರಾ ಬಾಯಿ ಡಾವಣಗಾಂವೆ. ಶಿವಣಕರ್. ಅಂತರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಪುರಸಭೆಯ ಸಿಬ್ಬಂದಿಗಳಾದ

ಅನುರಾಧ ತಂದೆ ಮಲ್ಲಿಕಾರ್ಜುನ್ ಸ್ಟೇನೋಗ್ರಾಫರ್ ಸಿಎಂಸಿ ಮತ್ತು ಜಗದೇವಿ ದಿಲೀಪ್ ಸಿಬ್ಬಂದಿ ಸಿಎಂಸಿ ಅವರಿಗೆ ಸನ್ಮಾನ ಮಾಡಲಾಯಿತು. ರೋಟರಿ ಕ್ಲಬ್ ಪದಾಧಿಕಾರಿಗಳಾದ ಅಧ್ಯಕ್ಷರು ರೋಟರಿ ಕ್ಲಬ್ ಅಧ್ಯಕ್ಷರಾದ ಡಾ. ಆನಂದ ಪಾಟೀಲ್. ಸೆಕ್ರೆಟರಿ ನಾಗನಾಥ ಮುಕ್ತಾ. ಸಿದ್ದರಾಮ್ ಯಾನಗುಂದೆ . ಉಮೇಶ್ ಶೀಲವಂತ್.

ಸೂರ್ಯಕಾಂತ್ ಮಠ.

ಡಾ. ರವೀಂದ್ರನಾಥ್ ಜಿ. ಅಮಿತ್ ಪರ್ತಾಪುರೆ .

ಡಾ.ಸಾಗರ್ ಬಸನಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಈ ಶಿಬಿರವು ಇನ್ನೂ ಆರು ದಿವಸ ನಡೆದ ಶಿಬಿರದಲ್ಲಿ ಅನೇಕರು ಪಾಲ್ಗೊಂಡಿದ್ದರು.

# ಯಾದಗಿರಿ ಜಿಲ್ಲೆಗೆ ಶಾಶ್ವತ ಕುಡಿಯುವ ನೀರು ಒದಗಿಸಲು 2004 ಕೋಟಿ ರೂ. ಕಾಮಗಾರಿ : ಸಚಿವ ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿಮಾ.17:ಯಾದಗಿರಿ ಜಿಲ್ಲೆಯ 6 ತಾಲ್ಲೂಕುಗಳಲ್ಲಿ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಅಂದಾಜು ಮೊತ್ತ 2004.00 ಕೋಟಿ ರೂ.ಗಳಲ್ಲಿ ಕಾಮಗಾರಿ ಕೈಗೆತ್ತಿ–ಕೊಂಡಿದ್ದು, ಜಿಲ್ಲೆಯ ಎಲ್ಲಾ ಗ್ರಾಮೀಣ ಜನವಸತಿಗಳಿಗೆ ಶಾಶ್ವತ ಕುಡಿಯುವ ನೀರಿನ ಪರಿಹಾರ ಸಿಗಲಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಡಾ.ಬಿ.ಜಿ.ಪಾಟೀಲ್ ಅವರು ಶೂನ್ಯವೇಳೆ ಪ್ರಸ್ತಾವನೆ ಮೇಲಿನ ಪ್ರಶ್ನೆಗೆ ಉತ್ತರ ನೀಡಿರುವ ಸಚಿವರು, ಯಾದಗಿರಿ ಜಿಲ್ಲೆಯ 6 ತಾಲ್ಲೂಕುಗಳ 465 ಗ್ರಾಮಗಳ 710 ಜನವಸತಿ ಪ್ರದೇಶಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಅಂದಾಜು ಮೊತ್ತ 2004.00 ಕೋಟಿ ರೂ.ಗಳಲ್ಲಿ ನಾರಾಯಣಪುರ ಜಲಾಶಯದಿಂದ ಪ್ರತಿ ಮನೆಗೆ 55 ಎಲ್.ಪಿ.ಸಿ.ಡಿಯಂತೆ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲು ಕಾಮಗಾರಿ ಕೈಗೆತ್ತಿಕೊಂಡಿ–ದ್ದು, ಕಾಮಗಾರಿ ಪ್ರಗತಿಯ ಹಂತದಲ್ಲಿದ್ದು, ಮುಕ್ತಾಯದ ನಂತರ ಜಿಲ್ಲೆಯ ಎಲ್ಲಾ ಗ್ರಾಮೀಣ ಜನವಸತಿಗಳಿಗೆ ಶಾಶ್ವತ ಕುಡಿಯುವ ನೀರಿನ ಪರಿಹಾರ ಸಿಗಲಿದೆ ಎಂದರು.

ಯಾದಗಿರಿ ಜಿಲ್ಲೆಯಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಬಹುದಾದ ಸುಮಾರು 272 ಹಳ್ಳಿಗಳನ್ನು ಗುರುತಿಸಲಾಗಿದ್ದು, ಸಮಸ್ಯೆಯನ್ನು ಬಗೆಹರಿಸಲು ಈಗಾಗಲೇ 10 ಖಾಸಗಿ ಬೋರ್‌ವೆಲ್‌ಗಳಿಂದ ಹಾಗೂ 2 ಖಾಸಗಿ ಟ್ಯಾಂಕರ್‌ಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ. ಸಮಸ್ಯಾತ್ಮಕ ತಾಲ್ಲೂಕುಗಳಲ್ಲಿ



ಕುಡಿಯುವ ನೀರಿನ ಅಭಾವವನ್ನು ಕೂಲಂಕುಷವಾಗಿ ಗಮನಿಸಿ ಕೊಳವೆ ಬಾವಿಗಳು ಬತ್ತಿ ಹೋದಲ್ಲಿ ಪ್ರಥಮ ಆದ್ಯತೆ ಮೇರೆಗೆ ಬಾಡಿಗೆ ಆಧಾರದ ಮೇಲೆ ಕೊಳವೆ ಬಾವಿಗಳನ್ನು ಪಡೆಯಲು, ಇದು ಲಭ್ಯವಿಲ್ಲದಿದ್ದಲ್ಲಿ ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡಲು, ಕೊಳವೆ ಬಾವಿಗಳನ್ನು ಫ್ಲಷಿಂಗ್ ಮಾಡಿ ಮತ್ತು ಆಳಗೊಳಿಸುವುದರೊಂದಿಗೆ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಕ್ರಮಕೈಗೊಳ್ಳಲಾಗುವುದೆ ಮುಂದುವರದು ಅನಿವಾರ್ಯ ಸಂದರ್ಭದಲ್ಲಿ ಸಂಬಂಧಪಟ್ಟ ಭೂವಿಜ್ಞಾನಿಯವರ ವರದಿಯನುಸಾರ ಹೊಸದಾಗಿ ಬೋರ್‌ವೆಲ್ ಕೊರೆಯಿಸಲು ಕ್ರಮವಹಿಸಿ ತುರ್ತು ಕಾಮಗಾರಿಗಳ ಕ್ರಿಯಾ ಯೋಜನೆಯನ್ನು 360.00ಲಕ್ಷ ರೂ. ಗಳಲ್ಲಿ ತಯಾರಿಸಲಾಗಿದೆ ಎಂದರು.

ಯಕ್ತಾಪೂರ ಗ್ರಾಮ ಪಂಚಾಯತಿಯು ಒಟ್ಟು 13 ಹಳ್ಳಿಗಳನ್ನು ಒಳಗೊಂಡಿದ್ದು, ಪ್ರಸ್ತುತ ಯಕ್ತಾಪೂರ ಆಶ್ರಯ ಕಾಲೋನಿಯಲ್ಲಿ ನೀರಿನ ಸಮಸ್ಯೆ ಉಂಟಾಗಿದ್ದು, ಈ ಗ್ರಾಮಕ್ಕೆ ಪ್ರತಿ ದಿನ 6 ಟ್ರಿಪ್‌ಗಳಂತೆ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಇನ್ನುಳಿದ ಹಳ್ಳಿಗಳಲ್ಲಿ ಮುಂಬರುವ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಗ್ರಾಮಗಳಿಗೆ ಖಾಸಗಿ ಬೋವಲ್‌ಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದು.ಎಂದು ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ವಿಧಾನ ಪರಿಷತ್ ಸದಸ್ಯರಾದ ಡಾ.ಬಿ.ಜಿ.ಪಾಟೀಲ್ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ್ದಾರೆ.

ವಿಧಾನ ಪರಿಷತ್ ಸದಸ್ಯರಾದ ಡಾ.ಬಿ.ಜಿ.ಪಾಟೀಲ ಅವರ ಪ್ರಶ್ನೆ: ಯಾದಗಿರಿ ಜಿಲ್ಲೆಯಲ್ಲಿ ಸುಮಾರು 250 ಕ್ಕೂ ಹೆಚ್ಚು ಹಳ್ಳಿಗಳಲ್ಲಿ ಬೇಸಿಗೆ ಶುರುವಾಗುವ ಮುನ್ನವೇ ನೀರಿನ ಸಮಸ್ಯೆ ಉಂಟಾಗಿದ್ದು, ಕುಡಿಯುವ ನೀರಿಗಾಗಿ ಸುರಪುರ ತಾಲ್ಲೂಕಿನ ಕಂಭಾವಿ ಸಮೀಪದ ಯಕ್ತಾಪೂರ ಗ್ರಾಮದಲ್ಲಿ ನಿವಾಸಿಗಳು ನೀರಿಗಾಗಿ ಪಡುವ ಪಡಿಪಾಟಲು ಅಷ್ಟಿಷ್ಟಲ್ಲ ನೀರಿನ ಸಮಸ್ಯೆ ಬಗ್ಗೆ ಕೇಳಿದರೆ ಇಲ್ಲಿನ ಜನರ ಕಣ್ಣಾಲಿಗಳಲ್ಲಿ ನೀರಾಡುತ್ತದೆ

ಯಕ್ತಾಪೂರ ಗ್ರಾಮ ಪಂಚಾಯಿತಿ 13 ಹಳ್ಳಿಗಳನ್ನೊಳಗೊಂಡ ದೊಡ್ಡ. ಗ್ರಾಮ ಪಂಚಾಯಿತಿ ಕೇಂದ್ರವಾಗಿದ್ದು ನಾಲ್ಕೈದು ದಿನಗಳಿಗೊಮ್ಮೆ ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿರುವುದು ಕಂಡುಬಂದಿರುತ್ತದೆ. ಬಿರುಬೇಸಿಗೆ ಆರಂಭದ ದಿನಗಳಲ್ಲಿಯೇ ನೀರಿನ ಸಮಸ್ಯೆಯ ಮುನ್ಸೂಚನೆಯಾಗಿದ್ದು, ಮುಂದಿನ ದಿನಮಾನದಲ್ಲಿ ಯಾವ ರೀತಿ ನೀರಿನ ಸಮಸ್ಯೆಯಾಗುತ್ತದೆ ಎಂದು ಊಹಿಸಲು ಸಾಧ್ಯವಿಲ್ಲ ಹಾಗಾಗಿ ಟ್ಯಾಂಕರ್ ಮೂಲಕ ನೀರು ಪೂರೈಸುವುದಲ್ಲದೆ ಶಾಶ್ವತ ನೀರಿನ ಸಮಸ್ಯೆಯ ಪರಿಹಾರದ ನಿಟ್ಟಿನಲ್ಲಿ ಚಿಂತನೆ ನಡೆಸಬೇಕೆಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಅವರಿಗೆ ವಿಧಾನ ಪರಿಷತ್ ಸದಸ್ಯರಾದ ಡಾ.ಬಿ.ಜಿ.ಪಾಟೀಲ ಅವರು ಶೂನ್ಯವೇಳೆಯಲ್ಲಿ ಪ್ರಶ್ನೆಯನ್ನು ಕೇಳಲಾಯಿತು.

## ಸತತ ಪ್ರಯತ್ನವೇ ಯಶಸ್ಸಿನ ಗುಟ್ಟು : ಮಹಾದೇವ ಪಟ್ನೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.17:ಸತತಪ್ರಯತ್ನವೇ ಯಶಸ್ಸಿನ ಗುಟ್ಟಾಗಿದೆ ಎಂದು ಶಾರದಾ ಪಬ್ಲಿಕ್ ಶಾಲೆಯ ಆಡಳಿತಾಧಿಕಾರಿ ಮಹಾದೇವ ಪಟ್ನೆ ಅಭಿಪ್ರಾಯಪಟ್ಟರು.

ಪಟ್ಟಣದ ಶಾರದಾ ಪಬ್ಲಿಕ್ ಶಾಲೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಉದ್ಘಟಿಸಿ ಅವರು ಮಾತನಾಡಿದರು. ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಜೀವನ ಘಟದ ತಿರುವಾಗಿದೆ. ವಿದ್ಯಾರ್ಥಿಗಳು ಸತತ ಪ್ರಯತ್ನಪಟ್ಟು, ಉತ್ತಮವಾಗಿ ಅಭ್ಯಾಸ ಮಾಡಿ, ಸ್ಪರ್ಧಾತ್ಮಕ




ಯುಗದಲ್ಲಿ ಮುಂದೆ ಬರಬೇಕು. ನಾನು ಮಾಡುತ್ತೇನೆ, ನಾನು ಗೆಲ್ಲುತ್ತೇನೆ ಎನ್ನುವ ಆತ್ಮ ವಿಶ್ವಾಸ ವಿರಬೇಕು. ಆತ್ಮವಿಶ್ವಾಸ ಬೆಟ್ಟವನ್ನು ಅಲಗಾಡಿಸುತ್ತದೆ. ಹೀಗಾಗಿ ಆತ್ಮವಿಶ್ವಾಸ ದಿಂದ ಅಭ್ಯಾಸ ಮಾಡಿ ಯಶಸ್ಸು ಕಂಡು ಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ಶಾರದಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವಸಂತರಾವ ಪಾಟೀಲ ಅಧ್ಯಕ್ಷತೆವಹಿಸಿ ಮಾತನಾಡಿದರು. ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಇಸಿಓ ಸಹದೇವ ಗೌಡಗಾವೆ, ಪತ್ರಕರ್ತ ಅಶೋಕ ರಾಜೋಳೆ ಮಾತನಾಡಿದರು. ಇದೇವೇಳೆ ಹಾಜರಾತಿ, ಕ್ರಿಯೇಟಿವಿಟಿ, ಶುದ್ಧ ಬರಹ ಸೇರಿದಂತೆ ವಿವಿಧ ತರದಲ್ಲಿ ಉತ್ತಮವಾಗಿ ಗುರುತಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಸಿಆರ್‌ಪಿ ಅಂಬರೀಶ ಖಂಡ್ರೆ, ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಸಂಜೀವಕುಮಾರ ಜಾಂತೆ, ಕಾರ್ಯನಿರತ ಪತ್ರಕರ್ತರ ಸಂಘದ ಅದ್ಯಕ್ಷ ಜಯರಾಜ ದಾಬಶೆಟ್ಟಿ, ಪ್ರತಿಭಾ ವಸಂತ ಪಾಟೀಲ, ಅಶೋಕ ಭಂಡಾರಿ, ಆಡಳಿತ ಮಂಡಳಿಯ ರಾಜೋಳೆ, ಮುಖ್ಯ ಶಿಕ್ಷಕಿ ಶಹನಾಜ ಉಪಸ್ಥಿತರಿದ್ದರು. ದೀಪ್ತಿ ಮತ್ತು ಸಂಗಡಿಗರು ಸ್ವಾಗತಗೀತೆ ಹಾಡಿದರು. ಕುಸುಮ ಮತ್ತು ಋತು ನಿರೂಪಿಸಿದರು.



ಹುಮನಾಬಾದ: ಮಾಣಿಕನಗರದ ಶ್ರೀ ಮಾಣಿಕಪ್ರಭುಗಳ ದೇವಸ್ಥಾನದಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಅತಿ ವಿಜ್ರಂಭಣೆಯಿಂದ ಸಪ್ತಾಹ ಕಾರ್ಯಕ್ರಮ ನಡೆಯುತ್ತಿದ್ದು. ಇದರ ನಿಮಿತ್ಯ ದೇವಸ್ಥಾನ ಆವರಣದಲ್ಲಿ ಕೋಲಾಟ ಕಾರ್ಯಕ್ರಮ ಮಾಡಲಾಯಿತು.

## ರೋಗ ನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳಿ: ಆಪ್ತಸಮಾಲೋಚಕಿ ಸುನಿತಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ಪೌಷ್ಟಿಕ ಆಹಾರವನ್ನು ಸೇವಿಸಿ ರೋಗ ನಿರೋಧಕ ಶಕ್ತಿಯನ್ನು ಪ್ರತಿಯೊಬ್ಬರೂ ಹೆಚ್ಚಿಸಿಕೊಳ್ಳಬೇಕೆಂದು ಜಿಲ್ಲಾ ಆರೋಗ್ಯ ಇಲಾಖೆಯ ಆಪ್ತಸಮಾಲೋಚಕಿ ಶ್ರೀಮತಿ ಸುನಿತಾ ತಿಳಿಸಿದರು. ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಬೀದರ್, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೇನಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಬೀದರ ಹಾಗೂ ಕರ್ನಾಟಕ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸಹಯೋಗದೊಂದಿಗೆ ಕಾಲೇಜಿನ ಸಭಾಂಗಣದಲ್ಲಿ ಸೋಮವಾರ ಜರುಗಿದ ರೆಡ್ ರಿಬ್ಬನ್ ಕ್ಲಬ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ವಿಧ್ಯಾರ್ಥಿಗಳಿಗೆ ಪೌಷ್ಟಿಕ ಆಹಾರದ ಕುರಿತು ಮತ್ತು ರೋಗನಿರೋಧಕ ಶಕ್ತಿ ಹೆಚ್ಚಿಸುವ ಕುರಿತು ವಿವರವಾಗಿ ತಿಳಿಸಿದರು. ಅಲ್ಲದೇ ವಿದ್ಯಾರ್ಥಿಗಳಿಗೆ ಎಚ್‌ಐವಿ ಏಡ್ಸ್ ಸೋಂಕಿತ ವ್ಯಕ್ತಿಯ ಕೌನ್ಸಿಲಿಂಗ್ ಹಾಗೂ ಅವರ ಮುಂಜಾಗ್ರತಾ ಕ್ರಮಗಳನ್ನು, ಏಡ್ಸ್ ರೋಗ ಹರಡಲು ಕಾರಣ ಅವುಗಳ ಮುನ್ನೆಚ್ಚರಿಕೆ ಕ್ರಮ ಮುಂತಾದ ವಿಷಯಗಳನ್ನು ಕವನದ ಸಾಲುಗಳಲ್ಲಿ ವಿದ್ಯಾರ್ಥಿಗಳಿಗೆ ಮುಟ್ಟುವಂತೆ ಪ್ರಸ್ತುತ ಪಡಿಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಉಪ ಪ್ರಾಂಶುಪಾಲರಾದ ಪ್ರೊ. ಸೋಮನಾಥ ಬಿರಾದಾರ ಅಧ್ಯಕ್ಷಿಯ ನುಡಿ ಹೇಳುತ್ತಾ ವಿದ್ಯಾರ್ಥಿಗಳಿಗೆ ಇಂದು ಏಡ್ಸ್ ಜಾಗೃತಿ ಅತಿ ಅವಶ್ಯಕವಾಗಿದೆ. ಸುನೀತಾ ಅವರು ಕವನ ಹೇಳುವ ಮೂಲಕ ಜಾಗೃತಿ ಮೂಡಿಸಿದ್ದು ಮೆಚ್ಚುಗೆ ವ್ಯಕ್ತಪಡಿಸಿದರು.

ಏಡ್ಸ್ ಜಾಗೃತಿ ಪ್ರಯುಕ್ತ ಕ್ವಿಜ್ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸ್ಪರ್ಧೆಯಲ್ಲಿ ಪ್ರಥಮ ಅನುಪಮ, ದ್ವಿತೀಯ ರೋಹನ್, ತೃತೀಯಾ ಶಿವಾನಿ ಇವರಿಗೆ ಬಹುಮಾನ ವಿತರಿಸಲಾಯಿತು. ಎನ್.ಎಸ್.ಎಸ್ ಅಧಿಕಾರಿ ಡಾ. ದಿಲೀಪ್ ಮಾಲೆ ಸ್ವಾಗತಿಸಿ ನಿರೂಪಿಸಿದರು. ವೇದಿಕೆ ಮೇಲೆ ಮಧುಸೂಧನ್ ಕುಲಕರ್ಣಿ ಹಾಗೂ ವಿದ್ಯಾರ್ಥಿಗಳು ಮುಂತಾದವರು ಪಾಲ್ಗೊಂಡಿದ್ದರು.

## ಕಲಬುರಗಿ ಜಿಲ್ಲೆಯಲ್ಲಿ ನಿಮ್ಹಾನ್ಸ್ ಮಾದರಿ ಸಂಸ್ಥೆ ಪ್ರಾರಂಭ:ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ. 17:ಕಲಬುರಗಿ ಜಿಲ್ಲೆಯ ವೈದ್ಯಕೀಯ ವಿಜ್ಞಾನಿಗಳ ಸಂಸ್ಥೆಯಲ್ಲಿ ನಿಮ್ಹಾನ್ಸ್ ಮಾದರಿಯ ಸಂಸ್ಥೆಯನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದ್ದು, 2025–26ನೇ ಸಾಲಿನ ಆಯವ್ಯಯದಲ್ಲಿ ಸಹ ಘೋಷಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣಪ್ರಕಾಶ್ ಆರ್ ಪಾಟೀಲ್ ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮೈಸೂರು ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳಲ್ಲಿ ನಿಮ್ಹಾನ್ಸ್ ಮಾದರಿಯ ಸಂಸ್ಥೆಗಳನ್ನು ತಲಾ 100 ಕೋಟಿ ರೂ ವೆಚ್ಚದಲ್ಲಿ ಅಗತ್ಯ ಮಾನವ ಸಂಪನ್ಮೂಲ ಹಾಗೂ ಸುಸಜ್ಜಿತ ಸೌಲಭ್ಯಗಳೊಂದಿಗೆ ಸ್ಥಾಪಿಸಲಾಗುವುದು ಎಂದು ತಿಳಿಸಿದರು.

## ಕುಡಿಯುವ ನೀರಿನ ಸಮಸ್ಯೆಗೆ ಸಹಾಯವಾಣಿ ಆರಂಭ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಮಾ.17: ತಾಲೂಕಿನ ಗ್ರಾಮೀಣ ಭಾಗದಲ್ಲಿ ಸಾರ್ವಜನಿಕರಿಗೆ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆಯಾದರೆ ಪರಿಹಾರಕ್ಕಾಗಿ ಸಹಾಯವಾಣಿ ಕೇಂದ್ರ ಆರಂಭಿಸಲಾಗಿದೆ ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ತಿಳಿಸಿದ್ದಾರೆ ತಾಲೂಕಿನ ಯಾವುದೇ ಊರು, ವಾರ್ಡ್ಗಳಲ್ಲಿ ನೀರಿನ ಸಮಸ್ಯೆ ಕಂಡುಬಂದರೆ ಸಮರ್ಪಕವಾಗಿ ಸರಬರಾಜು ಮಾಡಲು ಕ್ರಮಕೈಗೊಳ್ಳಲಾಗುವದು. ಆದ್ದರಿಂದ ಸಾರ್ವಜನಿಕರು ಕಾರ್ಯಾಲಯದಲ್ಲಿ ದೂರು ನೀಡಬಹುದು ಅಥವಾ ಸಹಾಯವಾಣಿ ಕೇಂದ್ರದ ಸಂಖ್ಯೆಗೆ 7026486275 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ನಕಲಿ ಔಷಧಿ ನಿಯಂತ್ರಣಕ್ಕೆ ಅಗತ್ಯ ಕ್ರಮ : ಸಚಿವ ದಿನೇಶ್ ಗುಂಡೂರಾವ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.17:ರಾಜ್ಯದಲ್ಲಿ ನಕಲಿ ಔಷಧ ಮಾರಾಟ ಮಾಡುವ ಕಂಪನಿಗಳ ವಿರುದ್ಧ ಅಗತ್ಯ ಕ್ರಮ ಜರುಗಿಸಿ ನಿಯಂತ್ರಣಕ್ಕೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದರು. ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಪರಿಷತ್ ಸದಸ್ಯ ಎಸ್. ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತಚತರಿಸಿದ ಸಚಿವರು, ಕಳೆದ 3 ವರ್ಷಗಳಲ್ಲಿ ನಕಲಿ ಔಷಧ ಮಾರಾಟಗಾರರನ್ನು ಪತ್ತೆ ಹಚ್ಚಿ ಕಲಂ 17 ಬಿ, (ಛ), (ಛಿ) (ಜ) ಮತ್ತು (ಜ) ರ ಔಷಧ ಮತ್ತು ಕಾಂತಿ ವರ್ಧಕ ಅಧಿನಿಯಮ 1940 ಮತ್ತು ನಿಯಮಗಳಡಿಯಲ್ಲಿ ಸೂಕ್ತ ಕ್ರಮಕ್ಕೈಗೊಂಡು ವಿವಿಧ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ.

ಕಳೆದ 3 ವರ್ಷಗಳಲ್ಲಿ ಒಟ್ಟು 20 ನಕಲಿ ಔಷಧ ತಯಾರಿಕಾ ಕಂಪನಿ ಮತ್ತು 01 ಔಷಧ ಮಾರಾಟಗಾರರ ಪ್ರಕರಣಗಳನ್ನು ಪತ್ತೆ ಮಾಡಿ ಮೊಕ್ಕದ್ದಮೆ ಹೂಡಲಾಗಿದೆ. 2022–23 ನೇ ಸಾಲಿನಲ್ಲಿ ಒಟ್ಟು 06, 2023–24ನೇ ಸಾಲಿನಲ್ಲಿ ಒಟ್ಟು 10 ನಕಲಿ ಔಷಧ ತಯಾರಕರು ಮತ್ತು 2024–25 ನೇ ಸಾಲಿನಲ್ಲಿ 04 ನಕಲಿ ಔಷಧ ತಯಾರಕರ ಮತ್ತು 01 ನಕಲಿ ಔಷಧ ಮಾರಾಟಗಾರರ ವಿರುದ್ಧ ವಿವಿಧ ಮಾನ್ಯ ನ್ಯಾಯಾಲಯಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗಿದೆ. ಕಾನೂನು ರೀತ್ಯಾ ಅಗತ್ಯ ಕ್ರಮಗಳನ್ನು ಸಹ ಜರುಗಿಸಲಾಗಿದೆ. ಈ ಬಗ್ಗೆ ಕೂಡಲೇ Drug Recall policy ಜಾರಿ ಮಾಡುವ ಬಗ್ಗೆ ಕ್ರಮ ವಹಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

## ಅಂಚೆ ಸಿಬ್ಬಂದಿಯಿಂದ ರಕ್ತದಾನ ಸಪ್ತಾಹ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 17 : ಇಲ್ಲಿಯ ಪ್ರಧಾನ ಅಂಚೆ ಕಚೇರಿಯ ಸಿಬ್ಬಂದಿ ರಕ್ತದ ತುರ್ತು ಅವಶ್ಯಕತೆ ಇರುವವರಿಗೆ ನೆರವಾಗಲು ರಕ್ತದಾನ ಸಪ್ತಾಹ ಹಮ್ಮಿಕೊಳ್ಳುವ ಮೂಲಕ ಗಮನ ಸೆಳೆದಿದ್ದಾರೆ. ಸಪ್ತಾಹದ ಮೊದಲ ದಿನವಾದ ಸೋಮವಾರ ನಾಲ್ವರು ಸಿಬ್ಬಂದಿ ಜಿಲ್ಲಾ ರಕ್ತನಿಧಿ ಕೇಂದ್ರದಲ್ಲಿ ರಕ್ತದಾನ ಮಾಡಿದರು. ಜಿಲ್ಲಾ ರಕ್ತನಿಧಿ ಕೇಂದ್ರದಲ್ಲಿ ರಕ್ತದ ಕೊರತೆ ಇರುವ ಮಾಹಿತಿ ಹಿನ್ನೆಲೆಯಲ್ಲಿ ಇಲಾಖೆ ಸಿಬ್ಬಂದಿಯಿಂದ ರಕ್ತದಾನ ಸಪ್ತಾಹ ಹಮ್ಮಿಕೊಳ್ಳಲಾಗಿದೆ ಎಂದು ಸಪ್ತಾಹದ ಆಯೋಜ–ಕರೂ ಆದ ಪ್ರಧಾನ ಅಂಚೆ



ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್ ತಿಳಿಸಿದರು.

ಸಪ್ತಾಹದಲ್ಲಿ ಕಚೇರಿ ಕೆಲಸ ಕಾರ್ಯಗಳಿಗೆ ತೆ–ಊಂದರೆಯಾಗದಂತೆ ನಿತ್ಯ ಕೆಲ ಸಿಬ್ಬಂದಿ ರಕ್ತದಾನ ಮಾಡಲಿದ್ದಾರೆ. ಮೊದಲ ದಿನ ಕೃಷ್ಣ, ಸುನೀಲ್, ದತ್ತಪ್ಪ ಸುರನರ ಹಾಗೂ ದತ್ತು 'ಬಿ ಪಾಸಿಟಿವ್' ರಕ್ತ ದಾನ ಮಾಡಿದ್ದಾರೆ ಎಂದು ತಿಳಿಸಿದರು. ಅಂಚೆ ಇಲಾಖೆಯ ಸಿಬ್ಬಂದಿ ಸಾಮಾಜಿಕ ಚಟುವಟಿಕೆಗಳಲ್ಲಿ ಸದಾ ಮುಂಚೂಣಿಯಲ್ಲಿದ್ದಾರೆ ಎಂದು ಅಂಚೆ ಅಧೀಕ್ಷಕ ವಿ.ಎಲ್. ಚಿತಕೋಟೆ ಹೇಳಿದರು.

ರಕ್ತನಿಧಿ ಕೇಂದ್ರದ ಮನವಿಗೆ ಸ್ಪಂದಿಸಿ ಅಂಚೆ ಇಲಾಖೆ ಸಿಬ್ಬಂದಿ ರಕ್ತದಾನ ಮಾಡಿರುವುದು ಸಂತಸ ಉಂಟು ಮಾಡಿದೆ ಎಂದು ಜಿಲ್ಲಾ ರಕ್ತನಿಧಿ ಕೇಂದ್ರದ ಮುಖ್ಯಸ್ಥ ಡಾ. ವೀರೇಂದ್ರ ಪಾಟೀಲ ತಿಳಿಸಿದರು.

## ಸುಪ್ರೀಂ ಕೋರ್ಟ್ ಜಡ್ಜ್ ಆಗಿ ಬಾಗ್ಚಿ ಅಧಿಕಾರ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.17: ಸುಪ್ರೀಂ ಕೋರ್ಟ್‌ನ ಜಡ್ಜ್ ಆಗಿ ಜೊಯಮಲ್ಯ ಬಾಗ್ಚಿ ಸೋಮವಾರ ಅಧಿಕಾರ ಸ್ವೀಕರಿಸಿದ್ದು, 2031ರ ಮೇ ತಿಂಗಳಲ್ಲಿ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸಲಿದ್ದಾರೆ. ಇದಕ್ಕೂ ಮುನ್ನ ಕೋಲ್ಕತ್ತಾ ಹೈಕೋರ್ಟ್‌ನ ನ್ಯಾಯಾಧೀಶರಾಗಿದ್ದ ಜೊಯಮಲ್ಯ ಬಾಗ್ಚಿ ಅವರನ್ನು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರನ್ನಾಗಿ ನೇಮಕ ಮಾಡುವಂತೆ ಮಾ.10 ರಂದು ಅನುಮೋದನೆ ನೀಡಿತ್ತು. ಅದರಂತೆ ಇಂದು ಸುಪ್ರೀಂ ಕೋರ್ಟ್ ಆವರಣದಲ್ಲಿ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸಂಜೀವ ಖನ್ನಾ ಅವರು ನ್ಯಾಯಾಧೀಶ ಜೊಯಮಲ್ಯ ಬಾಗ್ಚಿ ಅವರಿಗೆ ಪ್ರಮಾಣ ವಚನ ಬೋಧಿಸಿದರು.

ಒಟ್ಟು 13 ವರ್ಷಗಳಿಗೂ ಹೆಚ್ಚು ಕಾಲ ಹೈಕೋರ್ಟ್ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿರುವ ಜೊಯಮಲ್ಯ ಬಾಗ್ಚಿ, 2011ರ ಜೂನ್ 27ರಂದು ಕೋಲ್ಕತ್ತಾ ಹೈಕೋರ್ಟ್‌ನ ನ್ಯಾಯಾಧೀಶರನ್ನಾಗಿ ನೇಮಿಸಲಾಯಿತು. ಬಳಿಕ 2021ರ ಜನವರಿ 4ರಂದು ಆಂಧ್ರಪ್ರದೇಶ ಹೈಕೋರ್ಟ್‌ಗೆ ವರ್ಗಾಯಿಸಲಾಯಿತು. ನಂತರ 2021 ನವೆಂಬರ್‌ನಲ್ಲಿ ಮತ್ತೆ ಕೋಲ್ಕತ್ತಾ ಹೈಕೋರ್ಟ್‌ಗೆ ವರ್ಗಾಯಿಸಲಾಗಿತ್ತು.

ಈವರೆಗೂ ಕೋಲ್ಕತ್ತಾ ಹೈಕೋರ್ಟ್‌ನ ಯಾವೊಬ್ಬ ನ್ಯಾಯಾಧೀಶರೂ ಕೂಡ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸಿಲ್ಲ. ಈ ಮೂಲಕ ಕೋಲ್ಕತ್ತಾ ಹೈಕೋರ್ಟ್‌ನ ನ್ಯಾಯಾಧೀಶರೊಬ್ಬರು ಮೊದಲ ಬಾರಿಗೆ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸಲಿದ್ದಾರೆ.


ಪುರಸಭೆ ಕಾರ್ಯಾಲಯ ಚಿಟಗುಪ್ಪ

ಸಂಖ್ಯೆ:ಪು.ಸ.ಚಿ/Health/Service/ಸಿಆರ್– /2024–25 ದಿನಾಂಕ: 13.03.2025

ಅಲ್ಪಾವಧಿ ಟೆಂಡರ್ ಪ್ರಕಟಣೆ

1) ಕಾಮಗಾರಿ/ಸರಕು/ಸೇವೆಯ ಸಂಖ್ಯೆ: DMA/2024-25/SE4422 (Call-2), 2) ಕಾಮಗಾರಿ/ಸರಕು/ಸೇವೆಯ ಅಂದಾಜು ಮೊತ್ತ: KPPP Portal, 3) ಗುತ್ತಿಗೆದಾರರ ಅರ್ಹತೆ ವಿವಿರ: Service Tender 4) ಕಾಮಗಾರಿ/ಸರಕು/ಸೇವೆಯ ಟೆಂಡರ್ ಮೊತ್ತದ ವಿವರ: KPPP Portal, 5) ಟೆಂಡರ್ ಅರ್ಜಿಯ ಭರ್ತಿ ಮತ್ತು ಇ.ಎಂ.ಡಿ ಮೊತ್ತದ ವಿವರ: KPPP Portal, 6) ಟೆಂಡರ್ ಫಾರಂ ಸಲ್ಲಿಸಲು ಅಂತಿಮ ದಿನಾಂಕ : 25.03.2025 16:20 ಗಂಟೆಗೆ, 7) ಟೆಂಡರ್ ತೆರೆಯುವ ದಿನಾಂಕ : 26.03.2025 17:21 ಗಂಟೆಗೆ, 8) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ದೂರವಾಣಿ ಸಂಖ್ಯೆ: ಮುಖ್ಯಾಧಿಕಾರಿ ಪುರಸಭೆ ಚಿಟಗುಪ್ಪಾ 08483–277536, 9) ಅಂತರಜಾಲದತಾಣದ ವಿಳಾಸ : https://kppp.karnataka.gov.in

ಸಹಿ/– ಮುಖ್ಯಾಧಿಕಾರಿ
ಪುರಸಭೆ ಚಿಟಗುಪ್ಪಾ

ವಾ.ಸಾ.ಸಂ.ಇ/ಬೀದರ/445/ಕೆ.ಎಸ್.ಎಂ.ಸಿ.&ಎ/2024–25



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.